ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 12 ಸಂಚಿಕೆ : 279

29–4–2025 ಮಂಗಳವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 279

## ರಾಜ್ಯದ 78938 ಹೆಕ್ಟೇರ್ ಪ್ರದೇಶದಲ್ಲಿ ಹನಿ ನೀರಾವರಿ ವ್ಯವಸ್ಥೆ: ತೋಟಗಾರಿಕಾ ಸಚಿವರು



ಕರ್ನಾಟಕ ರಾಜ್ಯವು 27.14 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕೆ ವಿಸ್ತೀರ್ಣ ವನ್ನು ಹೊಂದಿ ದ್ದು, ದೇಶದಲ್ಲಿ ಪ್ರಥಮ ಸ್ಥಾನ ದಲ್ಲಿದೆ ಎಂದು ತೋಟ ಗಾರಿಕಾ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್ ಅವರು ತಿಳಿಸಿದರು. ಬೆಂಗಳೂರಿನ ಗೃಹ ಕಚೇರಿಯಲ್ಲಿ ಮಾತನಾಡಿದರು.

ತೋಟಗಾರಿಕೆ ಇಲಾಖೆಯಲ್ಲಿ ಕಳೆದ ಎರಡು ವರ್ಷಗಳಲ್ಲಿ ಹಲವಾರು ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ.

ಪ್ಲಾಂಟೇಷನ್ ಬೆಳೆಗಳ ವಿಸ್ತೀರ್ಣ ಮತ್ತು ಉತ್ಪಾದನೆಯಲ್ಲಿ ಸಹ ರಾಜ್ಯವು ಮೊದಲನೇ ಸ್ಥಾನದಲ್ಲಿದೆ. ವಾಣಿಜ್ಯ ಪುಷ್ಪಗಳ ಉತ್ಪಾದನೆಯಲ್ಲಿ ಎರಡನೇ ಸ್ಥಾನ ಮತ್ತು ಸಾಂಬಾರು ಪದಾರ್ಥಗಳ ವಿಸ್ತೀರ್ಣ ಮತ್ತು ಉತ್ಪಾದನೆಯಲ್ಲಿ ಮೂರನೇ ಸ್ಥಾನದಲ್ಲಿದೆ ಎಂದರು.

ರಾಜ್ಯದ ತೋಟಗಾರಿಕಾ ಉತ್ಪಾದನೆ 223.18 ಲಕ್ಷ ಮೆಟ್ರಿಕ್ ಟನ್ ಮತ್ತು ಅದರ ಮೌಲ್ಯ ರೂ. 75,142 ಕೋಟಿ. ತೋಟಗಾರಿಕಾ ವಲಯವು ರಾಜ್ಯ ಜಿಡಿಪಿಗೆ 3.35% ರಷ್ಟು ಕೊಡುಗೆ ನೀಡುತ್ತಲಿದೆ ಎಂದು ತಿಳಿಸಿದ ಸಚಿವರು, ಕಳೆದ ಎರಡು ವರ್ಷಗಳಲ್ಲಿ ತೋಟಗಾರಿಕಾ ಇಲಾಖೆಯಿಂದ ಹಲವು ಸಾಧನೆಗಳನ್ನು ಮಾಡಲಾಗಿದೆ ಎಂದರು.

ಅಮೂಲ್ಯವಾದ ನೀರಿನ ಮಿತ ಬಳಕೆಯನ್ನು ಪ್ರೋತ್ಸಾಹಿಸಿ ಉತ್ಪಾದನೆಯನ್ನು ಹೆಚ್ಚಿಸಲು 78938 ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕೆ ಬೆಳೆಗಳಿಗೆ ಹನಿ ನೀರಾವರಿ ಅಳವಡಿಸಲಾಗಿದೆ. ಇದರಿಂದ 81,467 ರೈತರು ಲಾಭ ಪಡೆದಿರುತ್ತಾರೆ. ಹೊಸದಾಗಿ 70,007 ಹೆಕ್ಟೇರ್ ಗಳನ್ನು ತೋಟಗಾರಿಕೆ ಬೇಸಾಯಕ್ಕೆ ಅಳವಡಿಸಿ 1,22,926 ರೈತರಿಗೆ ನೆರವಾಗಿದೆ. ಮಳೆ ನೀರನ್ನು ಸಂರಕ್ಷಿಸಿ ಅಂತರ್ಜಲ ಮಟ್ಟವನ್ನು ವೃದ್ಧಿಸಲು 1976 ಕೃಷಿ ಹೊಂಡಗಳನ್ನು ನಿರ್ಮಿಸಲು 1656 ರೈತರಿಗೆ ಸಹಾಯಧನ ನೀಡಲಾಗಿದೆ.

ಅಧಿಕ ಇಳುವರಿ ಪಡೆಯುವ ಉದ್ದೇಶದಿಂದ 2626 ಹೆಕ್ಟೇರ್ ಪ್ರದೇಶದಲ್ಲಿ ಪಾಲಿಹೌಸ್, ನೆರಳು ಪರದೆ, ಭೂ ಹೊದಿಕೆ, ಪಕ್ಷಿ ನಿರೋಧಕ ಬಲೆ, ಇತ್ಯಾದಿ ಕ್ರಮಗಳಿಗಾಗಿ ಸಂರಕ್ಷಿತ ಬೇಸಾಯವನ್ನು ಪ್ರೋತ್ಸಾಹಿಸಿ 3151 ರೈತರಿಗೆ ನೆರವು ನೀಡಲಾಗಿದೆ. ತೋಟಗಾರಿಕೆ ಕ್ಷೇತ್ರದಲ್ಲಿ ಯಾಂತ್ರಿಕತೆಯನ್ನು ಉತ್ತೇಜಿಸಲು 20,866 ಫಲಾನುಭವಿಗಳಿಗೆ 19,863 ಯಂತ್ರೋಪಕರಣಗಳನ್ನು ಸಬ್ಸಿಡಿ ದರದಲ್ಲಿ ವಿತರಿಸಲಾಗಿದೆ. ತೋಟಗಾರಿಕೆ ಇಲಾಖೆಯ ಸಸ್ಯಾಗಾರಗಳಲ್ಲಿ 140 ಲಕ್ಷ ಉತ್ತಮ ಗುಣಮಟ್ಟದ ಕಸಿ/ಸಸಿಗಳನ್ನು ಉತ್ಪಾದಿಸಿ 1.68 ಲಕ್ಷ ರೈತರಿಗೆ ವಿತರಿಸಲಾಗಿದೆ. ತೋಟಗಾರಿಕೆ ಉತ್ಪನ್ನಗಳ ಕೊಯ್ಲೋತ್ತರ ನಿರ್ವಹಣೆ ಚಟುವಟಿಕೆಗಳಾದ ಹಣ್ಣು ಮಾಗಿಸುವ ಘಟಕ, ಪ್ಯಾಕ್‌ಹೌಸ್, ಪ್ರಾಥಮಿಕ ಸಂಸ್ಕರಣೆ, ಶೀತಲಗೃಹ, ಇತ್ಯಾದಿ 9800 ಮೂಲಸೌಕರ್ಯಗಳ ನಿರ್ಮಾಣಕ್ಕೆ 9267 ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿದೆ. 1057 ಟನ್ ಹಾಗೂ 1.12 ಲಕ್ಷ ಲೀಟರ್‌ಗಳಷ್ಟು ಜೈವಿಕ ಗೊಬ್ಬರ, ಜೈವಿಕ ನಿಯಂತ್ರಕಗಳು ಮತ್ತು ಎರೆಹುಳು ಗೊಬ್ಬರ ಉತ್ಪಾದಿಸಿ 24,093 ಸಂಖ್ಯೆ ರೈತರಿಗೆ / ಸಾರ್ವಜನಿಕರಿಗೆ ವಿತರಿಸಲಾಗಿದೆ. 1.12 ಲಕ್ಷ ಮಣ್ಣು, ನೀರು ಮತ್ತು ಎಲೆ ಮಾದರಿಗಳ ವಿಶ್ಲೇಷಣೆ ಮಾಡಿ ಕೊರತೆಯಿರುವ ಪೋಷಕಾಂಶ ಗಳನ್ನು ಒದಗಿಸಲು ರೈತರಿಗೆ ಶಿಫಾರಸ್ಸು ಮಾಡಲಾಗಿದೆ.

## ಮಾನಸಿಕ ಸ್ಥಿಮಿತ ಕಳೆದುಕೊಳ್ಳುತ್ತಿದ್ದಾರೆ

**ದೆಹಲಿ:** ಸಿಎಂ ಸಿದ್ದರಾಮಯ್ಯ ಮಾನಸಿಕ ಸ್ಥಿಮಿತ ಕಳೆದುಕೊಳ್ಳುತ್ತಿರುವಂತೆ ಕಾಣುತ್ತಿದೆ ಎಂದು ಮಾಜಿ ಸಿಎಂ ಜಗದೀಶ್ ಶೆಟ್ಟರ್ ಹೇಳಿದ್ದಾರೆ.



ಬೆಳಗಾವಿಯಲ್ಲಿ ಅವರು ಭಾಷಣ ಮಾಡುವಾಗ ಬಿಜೆಪಿಯ ಮಹಿಳಾ ಕಾರ್ಯಕರ್ತೆಯರು ಶಾಂತಿಯುತವಾಗಿ ಪ್ರತಿಭಟನೆ ಮಾಡಿದ್ದರಲ್ಲಿ ತಪ್ಪೇನಿದೆ? ಎಂದು ಜಗದೀಶ್ ಶೆಟ್ಟರ್ ಪ್ರಶ್ನಿಸಿದ್ದಾರೆ. ಪ್ರತಿಭಟನೆಯನ್ನು ಸಿಎಂ ಸಿದ್ದರಾಮಯ್ಯ ಸ್ಥಿತಪ್ರಜ್ಞರಾಗಿ ಸ್ವೀಕರಿಸಬೇಕಿತ್ತು, ಅದು ಬಿಟ್ಟು ಒಬ್ಬ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗೆ ಕಪಾಳ ಮೋಕ್ಷ ಮಾಡಲು ಮುಂದಾಗಿದ್ದು ಸಿಎಂ ಮಾನಸಿಕ ಸ್ಥಿಮಿತ ಕಳೆದುಕೊಳ್ಳುತ್ತಿರುವುದಕ್ಕೆ ಸಾಕ್ಷಿಯಾಗಿದೆ ಎಂದು ಶೆಟ್ಟರ್ ಹೇಳಿದ್ದಾರೆ.

## ಶ್ರೀ ಜಗಜ್ಯೋತಿ ಬಸವೇಶ್ವರರ ಜಯಂತಿ

**ಶಿವಮೊಗ್ಗ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಶ್ರೀ ಬಸವೇಶ್ವರ ವೀರಶೈವ ಸಮಾಜ ಸೇವಾ ಸಂಘ, ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಏಪ್ರಿಲ್ 30 ರ ಸಂಜೆ 5.30 ಕ್ಕೆ ಕುವೆಂಪು ರಂಗಮಂದಿರದಲ್ಲಿ ವಿಶ್ವಮಾನವ, ಮಹಾನ್ ಮಾನವತಾವಾದಿ, ಸಾಂಸ್ಕೃತಿಕ ನಾಯಕ, ಜಗಜ್ಯೋತಿ ಶ್ರೀ ಬಸವೇಶ್ವರರ ಜಯಂತಿ ಕಾರ್ಯಕ್ರಮ ಏರ್ಪಡಿಸಲಾಗಿದೆ.


ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವ ಎಸ್. ಮಧು ಬಂಗಾರಪ್ಪ ಇವರು ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಶಾಸಕ ಎಸ್.ಎನ್. ಚನ್ನಬಸಪ್ಪರವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವ ತಂಗಡಗಿ ಶಿವರಾಜ್ ಸಂಗಪ್ಪರವರು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರಲಿದ್ದಾರೆ.

ಕಾರ್ಯಕ್ರಮದಲ್ಲಿ ಸಂಸದರು, ವಿಧಾನಸಭಾ ಮತ್ತು ವಿಧಾನ ಪರಿಷತ್ ಶಾಸಕರು, ಪಾಲಿಕೆ ಮಹಾಪೌರರು, ಜನಪ್ರತಿನಿಧಿಗಳು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರಗಳ ಅಧ್ಯಕ್ಷರು, ಜಿಲ್ಲೆಯ ಎಲ್ಲಾ ಗೌರವಾನ್ವಿತ ಜನಪ್ರತಿನಿಧಿಗಳು, ಸರ್ಕಾರಿ ಅಧಿಕಾರಿಗಳು ಹಾಗೂ ಸಿಬ್ಬಂದಿವರ್ಗ ಮತ್ತು ವಿವಿಧ ಸಂಘಟನೆಗಳ ಮುಖಂಡರು, ಪದಾಧಿಕಾರಿಗಳು ಹಾಗೂ ಸದಸ್ಯರು, ಜಿಲ್ಲಾಧಿಕಾರಿಗಳು ಪಾಲ್ಗೊಳ್ಳುವರು.

# ಹಾಸ್ಟೆಲ್, ಅಂಗನವಾಡಿಗಳಿಗೆ ಸ್ವಸಹಾಯ ಗುಂಪುಗಳಿಂದ ಆಹಾರ ಪೂರೈಕೆ: ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ:** ಜಿಲ್ಲೆಯಲ್ಲಿರುವ ಹಾಸ್ಟೆಲ್ ಹಾಗೂ ಅಂಗನವಾಡಿ ಕೇಂದ್ರಗಳಿಗೆ ಬೇಕಾಗುವ ಆಹಾರ ಪದಾರ್ಥಗಳನ್ನು ಸ್ವಸಹಾಯ ಸಂಘಗಳಿಂದ ಪಡೆದುಕೊಳ್ಳಬೇಕೆಂದು ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ಸೋಮವಾರ(ಏ.28) ರಂದು ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ವತಿಯಿಂದ ಕಡ್ಲೇಬಾಳು ಗ್ರಾಮದ ಶ್ರೀಆಂಜನೇಯಸ್ವಾಮಿ ದೇವಸ್ಥಾನದ ಆವರಣದಲ್ಲಿ ಆಯೋಜಿಸಲಾಗಿದ್ದ ಹೊಂಬೆಳಕು ಸಂಜೀವಿನಿ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟದ ವಾರ್ಷಿಕ ಸಾಮಾನ್ಯ ಸಮಿತಿಯ ಮಹಾಸಭೆ ಮತ್ತು ಸರ್ಕಾರಿ ಯೋಜನೆಗಳ ಕುರಿತು ಮಹಿಳೆಯರೊಂದಿಗೆ ಸಂವಾದ ಹಾಗೂ ಕುಂದುಕೊರತೆಗಳ ಪರಿಶೀಲನಾ ಸಭೆಯನ್ನು ಉದ್ಘಾಟಿಸಿ ಮಾತಾನಾಡಿದರು.



ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿರ ಪಾತ್ರ ತುಂಬಾ ಇರುತ್ತದೆ. ಗರ್ಭಿಣಿ ಮಹಿಳೆಯರಿಗೆ ತಾಯಿ ಸ್ಥಾನವನ್ನು ನೀವು ತುಂಬುತ್ತಿರಿ, ಅವರಿಗೆ ಸಮಯಕ್ಕೆ ಸರಿಯಾಗಿ ಚಿಕಿತ್ಸೆ ಕೊಡಿಸಬೇಕು. ಸರಿಯಾದ ಸಮಯದಲ್ಲಿ ಅವರಿಗೆ ಆಸ್ಪತ್ರೆಗೆ ದಾಖಲಿಸುವ ವ್ಯವಸ್ಥೆಯನ್ನು ಮಾಡಿ ಸಾವಿನ ಪ್ರಮಾಣವನ್ನು ಕಡಿಮೆ ಮಾಡಬೇಕು. ಸ್ವಸಹಾಯ ಸಂಘಗಳು ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಬೆಳೆಯಬೇಕು. ಇದರಿಂದ ಆರ್ಥಿಕ ಸಬಲತೆಯಿಂದ ಶೋಷಣೆಯನ್ನು ಸಮರ್ಥವಾಗಿ ಎದುರಿಸಲು ಸಾಧ್ಯ ಎಂದರು.

ಕಡ್ಲೇಬಾಳು ಜನರು ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಸರ್ಕಾರದ ಸೌಲಭ್ಯವನ್ನು ಪಡೆಯಬೇಕು ಎಂದರು. ರಸ್ತೆ, ದೀಪ, ನೈರ್ಮಲ್ಯ, ನೀರಿನ ವ್ಯವಸ್ಥೆ ಮುಂತಾದವುಗಳ ಸ್ಥಾಪನೆ, ನಿರ್ವಹಣೆಗಳು ಕಡ್ಡಾಯವಾದ ಕರ್ತವ್ಯಗಳು. ಆದಾಯ ಹೆಚ್ಚಿಸುವಂಥ ಕೆರೆ ಬಾವಿಗಳ ನಿರ್ಮಾಣ, ಅರಣ್ಯ ಬೆಳವಣಿಗೆ ಮೊದಲಾದ ಕಾರ್ಯಕ್ರಮಗಳನ್ನೂ ಶಿಕ್ಷಣ, ವಸತಿ, ವಾಚನಾಲಯ, ಕ್ರೀಡಾಂಗಣ, ತೋಟಗಳು ಮುಂತಾದ ಸೌಕರ್ಯಗಳನ್ನು ಒದಗಿಸುವಂಥ ಯೋಜನೆಗಳನ್ನೂ ಪಂಚಾಯತಿಗಳು ಕೈಗೊಳ್ಳಬಹುದು.

ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಡಾ.ಸುರೇಶ್.ಬಿ.ಇಟ್ನಾಳ್ ಮಾತಾನಾಡಿ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಇದರ ಉದ್ದೇಶ ಬಡತನ ನಿರ್ಮೂನೆ ಮಾಡವಂತದ್ದು, ಗ್ರಾಮೀಣ ಪ್ರದೇಶದಲ್ಲಿರುವ ಮಹಿಳೆಯರ ಜೀವನವನ್ನು ಸುಧಾರಿಸಬೇಕು. ಅವರಿಗೆ ಶಿಕ್ಷಣ, ಆರ್ಥಿಕ ಸೌಲಭ್ಯವನ್ನು ಹೆಚ್ಚಿನ ಪ್ರಮಾಣದಲ್ಲಿ ನೀಡಬೇಕು. ಸ್ತ್ರೀ ಶಕ್ತಿ ಯೋಜನೆಯ ಸ್ಥಾಪನೆಯಾಗಿ 10 ವರ್ಷವಾಯಿತು. ಕಡ್ಲೆಬಾಳು ಗ್ರಾಮ ಪಂಚಾಯಿತಿಯಲ್ಲಿ 80 ಸ್ವಸಹಾಯ ಸಂಘ, 802 ಅಭ್ಯರ್ಥಿಗಳು ಜಿಎಫ್‌ಎಲ್ ಸೇರಿ–ಕೊಂಡಿದ್ದಾರೆ. ನಮ್ಮ ಜಿಲ್ಲೆಯಲ್ಲಿ 3.80 ಲಕ್ಷ ಮಹಿಳೆಯರು ಗೃಹ ಲಕ್ಷ್ಮೀ ಯೋಜನೆಯ ಲಾಭ ಪಡೆಯುತ್ತಿದ್ದಾರೆ. 2 ಲಕ್ಷ ಜನ ಎನ್ ಆರ್ ಎಲ್ ಎಂ ವ್ಯಾಪ್ತಿ ಬಿಟ್ಟು ಹೊರಗಡೆ ಇದ್ದಾರೆ. ಅವರು ಕೂಡ ಈ ವ್ಯಾಪ್ತಿಗೆ ಅದಷ್ಟು ತರಬೇಕು ಎಂದರು.

66 ಸ್ವಸಹಾಯ ಸಂಘಗಳಿಗೆ ಸುಮಾರು 36 ಲಕ್ಷ ಹಣವನ್ನು ನೀಡಿದ್ದೇವೆ. ಕಡ್ಲೇಬಾಳು ಸ್ವ–ಸಹಾಯ ಸಂಘದವರು ಇನ್ನೂ ಹೆಚ್ಚಿನ ಪ್ರಮಾಣದ ಉತ್ಪಾದನೆಯನ್ನು ಕೈಗೊಳ್ಳಬೇಕು ಎಂದರು.

ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷರಾದ ಪರಶುರಾಮ ಪ್ರಾಸ್ತಾವಿಕವಾಗಿ ಮಾತನಾಡಿದರು.

ಎಲ್ಲಾ ಇಲಾಖೆಯವರು ಪ್ರಗತಿ ವರದಿಯನ್ನು ನೀಡಿದರು. ಗರ್ಭಿಣಿ ಮಹಿಳೆಯರಿಗೆ ಶ್ರೀಮಂತ ಕಾರ್ಯವನ್ನು ನೆರವೇರಿಸಿದರು. ತೋಟಗಾರಿಕೆ ಇಲಾಖೆಯ ವತಿಯಿಂದ ಹಣ್ಣು ಮತ್ತು ತರಕಾರಿ ಬೀಜಗಳನ್ನು ವಿತರಣೆ ಮಾಡಲಾಯಿತು. ಹಾಗೂ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಡ್ಲೇಬಾಳು ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಭರಮಕ್ಕ ಪರಸಪ್ಪನವರು ವಹಿಸಿದ್ದರು.

## ಕೆರೆಗಳ ಒತ್ತುವರಿ ತೆರವಿಗೆ ಶೀಘ್ರ ಕ್ರಮ: ಕಟಾರಿಯಾ

**ಚಿಕ್ಕಮಗಳೂರು ಏ.28:** ಜಿಲ್ಲೆಯಲ್ಲಿ ಕೆರೆಗಳ ಸರ್ವೆ ಕಾರ್ಯ ನಡೆಸಿ ಒತ್ತುವರಿಯಾಗಿರುವ ಕೆರೆಗಳನ್ನು ತೆರವುಗೊಳಿಸುವಂತೆ ಹಲವಾರು ಬಾರಿ ತಿಳಿಸಿದ್ದರೂ ಇದುವರೆಗೂ ಕೆರೆಗಳ ಒತ್ತುವರಿ ತೆರವುಗೊಳಿಸಿಲ್ಲ, ಒತ್ತುವರಿ ತೆರವುಗೊಳಿಸಲು ಕೂಡಲೇ ಕ್ರಮ ವಹಿಸುವಂತೆ ಕಂದಾಯ ಇಲಾಖೆ ಪ್ರಧಾನ ಕಾರ್ಯದರ್ಶಿಗಳು ಹಾಗೂ ಚಿಕ್ಕಮಗಳೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಾಜೇಂದ್ರ ಕುಮಾರ್ ಕಟಾರಿಯಾ ಸಂಬಂಧಿಸಿದ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.



ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಇಂದು ಜಿಲ್ಲೆಯ ಸಮಗ್ರ ಅಭಿವೃದ್ಧಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಮೀನಾ ನಾಗರಾಜ್ ಮಾತನಾಡಿ, ಕಂದಾಯ, ಸಣ್ಣ ನೀರಾವರಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸೇರಿದ 1.810 ಕೆರೆಗಳಿದ್ದು ಈಗಾಗಲೇ 1.744 ಕೆರೆಗಳ ಸರ್ವೆ ಕಾರ್ಯ ಪೂರ್ಣಗೊಂಡಿದೆ ,ಇನ್ನು 66 ಕೆರೆಗಳು ಅಳತೆಯಾಗಬೇಕಾಗಿದ್ದು, 777 ಕೆರೆಗಳ ಒತ್ತುವರಿಯನ್ನು ಗುರುತಿಸಲಾಗಿದೆ. ಇವುಗಳಲ್ಲಿ 301 ಕೆರೆಗಳ ಒತ್ತುವರಿಯನ್ನು ತೆರವುಗೊಳಿಸಲಾಗಿದೆ. ಒತ್ತುವರಿ ತೆರವುಗೊಳಿಸಲು ಇನ್ನೂ 476 ಕೆರೆಗಳು ಬಾಕಿಯಿವೆ ಎಂದ ಅವರು, ಸಣ್ಣ ನೀರಾವರಿ ಇಲಾಖೆ ವ್ಯಾಪ್ತಿಯಲ್ಲಿ 124 ಕೆರೆಗಳಿದ್ದು ಈ ಪೈಕಿ 34 ಕೆರೆಗಳು ಹಿಡುವಳಿ, ಅರಣ್ಯ, ಗೋಮಾಳ ಜಮೀನಿನಲ್ಲಿವೆ. ಪಿ.ಆರ್.ಇ.ಡಿ. ವ್ಯಾಪ್ತಿಯಲ್ಲಿ 880 ಕೆರೆಗಳಿದ್ದು 876 ಕೆರೆಗಳ ಸರ್ವೆ ಕಾರ್ಯ ಮುಗಿದಿದ್ದು, ಇನ್ನು 4 ಕೆರೆಗಳ ಸರ್ವೇ ಕಾರ್ಯ ಬಾಕಿಯಿದೆ. 356 ಕೆರೆಗಳು ಒತ್ತುವರಿಯಾಗಿದ್ದು, 184 ಕೆರೆಗಳಒತ್ತುವರಿಯನ್ನುತೆರವುಗೊಳಿಸಲಾಗಿದೆ. ಇನ್ನೂ 172 ಕೆರೆಗಳು ಒತ್ತುವರಿ ತೆರವುಗೊಳಿಸಲು ಬಾಕಿಯಿವೆ. ಗ್ರಾಮ ಪಂಚಾಯಿತಿಯಲ್ಲಿ ಒಟ್ಟು 834 ಕೆರೆಗಳಿದ್ದು, ಅವುಗಳಲ್ಲಿ ಅಳತೆಯಾಗಿರುವ ಕೆರೆಗಳು 785, ಅಳತೆ ಮಾಡಲು ಬಾಕಿ ಇರುವ ಕೆರೆಗಳು 49, ಒತ್ತುವರಿ ಗುರುತಿಸಿದ ಕೆರೆಗಳು 379, ಒತ್ತುವರಿ ತೆರವುಗೊಳಿಸಿರುವ ಕೆರೆಗಳು 103, ಒತ್ತುವರಿ ತೆರವುಗೊಳಿಸಲು ಬಾಕಿ ಇರುವ ಕೆರೆಗಳು 276. ಈ ಕೆರೆಗಳ ಒತ್ತುವರಿಯನ್ನು ಶೀಘ್ರದಲ್ಲೇ ತೆರವುಗೊಳಿಸಲಾಗುವುದು ಎಂದರು.

ರೈತರು ತೋಟಗಾರಿಕೆ ಬೆಳೆಗಳನ್ನು ಬೆಳೆಯುವ ಸಂಬಂಧ ಅರಿವು ಮೂಡಿಸುವಂತೆ ಸೂಚಿಸಲಾಗಿತ್ತು, ಜಿಲ್ಲೆಯಲ್ಲಿ ತೋಟಗಾರಿ–ಕೆ ಬೆಳೆಗಳನ್ನು ಬೆಳೆಯಲು ವಿಫುಲ ಅವಕಾಶಗಳಿದ್ದು, ರೈತರಿಗೆ ತರಬೇತಿ ನೀಡುವಂತೆ ತಿಳಿಸಿದರು. ತೋಟಗಾರಿ–ಕೆ ಇಲಾಖೆ ಉಪನಿರ್ದೇಶಕಿ ಪೂರ್ಣಿಮಾ ಸಭೆಗೆ ಮಾಹಿತಿ ನೀಡಿ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ, ಕೊಪ್ಪಳಕ್ಕೆ ರೈತರನ್ನು ಅಧ್ಯಯನಕ್ಕಾಗಿ ಕರೆದುಕೊಂಡು ಹೋಗಿ ಬರಲಾಗಿದೆ ಎಂದರು.

ಜಿಲ್ಲೆಯಲ್ಲಿ ಉತ್ತಮ ಮಳೆಯಾಗುತ್ತಿದ್ದು, ರೈತರು ಬಿತ್ತನೆಗೆ ಭೂಮಿಯನ್ನು ಹದ ಮಾಡಿಕೊಳ್ಳುತ್ತಿದ್ದಾರೆ. ಬಿತ್ತನೆ ಬೀಜ ಮತ್ತು ರಸಗೊಬ್ಬರಕ್ಕೆ ಯಾವುದೇ ಕೊರತೆ ಇರುವುದಿಲ್ಲ ಎಂದು ಕೃಷಿ ಜಂಟಿ ನಿರ್ದೇಶಕಿ ಸುಜಾತ ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಯಾವುದೇ ಸಮಸ್ಯೆಯಾಗದಂತೆ ಕ್ರಮ ವಹಿಸಲು ಸೂಚಿಸಿದರು. ತರೀಕೆರೆ ತಾಲ್ಲೂಕಿನ ಬೇಗೂರು, ಮಲ್ಲೇನಹಳ್ಳಿ ಸೇರಿದಂತೆ ಏಳು ಗ್ರಾಮಗಳಲ್ಲಿ ಬೋರ್‌ವೆಲ್ ಕೊರೆದು ನೀರು ಸರಬರಾಜು ಮಾಡಲಾಗುತ್ತಿದೆ ಎಂದು ಪಿ.ಆರ್.ಇ.ಡಿ. ಇಂಜಿನಿಯರ್ ತಿಳಿಸಿದರು. ಎಲ್ಲಾ ಇಲಾಖೆಗಳು ಕೂಡ ಇ–ಕಚೇರಿ ಮುಖಾಂತರ ಕಾರ್ಯ ನಿರ್ವಹಿಸಬೇಕು. ಚಿಕ್ಕಮಗಳೂರು ಜಿಲ್ಲೆ ಪೈಲೆಟ್ ಜಿಲ್ಲೆಯಾಗಿರುವುದರಿಂದ ಇತರ ಜಿಲ್ಲೆಗಳಿಗೆ ಮಾದರಿಯಾಗಬೇಕೆಂದು ಎಂದು ಹೇಳಿದರು.

## ಪ್ರತಿ ಮನೆ ಭೇಟಿ ನೀಡಿ ನಿಗದಿತ ವೇಳೆಯೊಳಗೆ ಒಳಮೀಸಲಾತಿ ಸಮೀಕ್ಷೆ ಪೂರ್ಣಗೊಳಿಸಿ : ಡಿಸಿ



**ಶಿವಮೊಗ್ಗ :** ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಕುರಿತಾದ ಸಮೀಕ್ಷೆಯು ಸರ್ಕಾರದ ಆದ್ಯತೆಯ ಸಮೀಕ್ಷೆಯಾಗಿದ್ದು ಸಮೀಕ್ಷೆದಾರರು ಇದನ್ನು ಗಂಭೀರವಾಗಿ ಪರಿಗಣಿಸಿ, ಪ್ರತಿ ಮನೆ ಮನೆಗೆ ತೆರಳಿ ಕೈಗೊಂಡು ನಿಗದಿತ ವೇಳೆಯೊಳಗೆ ಈ ಸಮೀಕ್ಷೆಯನ್ನು ಪೂರೈಸಬೇಕು ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಶಿವಮೊಗ್ಗ ಇವರ ಸಂಯುಕ್ತಾಶ್ರಯದಲ್ಲಿ ಸೋಮವಾರ ಜಿ.ಪಂ ಸಭಾಂಗಣದಲ್ಲಿ ನ್ಯಾಯಮೂರ್ತಿ ಹೆಚ್ ಎನ್ ನಾಗಮೋಹನ್‌ದಾಸ್ ರವರ ಏಕಸದಸ್ಯ ವಿಚಾರಣಾ ಆಯೋಗದ ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಕುರಿತು ಸಮೀಕ್ಷೆ ನಡೆಸುವ ಕಾರ್ಯಕ್ಕೆ ತಾಲ್ಲೂಕು ಮಟ್ಟದ ಮಾಸ್ಟರ್ ಟ್ರೈನರ್‌ಗಳಿಗೆ ಏರ್ಪಡಿಸಲಾಗಿದ್ದ ತರಬೇತಿ ಕಾರ್ಯಾಗಾರದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.


ಪರಿಶಿಷ್ಟ ಜಾತಿಗಳ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸ್ಥಿತಿಗತಿಗಳ ವಿಶ್ಲೇಷಣೆ ಮಾಡಿ ಒಳ ಮೀಸಲಾತಿ ವರ್ಗೀಕರಣ ಮಾಡಿ ಸರ್ಕಾರಕ್ಕೆ ಶಿಫಾರಸು ಮಾಡುವ ಜವಾಬ್ದಾರಿಯನ್ನು ಆಯೋಗವು ಹೊಂದಿದ್ದು, ಈ ಉದ್ದೇಶಕ್ಕಾಗಿ ಸರ್ಕಾರ ಪರಿಶಿಷ್ಟ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಸಮಾಜ ಕಲ್ಯಾಣ ಇಲಾಖೆಯ ಮೂಲಕ ಕೈಗೊಳ್ಳುತ್ತಿದೆ.

ಈ ಸಮೀಕ್ಷೆಯು ಸೂಕ್ಷ್ಮತೆಯಿಂದ ಕೂಡಿದ್ದು ಒಂದೊಂದು ತಾಲ್ಲೂಕಿನಲ್ಲಿಯೂ ಸಮೀಕ್ಷೆ ಅನುಭವ ಭಿನ್ನವಾಗಿರಬಹುದು. ಯಾವುದೇ ಸಮಸ್ಯೆಗಳಿಗೆ ಎಡೆ ಮಾಡದಂತೆ ಸಮೀಕ್ಷೆ ನಡೆಸಬೇಕು. ತೀರ್ಥಹಳ್ಳಿ, ಹೊಸನಗರ ತಾಲ್ಲೂಕು ಹೊರತುಪಡಿಸಿ ಉಳಿದ ತಾಲ್ಲೂಕುಗಳಲ್ಲಿ ಪರಿಶಿಷ್ಟ ಜಾತಿ ಜನಸಂಖ್ಯೆ ಸಾಕಷ್ಟು ಇದ್ದು ಎಲ್ಲ ಮನೆ ಮನೆಗಳಿಗೆ ಭೇಟಿ ನೀಡಿ, ನಿಗದಿತ ನಮೂನೆಯಲ್ಲಿ ಕೇಳಲಾದ ಮಾಹಿತಿಯನ್ನು ಸಂಗ್ರಹಿಸಬೇಕು. ಗಂಭೀರವಾಗಿ ಈ ಕಾರ್ಯ ಕೈಗೊಂಡು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು. ಇನ್ನೊಂದು ಹಂತದ ತರಬೇತಿ ಹಾಗೂ ಮಾಕ್ ಟ್ರಯಲ್ ಇದ್ದು ಅಲ್ಲಿ ಸಮೀಕ್ಷೆದಾರರು ಯಾವುದೇ ರೀತಿಯ ಸಂದೇಹಗಳಿದ್ದರೆ ಬಗೆಹರಿಸಿಕೊಳ್ಳಬಹುದು ಎಂದರು.

ಕ್ಷೇತ್ರ ಸಂಪನ್ಮೂಲ ವ್ಯಕ್ತಿಯಾದ ಅಶೋಕ್ ಪಾಟೀಲ್ ಎಂ ಇವರು, ಪಿಪಿಟಿ ಪ್ರದರ್ಶನದ ಮೂಲಕ ಸಮೀಕ್ಷೆ ನಡೆಸುವ ಬಗೆಯನ್ನು ವಿವರಿಸಿದರು.

## ‘ಅಲ್ಲಿ ನನಗೆ ಯಾರೂ ಇಲ್ಲ’: 35 ವರ್ಷಗಳಿಂದ ಭಾರತದಲ್ಲಿ ವಾಸ, ಪಾಕ್ ಮಹಿಳೆಗೆ ವಾಪಸ್ ಹೋಗಲು ಸೂಚನೆ

**ನವದೆಹಲಿ:** 35 ವರ್ಷಗಳಿಗೂ ಹೆಚ್ಚು ಕಾಲ ಭಾರತದಲ್ಲಿ ವಾಸಿಸುತ್ತಿರುವ ಪಾಕಿಸ್ತಾನಿ ಪ್ರಜೆ ಶಾರದಾ ಬಾಯಿ ಅವರಿಗೆ ತಕ್ಷಣವೇ ಭಾರತ ಬಿಟ್ಟು ಹೋಗುವಂತೆ ಒಡಿಶಾ ಪೊಲೀಸರು ಸೂಚಿಸಿದ್ದಾರೆ. ಶಾರದಾ ಬಾಯಿ ಅವರ ವೀಸಾವನ್ನು ರದ್ದುಗೊಳಿಸಲಾಗಿದೆ ಮತ್ತು ಅವರು ತಡ ಮಾಡದೆಯೇ ಪಾಕಿಸ್ತಾನಕ್ಕೆ ಮರಳಲು ಸೂಚಿಸಲಾಗಿದೆ ಎಂದು ಅಧಿಕಾರಿಗಳು ದೃಢಪಡಿಸಿದ್ದಾರೆ. ಒಂದು ವೇಳೆ ಅವರು



ಶಾರದಾ ಬಾಯಿ

ಈ ಆದೇಶವನ್ನು ಪಾಲಿಸದಿದ್ದರೆ, ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ಎಚ್ಚರಿಸಿದ್ದಾರೆ.


ಏಪ್ರಿಲ್ 22ರಂದು ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭೀಕರ ಉಗ್ರದಾಳಿಯ ನಂತರ ಕೇಂದ್ರ ಸರ್ಕಾರ ಹಲವಾರು ಕ್ರಮಗಳನ್ನು ಕೈಗೊಂಡಿದ್ದು, ದೇಶದಲ್ಲಿರುವ ಪಾಕಿಸ್ತಾನ ಪ್ರಜೆಗಳು ಪಾಕಿಸ್ತಾನಕ್ಕೆ ಮರಳುವಂತೆ ಸೂಚಿಸಲಾಗಿದೆ.

ಹಲವಾರು ವರ್ಷಗಳ ಹಿಂದೆ ಬೋಲಂಗೀರ್‌ನ ಹಿಂದೂ ಕುಟುಂಬದ ಮಹೇಶ್ ಕುಕ್ರೇಜಾ ಎಂಬುವವರನ್ನು ಶಾರದಾ ಬಾಯಿ ವಿವಾಹವಾಗಿದ್ದರು. ದಂಪತಿಗೆ ಮಗ ಮತ್ತು ಮಗಳು ಇದ್ದಾ–ರೆ. ಮತದಾರರ ಗುರುತಿನ ಚೀಟಿ ಸೇರಿದಂತೆ ಎಲ್ಲ ಪ್ರಮುಖ ದಾಖಲೆಗಳನ್ನು ಹೊಂದಿದ್ದರೂ, ಅವರಿಗೆ ಭಾರತೀಯ ಪೌರತ್ವ ನೀಡಿಲ್ಲ. ಸರ್ಕಾರ ತನ್ನನ್ನು ತನ್ನ ಕುಟುಂಬದಿಂದ ಬೇರ್ಪಡಿಸಬಾರದು. ಮೂರು ದಶಕಗಳಿಗೂ ಹೆಚ್ಚು ಕಾಲ ತಾನು ಭಾರತದಲ್ಲೇ ವಾಸಿಸುತ್ತಿದ್ದು, ಈಗಲೂ ಇಲ್ಲೇ ವಾಸಿಸಲು ಅವಕಾಶ ನೀಡುವಂತೆ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

# ಮೇ.4ರಂದು ಧುರೀಣ ಎನ್.ಜಿ.ನಾಗನಗೌಡರ ಸಹಸ್ರ ಚಂದ್ರ ದರ್ಶನ, ಅಭಿನಂದನಾ ಸಮಾರಂಭ ಹಾಗೂ ಗ್ರಂಥ ಬಿಡುಗಡೆ

**ಹರಿಹರ:** ಮೇ.4ರಂದು ಧುರೀಣ ಎನ್.ಜಿ.ನಾಗನಗೌಡರ ಸಹಸ್ರ ಚಂದ್ರ ದರ್ಶನ, ಅಭಿನಂದನಾ ಸಮಾರಂಭ ಹಾಗು ಅಭಿನಂದನಾ ಗ್ರಂಥ ಜನ ಮುಖಿ ಸೇವಾ ಸುಖಿ ಬಿಡುಗಡೆ ಕಾರ್ಯಕ್ರಮ ಅದ್ದೂರಿ ಯಾಗಿ ನಡೆಯಲಿದೆ ಎಂದು ಎನ್.ಜಿ.ನಾಗನಗೌಡ್ರ ಅಭಿಮಾನಿ ಬಳಗದ ಅಧ್ಯಕ್ಷ ಹಾಗು ಹಿರಿಯರಾದ ಜಿ.ನಂದಿ ಗೌಡ್ರು ತಿಳಿಸಿದರು.

ನಗರದ ಎಪಿಎಂಸಿ ಆವರಣದಲ್ಲಿರುವ ಯುವ ಮುಖಂಡ ಚಂದ್ರಶೇಖರ್ ಪೂಜಾರ್ ರವರ ಕಚೇರಿಯಲ್ಲಿ ನಡೆಸಿದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು, ಹರಿಹರ ತಾಲೂಕಿನ ಧೀಮಂತ ನಾಯಕ, ಸೇವಾ ಧುರೀಣ, ಅಜಾತಶತ್ರು ಎಂದೇ ಖ್ಯಾತಿ ಹೊಂದಿರುವ ಹಿರಿಯ ನಾಯಕರಾದ ಎನ್.ಜಿ.ನಾಗನಗೌಡ್ರಿಗೆ 83 ವರ್ಷ ತುಂಬಿ 84ಕ್ಕೆ ಕಾಲಿಡುತ್ತಿರುವ ಸುಸಂದರ್ಭದಲ್ಲಿ ಸಹಸ್ರ ಚಂದ್ರದರ್ಶನ, ಅಭಿನಂದನಾ ಸಮಾರಂಭ ಹಾಗು ಗ್ರಂಥ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.



ಮೇ.4 ರಂದು ಬೆಳಗ್ಗೆ 10:30ಕ್ಕೆ ತಾಲೂಕಿನ ಹೊಳೆಸಿರಿಗೇರೆ ಗ್ರಾಮದ ಶ್ರೀ ಕಲ್ಲೇಶ್ವರ ಸಮುದಾಯ ಭವನದಲ್ಲಿ ಅಭಿಮಾನಿ ಬಳಗದಿಂದ ಹಮ್ಮಿಕೊಳ್ಳಲಾಗಿದೆ. ಗ್ರಾಮೀಣ ಪ್ರದೇಶದಲ್ಲಿ ಬಡವರು ದೀನದಲಿತರು ಗಳಿಗೆ ತೊಂದರೆಯಾದಾಗ ತ್ಯಾಗ ಮನೋಭಾವದಿಂದ ಎಲ್ಲರನ್ನೂ ಬೆಳೆಸುವ ಕೆಲಸ ಮಾಡಿರುವ ಧೀಮಂತ ನಾಯಕ ನಾಗನಗೌಡ್ರಿಗೆ ಗೌರವ ತೋರುವ ನಿಟ್ಟಿನಲ್ಲಿ ಕಾರ್ಯಕ್ರಮ ಆಯೋಜಿಸಿದ್ದೇವೆ.

ಈಗಾಗಲೇ ಈ ಕಾರ್ಯಕ್ರಮಕ್ಕೆ 13 ಸಾವಿರಕ್ಕೂ ಹೆಚ್ಚು ಆಹ್ವಾನ ಪತ್ರಿಕೆಗಳನ್ನು ತಾಲೂಕು ಹಾಗೂ ಜಿಲ್ಲೆಯ್ಯಾದ್ಯಂತ ಹಂಚಿಕೆ ಮಾಡಲಾಗಿದೆ.ಸುಮಾರು 10 ಸಾವಿರಕ್ಕೂ ಹೆಚ್ಚು ಅಭಿಮಾನಿಗಳು ಸೇರುವ ನಿರೀಕ್ಷೆ ಇದೆ ಅವರೆಲ್ಲರಿಗೂ ಊಟದ ವ್ಯವಸ್ಥೆ ಮಾಡ ಲಾಗಿದೆ. ಬಹಳಷ್ಟು ಜನ ಸೇರುವ ಕಾರಣಕ್ಕಾಗಿ ಕಾರ್ಯಕ್ರಮ ನಡೆಯುವ ಸಮುದಾಯ ಭವನದ ಸುತ್ತಲೂ ಪೆಂಡಾಲ್ ವ್ಯವಸ್ಥೆ ಮಾಡಲಾಗಿತ್ತು ಎಲ್‌ಇಡಿ ಟಿವಿ ಗಳ ವ್ಯವಸ್ಥೆ ಮಾಡಲಾಗಿದೆ. ಒಂದೊಳ್ಳೆ ಕಾರ್ಯಕ್ರಮವನ್ನು ಆಯೋಜಿಸುತ್ತಿದ್ದು ಗೌಡ್ರ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಶ್ರೀ ಎನ್.ಜಿ.ನಾಗನಗೌಡರ ಅಭಿಮಾನಿ ಬಳಗದ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ್ ಪೂಜಾರ್ ಮಾತನಾಡಿ, ಕಾರ್ಯಕ್ರಮದಲ್ಲಿ ನಾಡಿನ ಸ್ವಾಮೀಜಿಗಳು ದಿವ್ಯ ಸಾನಿಧ್ಯ ವಹಿಸುವರು ಅವರುಗಳಲ್ಲಿ ಸಾಣೇಹಳ್ಳಿ,ತರಳಬಾಳು ಶಾಖಾ ಮಠದ ಪ॥ಪೂ॥ ಶ್ರೀ ಡಾ. ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮಿಗಳು,ಸಾಗರ ತಾಲ್ಲೂಕು, ವೀರಾಪುರ ಹಿರೇಮಠದ ಪ,ಪೂ॥ ಶ್ರೀ ಷ. ಬ್ರ. ಡಾ.ಮರುಳಸಿದ್ದ ಪಂಡಿತಾರಾಧ್ಯ ಶಿವಾಚಾ ರ್ಯ ಸ್ವಾಮಿಗಳು,ಕಾಗಿನೆಲೆ ಮಹಾ ಸಂಸ್ಥಾನ,ಶ್ರೀ ಕನಕಗುರುಪೀಠ ದ ಪ॥ಪೂ॥ ಶ್ರೀ ಡಾ.ನಿರಂಜನಾ ನಂದಪುರಿ ಸ್ವಾಮಿಗಳು, ರಾಜನ ಹಳ್ಳಿ,ಶ್ರೀ ವಾಲ್ಮೀಕಿ ಗುರುಪೀಠದ ಪ॥ಪೂ॥ ಶ್ರೀ ಡಾ.ವಾಲ್ಮೀಕಿ ಪ್ರಸನ್ನಾನಂದ ಸ್ವಾಮಿಗಳು, ನಂದಿಗುಡಿ, ಶ್ರೀ ವೃಷಭಪುರಿ ಸಂಸ್ಥಾನ ಬೃಹನ್ಮಠದ ಪ॥ಪೂ॥ ಶ್ರೀ ಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿ ಗಳು, ಸುಕ್ಷೇತ್ರ ಎರೇ ಹೊಸಹಳ್ಳಿ,ಮಹಾಯೋಗಿ ವೇಮನ ಗುರು ಪೀಠದ ಪ॥ಪೂ॥ ಶ್ರೀ ಶ್ರೀ ವೇಮನಾನಂದ ಸ್ವಾಮಿಗಳು, ರಟ್ಟಿಹಳ್ಳಿ, ಕಬ್ಬಿಣ ಕಂತಿಮಠದ ಪ॥ಪೂ॥ ಶ್ರೀ ಷ॥ ಬ್ರ॥ ಶಿವಲಿಂಗ ಶಿವಾಚಾ ರ್ಯ ಸ್ವಾಮಿಗಳ ು,ಹರಪನಹಳ್ಳಿ,ತೆಗ್ಗಿನಮಠ ಸಂಸ್ಥಾನದ ಅಧ್ಯಕ್ಷ ರಾದ ಪ॥ಪೂ॥ ಶ್ರೀ ಷ॥ ಬ್ರ॥ ವರಸದ್ಯೋಜಾತ ಶಿವಾಚಾರ್ಯ ಸ್ವಾಮಿಗಳು,ಹರಿಹರದ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದ ಪ॥ಪೂ॥ ಶ್ರೀ ಶ್ರೀ ಶಾರದೇಶಾನಂದ ಸ್ವಾಮಿಗಳು,ಯಲವಟ್ಟಿ ಶ್ರೀಗುರುಸಿದ್ಧಾಶ್ರಮ ದ ಪ॥ಪೂ॥ ಶ್ರೀ ಶ್ರೀ ಯೋಗಾನಂದ ಸ್ವಾಮಿ ಗಳವರ ದಿವ್ಯ ಸಾನಿಧ್ಯದಲ್ಲಿ ನಡೆಯುವ ಕಾರ್ಯಕ್ರಮದ ಅಧ್ಯಕ್ಷತೆ ಯನ್ನು ಸ್ವಾಗತ ಸಮಿತಿಯ ಅಧ್ಯಕ್ಷರು ಹಾಗೂ ಹಿರಿಯರಾದ ಜಿ. ನಂದಿಗೌಡ್ರು ವಹಿಸಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ಮಾಜಿ ಸಚಿವ ಎಸ್.ಎ.ರವೀಂದ್ರನಾಥ ನೆರವೇರಿಸಲಿದ್ದಾರೆ.

ಇದೇ ವೇಳೆ ಎನ್.ಜಿ.ನಾಗನಗೌಡರ ಅಭಿನಂದನಾ ಗ್ರಂಥ “ಜನ ಮುಡಿ ಸೇವಾ ಸುಖಿ” ಗ್ರಂಥವನ್ನು ಹರಿಹರದ ಶ್ರೀ ವೀರಶೈವ ಲಿಂಗಾಯತ ಪಂಚಮಸಾಲಿ ಜಗದ್ಗುರು ಪೀಠದ ಪೀಠಾಧಿಪತಿ ಗಳಾದ ಪ॥ಪೂ॥ ಶ್ರೀ ವಚನಾನಂದ ಸ್ವಾಮಿಗಳು ಬಿಡುಗಡೆ ಮಾಡುವರು.ಮುಖ್ಯ ಅತಿಥಿಗಳಾಗಿ ತೋಟಗಾರಿಕೆ,ಗಣಿ,ಭೂ ವಿಜ್ಞಾನ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್, ಸಂಸದೆ ಡಾ.ಪ್ರಭಾ ಮಲ್ಲಕಾರ್ಜುನ್, ಮಾಜಿ ಕೇಂದ್ರ ಸಚಿವ ಜಿ.ಎಂ.ಸಿದ್ದೇಶ್ವರ, ಶಾಸಕರುಗಳಾದ ಬಿ.ಪಿ. ಹರೀಶ್, ಡಿ.ಜಿ.ಶಾಂತನಗೌಡ್ರು, ಮಾಜಿ ಶಾಸಕರುಗಳಾದ ಹೆಚ್.ಎಸ್.ಶಿವಶಂಕರ್,ಎಸ್.ರಾಮಪ್ಪ, ಮಾಡಾಳ್ ವಿರೂಪಾಕ್ಷಪ್ಪ,ಮಾಜಿ ಸಚಿವ ಎಂ.ಪಿ.ರೇಣುಕಾ ಚಾರ್ಯ,ದಾವಣಗೆರೆಯ ಜವಳಿ ಉದ್ಯಮಿ ಬಿ.ಸಿ. ಉಮಾಪತಿ ಮುಂತಾದವರು ಆಗಮಿಸುವರು.

ಅಭಿನಂದನಾ ಗ್ರಂಥದ ಪ್ರಧಾನ ಸಂಪಾದಕ ಪ್ರೊ.ಎಚ್.ಎ.ಭಿಕ್ಷಾ ವರ್ತಿಮಠರವರು ಗ್ರಂಥದ ಕುರಿತು ಮಾತನಾಡುವರು, ಕಾರ್ಯ ಕ್ರಮದ ಪ್ರಸ್ತಾವನೆಯನ್ನು ಸಂಪಾದಕ ಪ್ರೊ.ಸಿ.ವಿ.ಪಾಟೀಲ್ ಮಾಡಲಿದ್ದು, ಅಭಿನಂದನಾ ನುಡಿ ಸಮರ್ಪಣೆಯನ್ನು ಸಂಚಾಲಕ ಎಸ್.ಹೆಚ್. ಹೂಗಾರ್ ಮಾಡುವರು ಎಂಬ ಕಾರ್ಯಕ್ರಮದ ಸಂಪೂರ್ಣ ಮಾಹಿತಿಯನ್ನು ನೀಡಿದರು.

ಸುದ್ದಿಗೋಷ್ಠಿಯಲ್ಲಿ ಅಭಿನಂದನಾ ಗ್ರಂಥದ ಪ್ರಧಾನ ಸಂಪಾದಕ ಪ್ರೋ,ಎಚ್.ಎ.ಭಿಕ್ಷಾವರ್ತಿಮಠ, ಸಂಪಾದಕ ಪ್ರೋ,ಸಿ.ವಿ. ಪಾಟೀಲ್ , ಸಂಚಾಲಕ ಎಸ್.ಹೆಚ್.ಹೂಗಾರ್,ಪತ್ರಕರ್ತ ಜಿಗಳಿ ಪ್ರಕಾಶ್ ಮುಂತಾದವರು ಉಪಸ್ಥಿತರಿದ್ದರು.

# ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇಂದು ನೀವು ಪ್ರಮುಖ ನಿರ್ಧಾರ ಕೈಗೊಳ್ಳಬೇಕು ಇದು ನಿಮ್ಮನ್ನು ಒತ್ತಡ ಹಾಗೂ ಉದ್ವೇಗಕ್ಕೆ ಒಳಪಡಿಸುತ್ತದೆ. ನಿಮ್ಮ ಅವಾಸ್ತವಿಕ ಯೋಜನೆ ಹಣದ ಕೆಣಟಿಜಜಜಿಟಿಜಜರತೆಗೆ ಕಾರಣವಾಗುತ್ತದೆ. ನಿಮ್ಮ ನಾಲಗೆ ನಿಮ್ಮ ಅಜ್ಜ ಅಜ್ಜಿಯಂದಿರ ಭಾವನೆಗಳಿಗೆ ಘಾಸಿ ಮಾಡುವುದರಿಂದ ನಿಮ್ಮ ಭಾಷೆಯನ್ನು ನಿಯಂತ್ರಿಸಿ. ಹರಟೆ ನಿಮ್ಮ ಸಮಯ ವ್ಯರ್ಥ ಮಾಡುವುದಕ್ಕಿಂತ ಸುಮ್ಮನಿರುವುದು ಉತ್ತಮ. ನಾವು ಬುದ್ಧಿವಂತ ಚಟುವಟಿಕೆಗಳ ಮೂಲಕ ಜೀವನಕ್ಕೆ ಅರ್ಥ ನೀಡುತ್ತೇವೆಂದು ನೆನಪಿಡಿ.

### ವೃಷಭ ರಾಶಿ

ಪ್ರತಿ ವ್ಯಕ್ತಿಯನ್ನೂ ಆಲಿಸಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ದೊರಕಬಹುದು. ನೀವು ನಿಮ್ಮ ಮನೆಯ ಯಾವುದೇ ಸದಸ್ಯರಿಂದ ಹಣವನ್ನು ಸಾಲ ತೆಗೆದುಕೊಂಡಿದ್ದರೆ ಅದನ್ನು ಇಂದು ಮರುಪಾವತಿಸಿ ಇಲ್ಲದಿದ್ದರೆ ನಿಮ್ಮ ವಿರುದ್ಧವಾಗಿ ಕಾನೂನು ಪ್ರಕರಣ ಮಾಡಬಹುದು. ಮೊಮ್ಮಕ್ಕಳು ಅಪಾರ ಸಂತೋಷದ ಮೂಲವಾಗುತ್ತಾರೆ. ಭಿನ್ನಾಭಿಪ್ರಾಯಗಳ ಕಾರಣ ವೈಯಕ್ತಿಕ ಸಂಬಂಧದಲ್ಲಿ ಬಿರುಕು ಬಿಡಬಹುದು.

### ಮಿಥುನ ರಾಶಿ

ನಿಮ್ಮ ಆರೋಗ್ಯದ ಮೇಲೆ ಪರಿಣಾಮ ಬೀರಬಹುದಾದ್ದರಿಂದ ಹಾಗೆ ಮಾಡಬೇಡಿ. ಹೊಸ ಒಪ್ಪಂದಗಳು ಲಾಭದಾಯಕವೆಂದು ಕಂಡರೂ ಬಯಸಿದ ಲಾಭ ತರುವುದಿಲ್ಲ – ಹಣವನ್ನು ಹೂಡುವ ಪ್ರಶ್ನೆ ಬಂದಾಗ ಆತುರದ ನಿರ್ಧಾರಗಳನ್ನು ಮಾಡಬೇಡಿ. ಸಾಮಾಜಿಕ ಕಾರ್ಯಗಳಿಗೆ ಹಾಜರಾಗಲು ಅವಕಾಶಗಳಿರಬಹುದು ಹಾಗೂ ಇದು ನಿಮ್ಮನ್ನು ಪ್ರಭಾವಿ ವ್ಯಕ್ತಿಗಳ ಜೊತೆ ನಿಕಟ ಸಂಪರ್ಕ ಹೊಂದುವಂತೆ ಮಾಡಬಹುದು.

### ಕರ್ಕ ರಾಶಿ

ಯೋಗ ಮತ್ತು ಧ್ಯಾನ ನೀವು ಒಳ್ಳೆಯ ದೇಹರಚನೆ ಕಾಯ್ದುಕೊಳ್ಳಲು ಮತ್ತು ಮಾನಸಿಕವಾಗಿ ಸಧೃಢವಾಗಿರಲು ಸಹಾಯ ಮಾಡುತ್ತದೆ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ಕೆಲಸದ ಒತ್ತಡ ಕಡಿಮೆಯಿದ್ದು ನೀವು ಕುಟುಂಬದ ಸದಸ್ಯರ ಜೊತೆಗಿನ ಸಮಯವನ್ನು ಆನಂದಿಸುವ ಒಂದು ದಿನ.

### ಸಿಂಹ ರಾಶಿ

ಉತ್ತಮ ಜೀವನಕ್ಕಾಗಿ ನಿಮ್ಮ ಆರೋಗ್ಯ ಮತ್ತು ಒಟ್ಟಾರೆ ವ್ಯಕ್ತಿತ್ವವನ್ನು ಸುಧಾರಿಸಲು ಪ್ರಯತ್ನಿಸಿ. ನಿಮ್ಮ ಬಳಿ ಹೆಚ್ಚು ಹಣವಿಲ್ಲ ಎಂದು ಯೋಚಿಸಿದರೆ, ಇಂದು ಮನೆಯ ದೊಡ್ಡವರಿಂದ ಹಣವನ್ನು ಹಣವನ್ನು ಸಂಗ್ರಹಿಸುವ ಸಲಹೆ ತೆಗೆದುಕೊಳ್ಳಿ . ನೀವು ಪ್ರೀತಿಸುವವರಿಂದ ಉಡುಗೊರೆಗಳನ್ನು ಪಡೆಯಲು ಹಾಗೂ ನೀಡಲು ಪವಿತ್ರವಾದ ದಿನ. ಯಾರಾದರೂ ನಿಮ್ಮ ಹೆಸರು ಕೆಡಿಸಲು ಪ್ರಯತ್ನಿಸಬಹುದದ್ದರಿಂದ ಜಾಗರೂಕರಾಗಿರಿ. ಕಚೇರಿಯಲ್ಲಿ ಇಂದು ನೀವು ಪರಿಸ್ಥಿತಿಯನ್ನು ಅರ್ಥಮಾಡಿಕೊಂಡು ವರ್ತಿಸಬೇಕು.

### ಕನ್ಯಾ ರಾಶಿ

ಇತರರನ್ನುಟೀಕಿಸುವ ನಿಮ್ಮ ಅಭ್ಯಾಸದಂದಾಗಿ ಇಂದು ನೀವೇ ಕೆಲವು ಟೀಕೆಗಳನ್ನು ಎದುರಿಸುವ ಸಾಧ್ಯತೆಗಳಿವೆ. ನಿಮ್ಮ ಹಾಸ್ಯಪ್ರಜ್ಞೆ ಜಾಗೃತವಾಗಿರಲಿ ಮತ್ತು ನಿಮ್ಮ ಸ್ವರಕ್ಷಣೆ ಕಡಿಮೆಯಿರಲಿ. ಹೀಗಿದ್ದಲ್ಲಿ ಟೀಕೆಯನ್ನು ಎದುರಿಸುವ ಸಾಮರ್ಥ್ಯ ನಿಮ್ಮಲ್ಲಿ ಹೆಚ್ಚಿರುತ್ತದೆ. ನಿಧಿಗಳ ಹಠಾತ್ ಒಳಹರಿವು ನಿಮ್ಮ ಪಾವತಿಗಳು ಮತ್ತು ತಕ್ಷಣದ ವೆಚ್ಚಗಳನ್ನು ನೋಡಿಕೋಳ್ಳುತ್ತದೆ.

### ತುಲಾ ರಾಶಿ

ನಿಮ್ಮ ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ಮನರಂಜನೆ ಇಡೀ ಕುಟುಂಬವನ್ನು ಒಳಗೊಂಡಿದ್ದಲ್ಲಿ ಅದು ಮೋಜಿನ ವಿಷಯವಾಗಿರುತ್ತದೆ.

### ವೃಶ್ಚಿಕ ರಾಶಿ

ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದಾದರೂ ನಿಮ್ಮ ಬದುಕನ್ನು ಲಘುವಾಗಿ ತೆಗೆದುಕೊಳ್ಳಬೇಡಿ ಹಾಗೂ ಜೀವನದ ರಕ್ಷಣೆ ನಿಮ್ಮ ನಿಜವಾದ ಹೊಣೆಗಾರಿಕೆಯೆಂದು ಅರ್ಥ ಮಾಡಿಕೊಳ್ಳಿ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ಸಂಜೆಯಲ್ಲಿ ಬಗ್ಗೆ ಅನಿರೀಕ್ಷಿತವಾದ ಉತ್ತಮ ಸುದ್ದಿಇಡೀ ಕುಟುಂಬಕ್ಕೆ ಸಂತೋಷ ಮತ್ತು ಆನಂದ ತರುತ್ತದೆ. ರಹಸ್ಯ ಪ್ರಣಯಗಳು ನಿಮ್ಮ ಖ್ಯಾತಿಯನ್ನು ನಾಶಮಾಡಬಹುದು.

### ಧನು ರಾಶಿ

ದುಃಖಿತರಾಗಿ ಮತ್ತು ಖಿನ್ನರಾಗಿರಬೇಡಿ. ರಾತ್ರಿಯ ವೇಳೆಯಲ್ಲಿ ಇಂದು ನೀವು ಹಣದ ಪ್ರಯೋಜನವನ್ನು ಪಡೆಯುವ ಪೂರ್ತಿ ಸಾಧ್ಯತೆ ಇದೆ ಏಕೆಂದರೆ ನಿಮ್ಮ ಮೂಲಕ ಕೊಟ್ಟಿರುವ ಹಣ ಇಂದು ನಿಮಗೆ ಮರಳಿ ಸಿಗಬಹುದು. ನಿಮ್ಮ ಖ್ಯಾತಿಯಲ್ಲಿ ನೀವು ಹೊಸ ರತ್ನವೊಂದನ್ನು ಸೇರಿಸಿಕೊಳ್ಳುತ್ತಿದ್ದ ಹಾಗೆ ನಿಮ್ಮ ಸಾಧನೆ ನಿಮ್ಮ ಕುಟುಂಬದ ಸದಸ್ಯರ ಚೈತನ್ಯಗಳನ್ನು ಉತ್ತಮವಾಗಿಸುತ್ತದೆ. ನಿಮ್ಮನ್ನು ಇತರರಿಗೆ ಒಂದು ಮಾದರಿಯಾಗಿಸಲು ಶ್ರಮಿಸಿ.

### ಮಕರ ರಾಶಿ

ಕುಡಿಯುವ ಅಭ್ಯಾಸವನ್ನು ತೋಡೆದುಹಾಕಲು ಇದೊಂದು ಅತ್ಯಂತ ಪವಿತ್ರವಾದ ದಿನ. ನೀವು ವೈನ್ ಕುಡಿಯುವುದು ಆರೋಗ್ಯದ ಪ್ರಾಣಾಂತಿಕ ಶತ್ರು ಎಂದು ನೀವು ಅರ್ಥ ಮಾಡಿಕೊಳ್ಳಬೇಕು ಮತ್ತು ಇದು ನಿಮ್ಮ ಸಾಮರ್ಥ್ಯವನ್ನು ಕುಂಠಿತಗೊಳಿಸುತ್ತದೆ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ.

### ಕುಂಭ ರಾಶಿ

ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ. ನಿಮ್ಮ ಮಕ್ಕಳೂ ಕೂಡ ಮನೆಯಲ್ಲಿನ ಶಾಂತಿ ಸಾಮರಸ್ಯದ ವಾತಾವರಣವನ್ನು ಆವಾಹಿಸಿಕೊಳ್ಳುತ್ತಾರೆ. ಇದು ಪರಸ್ಪರ ಸಂಪರ್ಕದಲ್ಲಿ ನಿಮ್ಮ ಮಾತುಕತೆಗೆ ನಿಮಗೆ ಹೆಚ್ಚಿನ ಸ್ವಾಭಾವಿಕತೆ ಮತ್ತು ಸ್ವಾತಂತ್ರ್ಯ ನೀಡುತ್ತದೆ.

### ಮೀನ ರಾಶಿ

ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು ಮತ್ತು ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಆರ್ಥಿಕ ಜೀವನದ ಸ್ಥಿತಿ ಇಂದು ಉತ್ತಮವಾಗಿದೆ ಎಂದು ಹೇಳಲಾಗುವುದಿಲ್ಲ, ಇಂದು ನಿಮ್ಮನ್ನು ಉಳಿಸಲು ನಿಮಗೆ ಕಷ್ಟವಾಗಬಹುದು. ಸಂಬಂಧಿಕರು ಮತ್ತು ಸ್ನೇಹಿತರಿಂದ ಅನಿರೀಕ್ಷಿತ ಉಡುಗೊರೆಗಳು. ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ.

# ಹೈನುಗಾರಿಕೆ ಉಳಿವಿಗೆ ಜಾನುವಾರು ಸಂರಕ್ಷಣೆಅಗತ್ಯ– ಎಚ್.ಡಿ.ತಮ್ಮಯ್ಯ

**ಚಿಕ್ಕಮಗಳೂರು:** ಮಕ್ಕಳಿಗೆ ಎದೆ ಹಾಲು ಎಷ್ಟು ಮುಖ್ಯವೋ, ಹಸುವಿನ ಹಾಲೂ ಅಷ್ಟೇ ಮುಖ್ಯ, ಹಾಲು ಕೊಡುವ ಹಸು, ಜಾನುವಾರುಗಳ ಸಂರಕ್ಷಣೆ ಸಲುವಾಗಿ ಸರಕಾರ ಪ್ರತಿವರ್ಷ ಕಾಲುಬಾಯಿ ಜ್ವರ ಲಸಿಕಾ ಕಾರ್ಯಕ್ರಮ ನಡೆಸುತ್ತಿದ್ದುರೈತರು ಸದುಪಯೋಗಪಡಿಸಿಕೊಳ್ಳಬೇಕು ಎಂದು ಶಾಸಕ ಎಚ್.ಡಿ.ತಮ್ಮಯ್ಯ ಹೇಳಿದರು.

ತಾಲೂಕಿನ ಹಿರೇಗೌಜದಲ್ಲಿ ಪಶುಸಂಗೋಪನಾ ಇಲಾಖೆಯಿಂದ ಭಾನುವಾರ ಹಮ್ಮಿಕೊಂಡಿದ್ದ 7 ನೇ ಸುತ್ತಿನ ಕಾಲುಬಾಯಿ ರೋಗ ಲಸಿಕಾ ಅಭಿಯಾನಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಹಸುವನ್ನುಕಾಮಧೇನುವಿಗೆ ಹೋಲಿಸುತ್ತೇವೆ,

ಪೂಜನೀಯ ಭಾವದಿಂದ ನೋಡುತ್ತೇವೆ. ಅಂತಹ ಹಸುಗಳ, ಜಾನುವಾರುಗಳ ಸಂರಕ್ಷಣೆ ಸರಕಾರದ ಹೊಣೆ. ಹೀಗಾಗಿ ಪ್ರತಿ ವರ್ಷ ಕಾಲುಬಾಯಿ ಜ್ವರದ ಲಸಿಕಾ ಅಭಿಯಾನ ನಡೆಸಿ ಹಾಲಿನ ಉತ್ಪನ್ನ ಹೆಚ್ಚಿಸಿ ರೈತರಿಗೆ ಅನುಕೂಲ ಕಲ್ಪಿಸಲಾಗುತ್ತಿದೆಎಂದರು.

ಮನುಷ್ಯರರೋಗ ನಿಯಂತ್ರಣಕ್ಕೆ ಹೇಗೆ ಲಸಿಕೆಗಳಿವೆಯೋ ಅದೇ



ಮಾದರಿಯಲ್ಲಿ ಜಾನುವಾರುಗಳಿಗೆ ಯಾವುದೆ ಕಾಯಿಲೆ ಬರದಂತೆ ಲಸಿಕೆ ಹಾಕುತ್ತಿದ್ದುರೈತರುಇದನ್ನು ಸದುಪಯೋಗಪಡಿಸಿಕೊಳ್ಳಬೇಕು. ಕೃಷಿ ಪ್ರಧಾನವಾದ ನಮ್ಮದೇಶದಲ್ಲಿ ಹಿಂದಿನಿಂದಲೂ ನಮ್ಮ ಹಿರಿಯರು ಹಸುಸಾಕಾಣೆ ಮಾಡಿಜೀವನ ನಡೆಸಿದ್ದಾರೆ. ಇತ್ತೀಚೆಗೆ ಸರಕಾರಗಳು ಉತ್ತಮ ತಳಿಯ ಹಸುಗಳನ್ನು ಪರಿಚಯಿಸಿದ್ದು ಇದರಿಂದ ಹಾಲಿನ ಪ್ರಮಾಣವೂ ಹೆಚ್ಚಾಗಿದೆ.ಹೀಗಾಗಿ ವಿದೇಶಕ್ಕೂ ಹಾಲಿನ ಉತ್ಪನ್ನಗಳು ರಫ್ತಾಗುತ್ತಿವೆಎಂದರು. ಹಾಲು ವಿದೇಶಕ್ಕೆ ಹೋಗಬೇಕಾದರೆ ಹಾಲಿನ ಗುಣಮಟ್ಟಉತ್ತಮವಾಗಿರಬೇಕು. ಈ ನಿಟ್ಟಿನಲಿ ಅಧಿಕಾರಿಗಳು ರೈತರಲ್ಲಿಅರಿವು ಮೂಡಿಸಬೇಕುಎಂದು ಹೇಳಿದರು.

ಪಶುಸಂಗೋಪನಾ ಇಲಾಖೆ ಉಪನಿರ್ದೇಶಕಡಾ.ಮೋಹನ್‌ಕುಮಾರ್ ಮಾತನಾಡಿ, ಕಳೆದ 12 ವರ್ಷದಿಂದ ಸತತವಾಗಿ ಕಾಲುಬಾಯಿ ಜ್ವರದ ಲಸಿಕೆ ಹಾಕಲಾಗುತ್ತಿದೆ. ಇದರಿಂದಗ್ರಾಮೀಣ ಭಾಗದಲ್ಲಿ ಆ ರೋಗ ಲಕ್ಷಣಗಳು ಕಡಿಮೆಯಾಗಿದೆ. ದೇಶದಅಭಿವೃದ್ಧಿಗೆಇದುಕೂಡ ಪೂರಕ. ಮನೆ ನಾಯಿಗಳಿದ್ದರೆ ಉಚಿತವಾಗಿರ‍್ಯಾಬಿಸ್ ಚುಚ್ಚುಮದ್ದು ನೀಡುತ್ತೇವೆ.

ಬೀದಿ ನಾಯಿ ಹಿಡಿದುತಂದಲ್ಲಿ ಅವುಗಳಿಗೂ ಲಸಿಕೆ ನೀಡಲಾಗುವುದುಎಂದು ಹೇಳಿದರು. ಹಿರೇಗೌಜಗ್ರಾಮ ಪಂಚಾಯಿತಿಅಧ್ಯಕ್ಷೆ ಮಂಜುಳ, ಸಹಾಯಕಉಪನಿರ್ದೇಶಕಡಾ. ಹೇಮಂತ್‌ಕುಮಾರ್,ಪಶುವೈದ್ಯಾಕಾರಿಡಾ. ಚೈತ್ರಾ, ಡಾ,ವೀಣಾಕುಮಾರಿ ಮತ್ತಿತರೆ ಸಿಬ್ಬಂದಿಇದ್ದರು.

# ಮೌಲ್ಯಗಳನ್ನು ಕಲಿಸದ ಶಿಕ್ಷಣ ಅಪೂರ್ಣ – ಡಾ ಕೆ ಸಿದ್ದಪ್ಪ

**ದಾವಣಗೆರೆ:** ನಗರದ ಎ.ಆರ್.ಎಂ. ಪ್ರಥಮ ದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರ, ಐ.ಕ್ಯೂ.ಎ.ಸಿ ಘಟಕ, ದಾವಣಗೆರೆ ವಿಶ್ವವಿದ್ಯಾನಿಲಯ ಹಾಗೂ ಕೋಡಿಹಳ್ಳಿ ಸಹಯೋಗದಲ್ಲಿ 2024–2025 ಶೈಕ್ಷಣಿಕ ಸಾಲಿನ ವಾರ್ಷಿಕ ವಿಶೇಷ ಶಿಬಿರದಲ್ಲಿ ದಿನಾಂಕ: 27.04.2025 ರಂದು ಐದನೆ ದಿನದ ಕಾರ್ಯಕ್ರಮದಲ್ಲಿ ಬೆಂಗಳೂರು ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿಗಳಾದ ಡಾ ಕೆ ಸಿದ್ದಪ್ಪ ಭಾಗವಹಿದ್ದರು.

ಭಾಗವಹಿಸಿ ಮಾತಾಡಿದ ಅವರು ಎನ್.ಎಸ್.ಎಸ್. ನಲ್ಲಿ ಭಾಗವಹಿಸಿ ಕಲಿತ ಮೌಲ್ಯಗಳು ಶಿಕ್ಷಣ ಕಲಿಕೆಯಲ್ಲಿ ಸಿಕ್ಕ ಅವಕಾಶಕ್ಕಿಂತಲೂ ಹೆಚ್ಚು. ಹಿಂದೆ ಏಕೋಪಾಧ್ಯಾಯ ಶಿಕ್ಷಕರಿರುವ ಶಾಲೆಗಳಿರುತ್ತಿದ್ದವು. ಆಗಿದ್ದೂ ಶಿಕ್ಷಕರು ಮೌಲ್ಯಾಧಾರಿತ ಶಿಕ್ಷಣವನ್ನು ಕಲಿಸುತ್ತಿದ್ದರು. ಅಂದು ಕಡಿಮೆ ಓದಿದರೂ ಮೌಲ್ಯಗಳು ತುಂಬಿರುತ್ತಿದ್ದವು. ಮಗ್ಗಿಗಳನ್ನು, ಪದ್ಯಗಳನ್ನು ಬಾಯಿಪಾಠ ಮಾಡಿ ಹೇಳಲು ಹೇಳುತ್ತಿದ್ದರು. ಹೇಳದಿದ್ದಾಗ ಕೋಲಿನಿಂದ ಬಡಿಯುತ್ತಿದ್ದರು. ಹಾಗೇಯೆ ರಾಮಾಯಣ, ಮಹಾಭಾರತದ ಕಥೆಗಳನ್ನು ಹೇಳುತ್ತಿದ್ದರು ಮತ್ತು ಕಲಿಸುತ್ತಿದ್ದರು. ಪಾಂಡವರು, ಕೌರವರ ಮೂಲಕ ಮೌಲ್ಯಗಳ ಮಹತ್ವವನ್ನು ತಿಳಿಸುತ್ತಿದ್ದರು. ರಾಮಾಯಣ, ಮಹಾಭಾರತದಲ್ಲಿ ಸಿಗುವಷ್ಟು ಮೌಲ್ಯಗಳು ವಿಶ್ವದ ಯಾವ ಭಾಷೆಯ ಗ್ರಂಥಗಳಲ್ಲೂ ಸಿಗುವುದಿಲ್ಲ. ಅಂಥಹ ಕಾವ್ಯಗಳನ್ನು ಇಂದಿನ ಮಕ್ಕಳು ಓದಬೇಕು. ಆಗ ತಮಗೆ ಬೇಕಾದ ಮೌಲ್ಯಗಳು ಸಿಗುತ್ತವೆ ಎಂದರು.

ಮುಂದುವರೆದು ವಿದ್ಯಾರ್ಥಿಗಳು ಶಿಕ್ಷಣವನ್ನು ಕಲಿಯುವಾಗ ಮೌಲ್ಯಗಳನ್ನು ಕಲಿಯಬೇಕು. ಮೌಲ್ಯಗಳನ್ನು ಕಲಿಸದ ಶಿಕ್ಷಣ ಅಪೂರ್ಣ ಮತ್ತು ವ್ಯರ್ಥ. ಬದುಕಿನ ಮೂಲ ಜನಪದ. ಜನಪದರು ಓದು ಬರಹ ಕಲಿಯದವರು. ಅವರು ಮೌಲ್ಯಾಧಾರಿತ ಹಾಡುಗಳನ್ನು ರಚಿಸಿ ಹಾಡಿದರು. ಅದು ಬಾಯಿಂದ ಬಾಯಿಗೆ ಹರಡಿತು. ಜನಪದದಲ್ಲೂ ಬದುಕಿಗೆ ಬೇಕಾದ ಮೌಲ್ಯಗಳು ಸಿಗುತ್ತಿದ್ದವು. ಆದರೆ ಇಂದಿನ ಶಿಕ್ಷಣವು ರಾಮಾಯಣ–ಮಹಾಭಾರತ




ಕಥೆಗಳನ್ನು ಕಲಿಸಲಿಕ್ಕೆ ಅವಕಾಶಗಳೇ ಇಲ್ಲದಂತಾಗಿದೆ. ಇಂದು ಕೇವಲ ಕೌಶಲ್ಯಾಧಾರಿತ ಶಿಕ್ಷಣಕ್ಕೆ ಹೆಚ್ಚಿನ ಹೊತ್ತು ಕೊಡಲಾಗುತ್ತದೆ. ಇದರಿಂದ ಮಾನವೀಯ ಮೌಲ್ಯಗಳು ಮರೆಯಾಗುತ್ತವೆ. ಅಲ್ಲದೆ ಸಮಾಜಘಾತುಕ ಕಾರ್ಯಗಳು, ಕ್ರೌರ್ಯಗಳು ಹೆಚ್ಚಾಗಿರುವುದಕ್ಕೆ ಕಾರಣವಾಗಿದೆ. ಇಂದಿನ ಯುವ ಪೀಳಿಗೆಗೆ ಶಿಕ್ಷಣ ಮತ್ತು ಮೌಲ್ಯಗಳು ಎರಡು ಸಿಗುವಂತಾಗಬೇಕು. ಎನ್ ಎಸ್.ಎಸ್ ಬದುಕಿನ ಮೌಲ್ಯಗಳನ್ನು ಕಲಿಸಿಕೊಡುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಕೃಷಿ ತಜ್ಞ ಬಿ ಸಿ ವಿಶ್ವನಾಥ ಭಾಗವಹಿಸಿ ಉಪನ್ಯಾಸ ನೀಡಿದರು. ರೈತರು ಸುಮಾರು ವರ್ಷಗಳಿಂದ ಕೃಷಿ ಭೂಮಿಯಲ್ಲಿ ದುಡಿಯುತ್ತಲೇ ಬಂದಿದ್ದಾರೆ. ಆದರೂ ಅವರಿಗೆ ಧ್ವನಿ ಇಲ್ಲದಂತಾಗಿದೆ. ಯಾಕೆಂದರೆ ಅದರಲ್ಲಿ ಅವರಿಗೆ ಆದಾಯವಿಲ್ಲದಂತಾಗಿದೆ. ರೈತರಿಗೆ ಎಲ್ಲರೂ ವಂಚನೆ ಮಾಡುತ್ತಾರೆ. ಇಷ್ಟಾದರೂ ರೈತರು ಕೃಷಿಯನ್ನು ಮಾಡುತ್ತಿದ್ದಾರೆಯೇ ಇಲ್ಲ. ಆಗಂತ ರೈತರ್ಯಾರು ಮುಷ್ಕರ ಮಾಡಿಲ್ಲ. ರೈತರು ಒಂದು ವರ್ಷ ಮುಷ್ಕರ ಮಾಡಿಬಿಟ್ಟರೆ ಇಡೀ ದೇಶದ ಜನರ ಬದುಕು ಸಂಕಷ್ಟಕ್ಕೆ ಸಿಲುಕುತ್ತದೆ. ರೈತರು ಮೊದಲೆಲ್ಲ ನವಣೆ, ಹುರುಳಿ, ತೊಗರಿ, ಅವರೆ, ಹಲಸಂದಿ, ಹೆಸರು, ಗುರಾಳು, ಎಳ್ಳು ಮುಂತಾದ ಬಹು ಬೆಳೆಯನ್ನು ಬೆಳೆಯುತ್ತಿದ್ದರು. ಈಗ ಕೃಷಿ ಕ್ರಾಂತಿಗೆ ಮೈಯೊಡ್ಡಿ ತಮ್ಮ ಜಮೀನನ್ನು ನಾಶಮಾಡಿಕೊಳ್ಳುತ್ತಿದ್ದಾರೆ. ಆಧುನಿಕ ಕೃಷಿ ಪದ್ಧತಿಯಲ್ಲಿ ವ್ಯವಸಾಯ ತನ್ನ ಶಕ್ತಿಯನ್ನು ಕಳೆದುಕೊಂಡಿದೆ. ಒಂದು ಎಕರೆ ಭೂಮಿಗೆ ನಾಲ್ಕು ಕ್ವಿಂಟಲ್ ಗೊಬ್ಬರ ಹಾಕಿದರೂ ಬೆಳೆ ಬಾರದಂತಹ ಪರಿಸ್ಥಿತಿ ಉಂಟಾಗಿದೆ. ಬೇರೆ ಬೇರೆ ಹೆಸರಿನ ರಸಾಯನಿಕ ಗೊಬ್ಬರವನ್ನು ಭೂಮಿಗೆ ಸುರಿದು ಎಲ್ಲವೂ ಹಾಳಾಗಿ ಹೋಗಿದೆ ಎಂದರು.

ಮುಂದುವರೆದು ಮುಂದಿನ 2060 ನೇ ಇಸ್ವಿಗೆ ಯಾವ ಬೆಳೆಯನ್ನು ಬೆಳೆಯದಂತಹ ಸ್ಥಿತಿಗೆ ತಲುಪುತ್ತೇವೆ. ಮುಂದಿನ ಪೀಳಿಗೆ ಕೃಷಿ ಭೂಮಿಯನ್ನು ಉಳಿಸಬೇಕಾದರೆ ಸ್ವಲ್ಪ ಪ್ರಮಾಣದಲ್ಲಿ ಗೊಬ್ಬರವನ್ನು ಬಳಸಬೇಕೆಂದರು.

ಈ ಸಂದರ್ಭದಲ್ಲಿ ಅಂಜಿನಪ್ಪ ಡಿ, ಬಸವರಾಜ ವಿ ದಮ್ಮಳ್ಳಿ, ನಾಗರಾಜ್ ಎಂ.ಬಿ. ಮಹಾಂತೇಶಪ್ಪ ಗೌಡ್ರು ಕೆ ಜಿ, ನಾಗರಾಜ್ ಎಂ, ಪಾಲಾಕ್ಷಪ್ಪ, ಸುನೀತಾ ಬಿ, ನಲವಾಗಲು ಬಸವರಾಜಪ್ಪ, ಜಯಣ್ಣ ಕೆ, ಕಾಡಜ್ಜಿ ಶಿವಪ್ಪ, ಮಹಮ್ಮದ್ ರಿಯಾಜ್, ಮೌನೇಶ್ವರ ಟಿ ಎನ್, ಮಧುಮಾಲತಿ ಜಿ ಎಸ್ ಮತ್ತು ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

# ಅಂತರಾಷ್ಟ್ರೀಯ ಕನ್ನಡ ಸಮ್ಮೇಳನದ ಸ್ಮರಣ ಸಂಚಿಕೆಗೆ ಲೇಖನಗಳ ಆಹ್ವಾನ

**ದಾವಣಗೆರೆ:** ಮೇ 7 ರಿಂದ 12 ರವರೆಗೆ ನಡೆಯಲಿರುವ ಅಂತರಾಷ್ಟ್ರೀಯ ಕನ್ನಡ ಸಮ್ಮೇಳನ ಮತ್ತು ವಸ್ತು ಪ್ರದರ್ಶನ ವನ್ನು ದಾವಣಗೆರೆ ನಗರದ ಪ್ರೌಢಶಾಲಾ ಮೈದಾನದಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ದಾವಣಗೆರೆ ಹಾಗೂ ವಿಶ್ವ ಕನ್ನಡಿಗರ ಟ್ರಸ್ಟ್ ಬೆಂಗಳೂರು ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದು, ಸ್ಮರಣ ಸಂಚಿಕೆಯನ್ನು ಹೊರ ತರಲು ತೀರ್ಮಾನಿಸಲಾಗಿದೆ.

ಈ ನಿಮಿತ್ತ ಲೇಖಕರು ಮತ್ತು ಕವಿಗಳಿಂದ ಕನ್ನಡ ನಾಡು – ನುಡಿ, ಕಲೆ ಸಾಹಿತ್ಯ ಸಂಗೀತಕ್ಕೆ ಸಂಬಂಧಿಸಿದಂತೆ ಸಾಮಾಜಿಕ,ವೈಚಾರಿಕ, ಶೈಕ್ಷಣಿಕ,ಸಾಂಸ್ಕೃತಿಕ, ಕೃಷಿ, ರಂಗಭೂಮಿ,ಮತ್ತು ಇತಿಹಾಸಕ್ಕೆ ಸಂಬಂಧಪಟ್ಟಂತೆ ಲೇಖನಗಳನ್ನು ಮತ್ತು ಕವನಗಳನ್ನು ಆಹ್ವಾನಿಸಲಾಗಿದೆ.

ಲೇಖನಗಳು ನುಡಿ ಬರಹದಲ್ಲಿ ಎರಡು ಪುಟಕ್ಕೆ ಸೀಮಿತವಾಗುವಂತೆ ಇದೇ ಮೇ 3 ಒಳಗೆ ಶ್ರೀಮತಿ ವೀಣಾ ಕೃಷ್ಣಮೂರ್ತಿ: 9483481491 ಗೆ ಕಳುಹಿಸುವಂತೆ ದಾವಣಗೆರೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ ವಾಮದೇವಪ್ಪ ತಿಳಿಸಿದ್ದಾರೆ.

# ತಮ್ಮ ಸೇನಾ ಮುಖ್ಯಸ್ಥನ ವಿರುದ್ಧವೇ ರೊಚ್ಚಿಗೆದ್ದ ಪಾಕಿಗಳು, ರಾಜೀನಾಮೆ ಆಗ್ರಹ

**ಇಸ್ಲಾಮಾಬಾದ್:** ಪಹಲ್ಗಾಮ್ ದಾಳಿ ನಂತರ ಪಾಕಿಸ್ತಾನದ ನಾಗರಿಕರಲ್ಲಿ ತಮ್ಮ ಸೇನೆಯ ವಿರುದ್ಧ ಆಕ್ರೋಶ ಭುಗಿಲೆದ್ದಿದೆ. ಪಾಕಿಸ್ತಾನ ಸೇನಾ ಮುಖ್ಯಸ್ಥರ ರಾಜೀನಾಮೆ ಟ್ವಿಟ್ಟರ್‌ನಲ್ಲಿ ಟ್ರೆಂಡಿಂಗ್ ಆಗಿದ್ದು, ಬಳಕೆದಾರರು ಸೇನಾ ಮುಖ್ಯಸ್ಥ ಜನರಲ್ ಅಸಿಮ್ ಮುನೀರ್ ಅವರನ್ನು ಐಎಸ್‌ಐ ಮತ್ತು ಭಯೋತ್ಪಾದಕ ಗುಂಪುಗಳಿಗೆ ರಕ್ಷಣೆ ನೀಡುತ್ತಿದ್ದಾರೆ ಎಂದು ದೂಷಿಸುತ್ತಿದ್ದಾರೆ. ಕೆಲವು ಬಳಕೆದಾರರು, ಪಾಕಿಸ್ತಾನಿ ಸೇನೆ ಭಯೋತ್ಪಾದಕರಿಗೆ ಆಶ್ರಯ ನೀಡುತ್ತದೆ ಮತ್ತು ನಮ್ಮ ಆರ್ಥಿಕತೆಯು ಹಾಳಾಗುತ್ತಿದೆ ಎಂದು ಬರೆದಿದ್ದಾರೆ. ಈ ಸಾರ್ವಜನಿಕ ಕೋಪವು ಪಾಕಿಸ್ತಾನದ ಆಂತರಿಕ ಅಸ್ಥಿರತೆಯನ್ನು ಎತ್ತಿ ತೋರಿಸುತ್ತದೆ.

ಪಹಲ್ಗಾಮ್ ದಾಳಿಯ ನಂತರ, ಜಾಗತಿಕವಾಗಿ ಏಕಾಂಗಿಯಾಗುವುದನ್ನು ತಪ್ಪಿಸಲು ಪಾಕಿಸ್ತಾನ ತನ್ನ ರಾಜತಾಂತ್ರಿಕ ಪ್ರಯತ್ನಗಳನ್ನು ತೀವ್ರಗೊಳಿಸಿದೆ. ಪಾಕಿಸ್ತಾನದ ಉಪ ಪ್ರಧಾನ ಮಂತ್ರಿ ಮತ್ತು ವಿದೇಶಾಂಗ ಸಚಿವ ಮೊಹಮ್ಮದ್ ಇಶಾಕ್ ದಾರ್ ಅವರು ಅಜೆಬರ್ ರೈಜಾನ್ ಮತ್ತು ಈಜಿಪ್ಟ್ ವಿದೇಶಾಂಗ ಸಚಿವರೊಂದಿಗೆ ದೂರವಾಣಿ ಮೂಲಕ ಮಾತನಾಡಿದರು. ಕಾಶ್ಮೀರದಲ್ಲಿನ ಪ್ರಸ್ತುತ ಪರಿಸ್ಥಿತಿಯ ಬಗ್ಗೆ ದಾರ್ ಚರ್ಚಿಸಿದರು ಮತ್ತು ಬೆಂಬಲದ ಭರವಸೆ ವ್ಯಕ್ತಪಡಿಸಿದರು. ಆದಾಗ್ಯೂ, ಜಾಗತಿಕ ಸಮುದಾಯದಲ್ಲಿ ಪಾಕಿಸ್ತಾನದ ವಿಶ್ವಾಸಾರ್ಹತೆ ದುರ್ಬಲಗೊಳ್ಳುವುದರಿಂದ ಈ ಪ್ರಯತ್ನಗಳು ವಿಫಲವಾಗಬಹುದು ಎಂದು ವಿಶ್ಲೇಷಕರು ಊಹಿಸಿದ್ದಾರೆ.

ಭಯೋತ್ಪಾದಕ ಸಹಾಯಕರ ಮೇಲೆ ದಾಳಿ:

ಜಮ್ಮು ಮತ್ತು ಕಾಶ್ಮೀರದಲ್ಲಿ ಭಯೋತ್ಪಾದಕ ಸಹಾಯಕರ ವಿರುದ್ಧ ಪ್ರಮುಖ ಕಾರ್ಯಾಚರಣೆ

ಆರಂಭಿಸಲಾಗಿದೆ. ಶ್ರೀನಗರದ 64 ಸ್ಥಳಗಳಲ್ಲಿ ಯುಎಪಿಎ (ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆ) ಅಡಿಯಲ್ಲಿ ದಾಳಿ ನಡೆಸಲಾಯಿತು. ಟಿಆರ್ ಎಫ್ ಭಯೋತ್ಪಾದಕರಿಗೆ ಶಸ್ತ್ರಾಸ್ತ್ರ ಮತ್ತು ಲಾಜಿಸ್ಟಿಕ್ಸ್ ಪೂರೈಕೆಯಲ್ಲಿ ಭಾಗಿಯಾಗಿದ್ದ ಇಬ್ಬರು ಭಯೋತ್ಪಾದಕ ಸಹಾಯಕರನ್ನು ಕುಲ್ಗಾಮ್‌ನಿಂದ ಬಂಧಿಸಲಾಯಿತು. ಗುಪ್ತಚರ ಸಂಸ್ಥೆಗಳು ಸ್ಥಳೀಯ ಜಾಲವನ್ನು ಕಿತ್ತುಹಾಕುವಲ್ಲಿ ನಿರತವಾಗಿವೆ.

14 ಸ್ಥಳೀಯ ಭಯೋತ್ಪಾದಕರ ಪಟ್ಟಿ ಸಿದ್ಧ:

ಗುಪ್ತಚರ ಸಂಸ್ಥೆಗಳು ಜಮ್ಮು ಮತ್ತು ಕಾಶ್ಮೀರದ 14 ಸ್ಥಳೀಯ ಭಯೋತ್ಪಾದಕರ ಪಟ್ಟಿಯನ್ನು ಸಿದ್ಧಪಡಿಸಿದ್ದು, ಅವರು ಪಾಕಿಸ್ತಾನಿ ಭಯೋತ್ಪಾದಕರಿಗೆ ಸಹಾಯ ಮಾಡುವಲ್ಲಿ ಭಾಗಿಯಾಗಿದ್ದಾರೆ. ಇವರಲ್ಲಿ ಟಿಆರ್‌ಎಫ್ ಮತ್ತು ಲಷ್ಕರ್–ಎ–ತೊಯ್ಬಾದ ಶಂಕಿತರು ಸೇರಿದ್ದಾರೆ. ಏಜೆನ್ಸಿಗಳು ಅವರ ಅಡಗುತಾಣಗಳು, ಬ್ಯಾಂಕ್ ಖಾತೆಗಳು ಮತ್ತು ಸಂಪರ್ಕಗಳ ಬಗ್ಗೆ ತನಿಖೆ ನಡೆಸಲು ಪ್ರಾರಂಭಿಸಿವೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಯು ಕಾಶ್ಮೀರದ ಶಾಂತಿ ಮತ್ತು ಪ್ರವಾಸೋದ್ಯಮದ ಮೇಲೆ ಯೋಜಿತ ದಾಳಿಯಾಗಿದ್ದು, ಇದರ ಹಿಂದೆ ಪಾಕಿಸ್ತಾನ ಬೆಂಬಲಿತ ಭಯೋತ್ಪಾದಕ ಸಂಘಟನೆಗಳು ಭಾಗಿಯಾಗಿವೆ. ಭಾರತ ಸರ್ಕಾರದ ಕಠಿಣ ನಿಲುವು, ಎನ್‌ಐಎ ತನಿಖೆ ಮತ್ತು ಭದ್ರತಾ ಪಡೆಗಳ ತ್ವರಿತ ಕ್ರಮವು ಭಯೋತ್ಪಾದನೆಯ ವಿರುದ್ಧ ದೇಶದ ದೃಢಸಂಕಲ್ಪವನ್ನು ಪ್ರತಿಬಿಂಬಿಸುತ್ತದೆ.

ಅಂತರರಾಷ್ಟ್ರೀಯ ಸಮುದಾಯದ ಬೆಂಬಲ ಮತ್ತು ಪಾಕಿಸ್ತಾನದ ಹೆಚ್ಚುತ್ತಿರುವ ಪ್ರತ್ಯೇಕತೆಯು ಈ ಘಟನೆಯ ಜಾಗತಿಕ ಪರಿಣಾಮವನ್ನು ಎತ್ತಿ ತೋರಿಸುತ್ತದೆ. ಅಮರನಾಥ ಯಾತ್ರೆ ಸಮೀಪಿಸುತ್ತಿರುವುದರಿಂದ, ಕಾಶ್ಮೀರದಲ್ಲಿ ಭದ್ರತಾ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸುವುದು ಸರ್ಕಾರದ ಆದ್ಯತೆಯಾಗಿದೆ. ಈ ದುರಂತದಲ್ಲಿ ಪ್ರಾಣ ಕಳೆದುಕೊಂಡವರ ಬಗ್ಗೆ ದೇಶ ವಿಷಾದ ವ್ಯಕ್ತಪಡಿಸುತ್ತಿದೆ ಮತ್ತು ಭಯೋತ್ಪಾದಕರನ್ನು ಶಿಕ್ಷಿಸಲು ಪ್ರತಿಯೊಂದು ಹೆಜ್ಜೆಯನ್ನೂ ತೆಗೆದುಕೊಳ್ಳಲಾಗುತ್ತಿದೆ.

# ಅಡಿಕೆಗೆ ಹೋದ ಮಾನ ಆನೆ ಕೊಟ್ಟರೂ ಬರುವುದಿಲ್ಲ, ಕನ್ನಡಿಗರು ತಲೆ ತಗ್ಗಿಸುವಂತಹ ಸನ್ನಿವೇಶ ನಿರ್ಮಾಣವಾಗದಂತೆ ವರ್ತಿಸಿ..!

**ಬೆಂಗಳೂರು:** ಅಡಿಕೆಗೆ ಹೋದ ಮಾನ ಆನೆ ಕೊಟ್ಟರೂ ಬರುವುದಿಲ್ಲ. ಇನ್ನು ಮುಂದಾದರೂ ತಮ್ಮ ಹೇಳಿಕೆಗಳಿಂದ ಕನ್ನಡಿಗರು ತಲೆ ತಗ್ಗಿಸುವಂತಹ ಸನ್ನಿವೇಶ ನಿರ್ಮಾಣವಾಗದಂತೆ ವರ್ತಿಸಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬಿಜೆಪಿ ಸಲಹೆ ನೀಡಿದೆ.

ಪಹಲ್ಗಾಮ್ ಉಗ್ರರ ದಾಳಿ ಘಟನೆ ಕುರಿತು ಹೇಳಿಕೆ ನೀಡಿ ಭಾರೀ ಟೀಕೆಗೆ ಒಳಗಾಗಿ ನಂತರ ಮುಖ್ಯಮಂತ್ರಿಗಳು ಸಮರ್ಥನೆ ಕೊಟ್ಟ ಹಿನ್ನೆಲೆಯಲ್ಲಿ ಬಿಜೆಪಿ ಸಲಹೆ ನೀಡಿದೆ.

ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಅವರು, ಅಡಿಕೆಗೆ ಹೋದ ಮಾನ ಆನೆ ಕೊಟ್ಟರೂ



ಬರುವುದಿಲ್ಲ ಸಿಎಂ ಸಿದ್ದರಾಮಯ್ಯ ನವರೇ, ಮಾತು ಆಡಿದರೆ ಹೋಯಿತು, ಮುತ್ತು ಒಡೆದರೆ ಹೋಯಿತು. ಕೆಟ್ಟ ಮೇಲಾದರೂ ತಮಗೆ ಬುದ್ಧಿ ಬಂತಲ್ಲ ಎನ್ನುವ ಸಮಾಧಾನ ಒಂದು ಕಡೆಯಾದರೆ, ಓಲೈಕೆ ರಾಜಕಾರಣಕಾಗಿ ರಾಷ್ಟ್ರೀಯ ಭದ್ರತೆ ವಿಷಯದಲ್ಲೂ ರಾಜಿ ಮಾಡಿಕೊಳ್ಳಲು ಹೇಸುವುದಿಲ್ಲವಲ್ಲ ಎಂಬ ಆತಂಕ ಮತ್ತೊಂದು ಕಡೆ.

ತಮ್ಮ ಬಾಲಿಶ ಹೇಳಿಕೆ ಶತ್ರುರಾಷ್ಟ್ರದ ಷಡ್ಯಂತ್ರ, ಕುತಂತ್ರಕ್ಕೆ ಆಹಾರವಾಯಿತು, ತಮ್ಮ ಬೇಜವಾಬ್ದಾರಿ ಹೇಳಿಕೆ ಭಾರತಕ್ಕೆ ಅಂತಾರಾಷ್ಟ್ರೀಯ ಮಟ್ಟದಲ್ಲಿ ಮುಜುಗರ ಉಂಟುಮಾಡಿತು ಎಂಬ ವಾಸ್ತವದ ಅರಿವು ತಮಗಾಗಿದೆ ಎಂದು ಭಾವಿಸುತ್ತೇನೆ.

ಇನ್ನು ಮುಂದಾದರೂ ತಮ್ಮ ಸ್ಥಾನಕ್ಕೆ ತಕ್ಕಂತೆ ನಡೆದುಕೊಳ್ಳಿ. ತಮ್ಮ ಸ್ಥಾನಕ್ಕೆ ತಕ್ಕಂತಹ ಗಾಂಭೀರ್ಯತೆ, ಸಮಯ ಪ್ರಜ್ಞೆ, ಮುತ್ಸದ್ದಿತನ ರೂಢಿಸಿಕೊಳ್ಳಿ. ಇನ್ನು ಮುಂದಾದರೂ ತಮ್ಮ ಹೇಳಿಕೆಗಳಿಂದ ಕನ್ನಡಿಗರು ತಲೆ ತಗ್ಗಿಸುವಂತಹ ಸನ್ನಿವೇಶ ನಿರ್ಮಾಣವಾಗದಂತೆ ವರ್ತಿಸಿ ಎಂದು ಸಲಹೆ ನೀಡಿದ್ದಾರೆ.

# ಪಹಲ್ಗಾಂ ಭಯೋತ್ಪಾದಕ ದಾಳಿ: ಇಂತಹ ಸಂದಿಗ್ಧ ಸ್ಥಿತಿಯಲ್ಲಿ ಜವಾಬ್ದಾರಿಯುತವಾಗಿ ಮಾತನಾಡಿ; ಕಾಂಗ್ರೆಸ್‌ಗೆ ವಿಜಯೇಂದ್ರ ಆಗ್ರಹ

**ಬೆಂಗಳೂರು:** ಭಯೋತ್ಪಾದಕರ ದಾಳಿಯ ವಿಚಾರದಲ್ಲಿ ಹೊಣೆಗಾರಿಕೆ ಅರಿತು ಮಾತನಾಡಿ ಎಂದು ಕಾಂಗ್ರೆಸ್ ನಾಯಕರಿಗೆ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಗುರುವಾರ ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಆರ್‌ಡಿಪಿಆರ್ ಸಚಿವ ಪ್ರಿಯಾಂಕ್ ಖರ್ಗೆ ಕೇಂದ್ರದ ಗುಪ್ತಚರ ವೈಫಲ್ಯದ ಬಗ್ಗೆ ಮಾತನಾಡುತ್ತಾರೆ. ಈ ದೇಶವನ್ನು 60 ವರ್ಷ ಕಾಂಗ್ರೆಸ್ ಆಡಳಿತ ನಡೆಸಿತ್ತು. ಆಗಲೂ ಹಲವು ಬಾರಿ ಭಯೋತ್ಪಾದಕ ದಾಳಿಗಳು ನಡೆದಿರಲಿಲ್ಲವೇ? ಅವರ ಅವಧಿಯಲ್ಲಿ ಭಯೋತ್ಪಾದನೆ ನಿರ್ಮೂಲನೆ ಮಾಡಲು ಏಕೆ ಸಾಧ್ಯವಾಗಲಿಲ್ಲ ಎಂದು ಪ್ರಶ್ನಿಸಿದರು.

ದೇಶ ಸಂದಿಗ್ಧ ಸ್ಥಿತಿಯಲ್ಲಿ ಇರುವಾಗ ಪ್ರತಿಯೊಬ್ಬ ಭಾರತೀಯನೂ ಒಗ್ಗಟ್ಟಿನಿಂದ ಇರಬೇಕು. ಆ ಮೂಲಕ ವಿಶ್ವಕ್ಕೆ ಸ್ಪಷ್ಟ ಸಂದೇಶ ಕಳುಹಿಸಬೇಕು. ಭಯೋತ್ಪಾದನೆ ಎಂಬುದು ಭಾರತಕ್ಕೆ ಮಾತ್ರ ಸೀಮಿತವಲ್ಲ. ಇದು ಜಾಗತಿಕ ಸಮಸ್ಯೆ. ಭಯೋತ್ಪಾದನೆಯನ್ನು ಬುಡಸಮೇತ ಕಿತ್ತು ಹಾಕಲು ಪ್ರಧಾನಿ ಮೋದಿ ಶ್ರಮಿಸುತ್ತಿದ್ದು, ಅದಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು.



'ಭಯೋತ್ಪಾದಕರು ಹೆಸರನ್ನು ಕೇಳಿ ಹಿಂದೂಗಳನ್ನೇ ಹತ್ಯೆ ಮಾಡಿದ್ದಾರೆ. ಆದರೆ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಭಾರತೀಯ ಪ್ರವಾಸಿಗರ ಮೇಲೆ ದಾಳಿ ಮಾಡಿರುವುದಾಗಿ ಹೇಳಿದ್ದಾರೆ. ಹತರಾದವರು ಹಿಂದೂಗಳು ಎಂದು ಇವರಿಗೆ ಅನ್ನಿಸಲಿಲ್ಲವೇ? ಹಿಂದೂಗಳನ್ನು ಗುರಿಯಾಗಿಸಿ ದಾಳಿ ಮಾಡಿರುವ ಬಗ್ಗೆ ಕಾಂಗ್ರೆಸ್‌ನವರಿಗೆ ಯಾವುದೇ ಸಂವೇದನೆಯೇ ಇಲ್ಲದಿರುವುದು ದುರ್ದೈವ' ಎಂದು ಕಿಡಿಕಾರಿದರು.

ಜಮ್ಮು ಮತ್ತು ಕಾಶ್ಮೀರಕ್ಕೆ ಬರುವ ವಿದೇಶಿ ಪ್ರವಾಸಿಗರನ್ನು ತಡೆಯುವುದು, ಅಲ್ಲಿನ ಯುವಕರಿಗೆ ಉದ್ಯೋಗ ಸಿಗಬಾರದು, ಅವರನ್ನು ಭಯೋತ್ಪಾದನೆಗೆ ಬಳಸಿಕೊಳ್ಳಬಹುದು ಎಂಬ ದುರುದ್ದೇಶದಿಂದ

ಪ್ರವಾಸಿಗರ ಮೇಲೆ ದಾಳಿ ನಡೆಸಲಾಗಿದೆ ಎಂಬ ಮಾತು ಕೇಳಿ ಬರುತ್ತಿದೆ. ಮೋದಿ ಸರ್ಕಾರ ಕಾಶ್ಮೀರದಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ಗಂಭೀರವಾಗಿ ಪರಿಗಣಿಸಿದ್ದು, ಎಲ್ಲಾ ಭಾರತೀಯರು ಸರ್ಕಾರದೊಂದಿಗೆ ಒಟ್ಟಾಗಿ ನಿಲ್ಲಬೇಕು. 370 ನೇ ವಿಧಿಯನ್ನು ರದ್ದುಪಡಿಸುವುದರ ಹಿಂದೆ, ಕಾಶ್ಮೀರವನ್ನು ಸಾಮಾನ್ಯ ಸ್ಥಿತಿಗೆ ತರುವ ಒಳ್ಳೆಯ ಉದ್ದೇಶವಿತ್ತು ಎಂದು ಹೇಳಿದರು.

# ನಿಧನ ಸುದ್ದಿಗಳು

### ಸರೋಜಮ್ಮ ನಿಧನ

**ಚಿತ್ರದುರ್ಗ:** ನಗರದ ಎಸ್.ಬಿ. ಕಾಲನಿ ನಿವಾಸಿ ಸರೋಜಮ್ಮ ಶಿವಶಂಕರ್ (85) ಭಾನುವಾರ ನಿಧನರಾದರು. ಇಬ್ಬರು ಪುತ್ರರು, ಪುತ್ರಿಯರು ಇದ್ದಾರೆ. ಸ್ವಗ್ರಾಮ ಹೊಳಲ್ಕೆರೆ ತಾಲೂಕು ಚಿತ್ರಹಳ್ಳಿಯಲ್ಲಿ ಅಂತ್ಯಕ್ರಿಯೆ ನಡೆಯಿತು.

### ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅಭಿಪ್ರಾಯ

# ಅಸಮತೋಲನ ನಿವಾರಣೆಗಾಗಿ ಜಿಲ್ಲೆಗೆ 10 ವರ್ಷ ಅವಧಿಗೆ ವಿಶೇಷ ಯೋಜನೆ ಅಗತ್ಯ



**ಚಿತ್ರದುರ್ಗ:** ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ಗುಲ್ಬರ್ಗ ವಿಭಾಗದ ಕಲ್ಯಾಣ ಕರ್ನಾಟಕ ಜಿಲ್ಲೆಗಳಿಗೆ ನೀಡಿರುವ ವಿಶೇಷ ಯೋಜನೆಗಳ ಮಾದರಿಯಲ್ಲಿ, ಚಿತ್ರದುರ್ಗ ಜಿಲ್ಲೆಗೆ 10 ವರ್ಷಗಳ ಅವಧಿಯ ವಿಶೇಷ ಯೋಜನೆ ಪ್ಯಾಕೇಜ್ ನೀಡಿದರೆ, ಜಿಲ್ಲೆಯ ಎಲ್ಲಾ ತಾಲ್ಲೂಕುಗಳು ಅಭಿವೃದ್ಧಿ ಹೊಂದಲಿವೆ ಎಂದು ಯೋಜನೆ ಮತ್ತು ಸಾಂಖ್ಯಿಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ. ಸುಧಾಕರ್ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ, ಸೋಮವಾರ ಏರ್ಪಡಿಸಿದ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಬೆಂಗಳೂರು ವಿಭಾಗದ ಮಟ್ಟದ ಸಂವಾದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಚಿತ್ರದುರ್ಗ ಅತ್ಯಂತ ಹಿಂದುಳಿದ ಜಿಲ್ಲೆಯಾಗಿದೆ. ಜಿಲ್ಲೆಯ ಜನಸಂಖ್ಯೆ ಪೈಕಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು ಹಾಗೂ ಅಲ್ಪಸಂಖ್ಯಾತರು ಶೇ.90 ರಷ್ಟು ಇದ್ದಾರೆ. ಪ್ರತಿ ತಾಲ್ಲೂಕಿನಿಂದಲೂ ಸಾವಿರಾರು ಜನ ಹೆಣ್ಣು ಮಕ್ಕಳು ಗಾರ್ಮೆಂಟ್ಸ್ ಕೆಲಸ ಅರಸಿಕೊಂಡು ಬೆಂಗಳೂರಿಗೆ ವಲಸೆ ಹೋಗಿದ್ದಾರೆ. ಹಿರಿಯೂರಿನಲ್ಲಿರುವ ಗಾರ್ಮೆಂಟ್ ಫ್ಯಾಕ್ಟರಿಯಲ್ಲಿ ತಾಲ್ಲೂಕಿನ ಏಳೆಂಟು ಸಾವಿರ ಮಹಿಳೆಯರು ಕೆಲಸ ಮಾಡುತ್ತಿದ್ದಾರೆ. ಇದರಿಂದ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಭಿಯಾಗಲು ಸಹಕಾರಿಯಾಗಿದೆ. ಇಂತಹ ಸಂದರ್ಭದಲ್ಲಿ ಸರ್ಕಾರ ಗೃಹಲಕ್ಷ್ಮೀ ಯೋಜನೆಯು ರಾಜ್ಯದ ಮಹಿಳೆಯರ ಆರ್ಥಿಕ ಚೈತನ್ಯ ತುಂಬುವಲ್ಲಿ ಪ್ರಮುಖ ಪಾತ್ರ ವಹಿಸಿದೆ ಎಂದರು.

ಮಧ್ಯ ಕರ್ನಾಟಕ ಭಾಗಕ್ಕೆ ವಾಣಿ ವಿಲಾಸ ಸಾಗರ ಜಲಾಶಯ ಜೀವನಾಡಿಯಾಗಿದೆ. ಪ್ರವಾಸೋದ್ಯಮ ಅಭಿವೃದ್ಧಿ ನಿಟ್ಟಿನಲ್ಲಿ ಕೃಷ್ಣರಾಜ ಸಾಗರ ಮಾದರಿಯಲ್ಲಿ ವಿವಿ ಸಾಗರ ಬಳಿ ಉದ್ಯಾನವನ ನಿರ್ಮಿಸಲು ಚಿಂತನೆ ನಡೆಸಲಾಗಿದೆ. ಹೆಚ್ಚಿನ ಪ್ರವಾಸಿಗರನ್ನು ಸೆಳೆಯುವ ನಿಟ್ಟಿನಲ್ಲಿ ಯೋಜನೆ ರೂಪಿಸಲಾಗುವುದು. ಜಿಲ್ಲೆಯ 3 ತಾಲ್ಲೂಕಗಳಿಗೆ ಕೆ.ಎಂ.ಇ.ಆರ್.ಸಿ ಹಾಗೂ ಡಿಎಂಎಫ್ ಅಡಿ ವರ್ಷಕ್ಕೆ ರೂ.500 ಕೋಟಿಗಳಷ್ಟು ಅಭಿವೃದ್ಧಿ ಅನುದಾನ ದೊರಕುತ್ತದೆ. ಆದರೆ ಚಳ್ಳಕೆರೆ, ಹಿರಿಯೂರು, ಮೊಳಕಾಲ್ಮೂರು ತಾಲ್ಲೂಕುಗಳಿಗೆ ಈ ಅನುದಾನ ದೊರೆಯುವುದಿಲ್ಲ. ಈ ಎಲ್ಲ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು ಅಸಮತೋಲನ ನಿವಾರಣಾ ಸಮತಿ ಜಿಲ್ಲೆಗೆ ವಿಶೇಷ ಅನುದಾನ ಪ್ಯಾಕೇಜ್ ನೀಡುವಂತೆ ಶಿಫಾರಸ್ಸು ಮಾಡಬೇಕು ಎಂದು ಸಚಿವ ಡಿ.ಸುಧಾಕರ್ ಹೇಳಿದರು.

**ಸೆಪ್ಟೆಂಬರ್ ತಿಂಗಳಿಗೆ ಸರ್ಕಾರಕ್ಕೆ ವರದಿ, ಪ್ರೋ.ಗೋವಿಂದ ರಾವ್:** ಆರ್ಥಿಕ ತಜ್ಞರೂ ಆಗಿರುವ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಅಧ್ಯಕ್ಷ ಪ್ರೊ. ಎಂ. ಗೋವಿಂದರಾವ್ ಅವರು ಮಾತನಾಡಿ, 23 ವರ್ಷಗಳ ಹಿಂದೆ ಪ್ರಾದೇಶಿಕ ಅಸಮತೋಲನ ನಿವಾರಣೆಗಾಗಿ ರಾಜ್ಯದ 175 ತಾಲ್ಲೂಕುಗಳನ್ನು ಅಧ್ಯಯನ ಮಾಡಿ ಡಾ. ಡಿ.ಎಂ. ನಂಜುಂಡಪ್ಪ ಅವರು 39 ಅತ್ಯಂತ ಹಿಂದುಳಿದ ತಾಲ್ಲೂಕುಗಳು, 0 ಅತಿ ಹಿಂದುಳಿದ ತಾಲ್ಲೂಕುಗಳು ಹಾಗೂ 35 ಹಿಂದುಳಿದ ತಾಲ್ಲೂಕುಗಳು ಎಂದು ಹಿಂದುಳಿದಿರುವಿಕೆಯನ್ನು ಗುರುತಿಸಿದ್ದರು. ಇದರಲ್ಲಿ ಉತ್ತರ ಕರ್ನಾಟಕ ಭಾಗದ 26 ಅತ್ಯಂತ ಹಿಂದುಳಿದ ತಾಲ್ಲೂಕುಗಳಾಗಿದ್ದರೆ, ದಕ್ಷಿಣ ಕರ್ನಾಟಕದ 13 ತಾಲ್ಲೂಕುಗಳು ಇದ್ದವು. ಇದರ ನಿವಾರಣೆಗಾಗಿ ಮಾಡಿದ ಶಿಫಾರಸ್ಸಿನ ಅನ್ವಯ, ಸರ್ಕಾರ 2007-08 ರಿಂದ 2023-24 ರವರೆಗೆ 45,789 ಕೋಟಿ ರೂ. ಗಳ ಹಂಚಿಕೆಯಾಗಿ, 37,661 ಕೋಟಿ ರೂ. ಬಿಡುಗಡೆಯಾಗಿದ್ದು, ಈ ಪೈಕಿ 34,381 ಕೋಟಿ ರೂ. ಖರ್ಚಾಗಿದೆ. ಪ್ರಸ್ತುತ ತಾಲ್ಲೂಕುಗಳ ಸಂಖ್ಯೆ 240 ಆಗಿದೆ. ಇಷ್ಟೊಂದು ಹಣ ಖರ್ಚು ಮಾಡಿದ ಬಳಿಕ, ತಾಲ್ಲೂಕುಗಳ ಹಿಂದುಳಿದಿರುವಿಕೆ ಕಡಿಮೆ ಆಗಿದೆಯೇ, ಯಾವೆಲ್ಲಾ ಕ್ಷೇತ್ರದಲ್ಲಿ ಏನೇನು ಅಭಿವೃದ್ಧಿಯಾಗಿದೆ. ಹಣ ನೀಡಿದರೂ ಅಭಿವೃದ್ಧಿ ಆಗಲಿಲ್ಲವೆಂದರೆ ಅದಕ್ಕೆ ಕಾರಣಗಳೇನು, ಎಂಬುದನ್ನು ಕೂಲಂಕಷವಾಗಿ ಪರಿಶೀಲಿಸಿ, ರಾಜ್ಯದಲ್ಲಿನ ಅಸಮತೋಲನ ಸರಿಪಡಿಸಿ, ಸಮಗ್ರ ಕರ್ನಾಟಕ ಅಭಿವೃದ್ಧಿಗೊಳ್ಳಲು ಏನೆಲ್ಲ ಕ್ರಮ ವಹಿಸಬೇಕು ಎನ್ನುವ ಉದ್ದೇಶದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯನ್ನು ರಚಿಸಿದ್ದಾರೆ. ಸಮಿತಿಯನ್ನು ಮಾರ್ಚ್-2024ರಲ್ಲಿ ರಚಿಸಲಾಗಿದ್ದರೂ, ಸೆಪ್ಟೆಂಬರ್-2024 ರ ವೇಳೆಗೆ ಪೂರ್ಣ ಪ್ರಮಾಣದಲ್ಲಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಕಾರ್ಯನಿರ್ವಹಿಸಲು ಪ್ರಾರಂಭಿಸಿತು. ರಾಜ್ಯದಲ್ಲಿ ದಕ್ಷಿಣ ಕನ್ನಡ ಜಿಲ್ಲೆ, ಉಡುಪಿ ಮತ್ತು ಬೆಂಗಳೂರು ನಗರ ಜಿಲ್ಲೆಗಳು ಮಾತ್ರ ನಿರೀಕ್ಷಿತ ಮಟ್ಟದಲ್ಲಿ ಅಭಿವೃದ್ದಿಯ ವೇಗ ಹೊಂದಿದ್ದು, ಉಳಿದ ಜಿಲ್ಲೆಗಳಲ್ಲಿ ಅಭಿವೃದ್ಧಿ ವೇಗ ಪಡೆದಿಲ್ಲ. ಮೂಲಭೂತ ಸೌಕರ್ಯ, ವಿದ್ಯುತ್, ರಸ್ತೆ, ಹಣಕಾಸು, ಶಿಕ್ಷಕರು ಮತ್ತು ವಿದ್ಯಾರ್ಥಿ ಅನುಪಾತ, ಸಾಕ್ಷರತೆ, ವೈದ್ಯಕೀಯ ವ್ಯವಸ್ಥೆ, ಕೈಗಾರಿಕೆ, ನೀರಾವರಿ, ಕೃಷಿ, ಸೇವಾ ವಲಯ ಮುಂತಾದ 32 ಸೂಚ್ಯಂಕಗಳನ್ನು ಆಧರಿಸಿ ಸಮಿತಿಯು ವರದಿ ಸಂಗ್ರಹಿಸಲಿದೆ. ಸಮಿತಿಯು ಪ್ರತಿ ಜಿಲ್ಲೆಗೆ ಭೇಟಿ ನೀಡಿ, ಅಲ್ಲಿನ ಜನರ ಅನುಭವ, ಅಭಿಪ್ರಾಯಗಳನ್ನು ಪಡೆದು, ಸಂಗ್ರಹಿಸಿದ ಮಾಹಿತಿ, ಅಧ್ಯಯನದ ವರದಿಗಳ ಆಧಾರದಲ್ಲಿ ಅಸಮತೋಲನ ನಿವಾರಣೆ ಹಾಗೂ ಸಮಗ್ರ ಕರ್ನಾಟಕದ ಅಭಿವೃದ್ಧಿಯನ್ನು ಗಮನದಲ್ಲಿಟ್ಟುಕೊಂಡು ಶಿಫಾರಸ್ಸುಗಳ ವರದಿಯನ್ನು ಮುಂಬರುವ ಸೆಪ್ಟೆಂಬರ್ ವೇಳೆಗೆ ರಾಜ್ಯ ಸರ್ಕಾರಕ್ಕೆ ಸಲ್ಲಿಸಲಿದೆ ಎಂದರು.

**ಮೌಲ್ಯಮಾಪನಕ್ಕೆ ಸಂಸದ ಗೋವಿಂದ ಎಂ ಕಾರಜೋಳ ಒತ್ತಾಯ:**

ಡಾ. ಡಿ.ಎಂ.ನಂಜುಡಪ್ಪ ವರದಿ ಶಿಫಾರಸ್ಸಿನ ಹಿನ್ನಲೆಯಲ್ಲಿ 2007-08 ರಿಂದ 2023-24ನೇ ಸಾಲಿನ ವರೆಗೆ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗೆ ರೂ.45,789.50 ಕೋಟಿ ಅನುದಾನ ಹಂಚಿಕೆ ಮಾಡಲಾಗಿದ್ದು ರೂ.37,661.65 ಕೋಟಿ ಹಣ ಬಿಡುಗಡೆ ಮಾಡಲಾಗಿದೆ. ಇದರಲ್ಲಿ ರೂ.34,381.02 ಕೋಟಿ ವೆಚ್ಚವಾಗಿದೆ. ಆದರೂ ಹಿಂದುಳಿದ ತಾಲ್ಲೂಕುಗಳಲ್ಲಿ ಮೂಲಭೂತ ಸೌಕರ್ಯಗಳು ವೃದ್ಧಿಯಾಗಿಲ್ಲ. ಸರ್ಕಾರದ ಆಸ್ತಿಗಳು ಸೃಜನೆಯಾಗಿಲ್ಲ. ಪ್ರಸ್ತುತ ಸಮಿತಿಯು, ಅನುದಾನ ಸದ್ಬಳಕೆಯಾಗಿದೆಯೋ ಅಥವಾ ಇಲ್ಲವೋ ಎನ್ನುವ ಕುರಿತು ಮೌಲ್ಯಮಾಪನ ಮಾಡಿ, ವರದಿಯನ್ನು ನೀಡಬೇಕಾಗಿ ಸಂಸದ ಗೋವಿಂದ ಎಂ ಕಾರಜೋಳ ಒತ್ತಾಯಿಸಿದರು.

ದೇಶದಲ್ಲಿ ಸದಾ ಬರಗಾಲಕ್ಕೆ ತುತ್ತಾಗುವ 16 ಜಿಲ್ಲೆಗಳ ಪೈಕಿ ಚಿತ್ರದುರ್ಗ ಜಿಲ್ಲೆ ಮೊದಲನೇ ಸ್ಥಾನದಲ್ಲಿದೆ. ಜಿಲ್ಲೆಯ ಬಹುತೇಕ ರೈತರು ಮಳೆ ಆಶ್ರಿತ ಒಣ ಬೇಸಾಯ ನಂಬಿಕೊಂಡಿದ್ದಾರೆ. ಬ್ಯಾಂಕುಗಳು ಸಹ ನಿರೀಕ್ಷಿತ ಮಟ್ಟದಲ್ಲಿ ಅಭಿವೃದ್ಧಿ ಸಾಲ ಸೌಲಭ್ಯ ನೀಡುವಲ್ಲಿ ಕ್ರಮ ವಹಿಸಿಲ್ಲ. ಜಿಲ್ಲೆಯಲ್ಲಿ ಉತ್ತಮ ಖನಿಜ ಸಂಪತ್ತು ಇದೆ. ಈ ಖನಿಜ ಸಂಪತ್ತು ಜಿಲ್ಲೆಯಲ್ಲಿಯೇ ಸಂಸ್ಕರಿಸಿ ರಫ್ತು ಮಾಡಿದರೆ, ಜಿಲ್ಲೆಗೆ ಅಭಿವೃದ್ಧಿಗೆ ಪೂರಕವಾಗಲಿದೆ. ಜನರಿಗೂ ಉದ್ಯೋಗವಕಾಶಗಳು ಲಭಿಸುತ್ತವೆ. ಈ ನಿಟ್ಟಿನಲ್ಲಿ ಸಮಿತಿ ವರದಿ ನೀಡುವಂತೆ ಸಂಸದ ಗೋವಿಂದ ಎಂ ಕಾರಜೋಳ ಹೇಳಿದರು.

## ಅಮಾಯಕ ಹಿಂದೂಗಳ ಹತ್ಯೆ ಖಂಡಿಸಿ ಮೌನ ಪ್ರತಿಭಟನೆ

**ಚಿಕ್ಕಮಗಳೂರು:** ಕಾಶ್ಮೀರದಲ್ಲಿ ನಡೆದ ಅಮಾಯಕ ಹಿಂದೂಗಳ ಹತ್ಯೆಯನ್ನು ಖಂಡಿಸಿ ಬಿಜೆಪಿ ಕಡವಂತಿ ಶಕ್ತಿ ಕೇಂದ್ರದ ಬೊಗಸೆ ಬೂತ್‌ನ ದೇವರಗದ್ದೆ ಬಸ್ ನಿಲ್ದಾಣದ ವೃತ್ತದಲ್ಲಿ ದೀಪ ಬೆಳಗಿಸುವ ಮೂಲಕ ಮೌನ ಪ್ರತಿಭಟನೆ ನಡೆಸಿದರು.

ಈ ಕುರಿತು ಮಾತನಾಡಿದ ಕಡವಂತಿ ಗ್ರಾ.ಪಂ.ಸದಸ್ಯ ವಿನೋದ್ ಬೊಗಸೆ ಪಕ್ಷಾತೀತವಾಗಿ, ಜಾತಿ ರಹಿತವಾಗಿ ನಾವೆಲ್ಲರೂ ಒಂದು-ನಾವೆಲ್ಲರೂ ಹಿಂದೂ, ನಮಗೆಲ್ಲರಿಗೂ ಇರುವುದು ಒಂದೇ ದೇಶ, ಅದು ಭಾರತ ದೇಶ ಎಂಬ ಭಾವನೆಯಿಂದ ಒಟ್ಟಾಗಿ ಬದುಕಬೇಕು ಎಂದರು.

ಹೀನಾಕೃತ್ಯ ಎಸಗಿ, ದೇಶಕ್ಕೆ ಗೌರವ ತೋರಿದವರು, ನಮ್ಮಲ್ಲಿದ್ದು ನಮ್ಮಗಳ ಮೇಲೆ ಸಂಚು ರೂಪಿಸುವ ಪ್ರತಿಯೊಬ್ಬರನ್ನು ಗುಂಡಿಕ್ಕಬೇಕು. ಹಿಂದುಗಳ ಹತ್ಯೆಯನ್ನು ಖಂಡಿಸಿ ದೇಶದಾದ್ಯಂತ ಪ್ರತಿ ಬೂತಿನಲ್ಲೂ ಪ್ರತಿಭಟನೆ ಮಾಡಿ ಪ್ರತಿಯೊಬ್ಬ ಹಿಂದೂಗಳಿಗೂ ಮನವರಿಕೆ ಮಾಡಿಕೊಡಬೇಕು ಎಂದರು.

ಹಿಂದುಗಳ ಹತ್ಯೆಯನ್ನು ಕೇಂದ್ರ ಸರ್ಕಾರ ಗಂಭೀರವಾಗಿ ಪರಿಗಣಿಸಿ ಪಾಕಿಸ್ತಾನಕ್ಕೆ ಭಾರತ ಪ್ರತೀಕಾರದ ದಾಳಿಗೆ ತಿರುಗೇಟು ನೀಡಿದೆ, ಆರ್ಥಿಕತೆ ಮೇಲೆ ಐದಂಶದ ರಾಜಾತಾಂತ್ರಿಕ ಸರ್ಜಿಕಲ್ ಸ್ಟ್ರೈಕ್ ಮಾಡಿದೆ, ಸಿಂಧು ನದಿ ಜಲ ಒಪ್ಪಂದಕ್ಕೆ ತಕ್ಷಣ ಬ್ರೇಕ್, ಅಟ್ಟಾರಿ ಗಡಿ ಬಂದ್, ವೀಸಾರದ್ದು, ರಾಯಬಾರಿ ಕಚೇರಿ ಸಿಬ್ಬಂದಿ ಕಡಿತ, ಭಾರತೀಯ ರಾಯಭಾರಿ ಕಚೇರಿ ಸಿಬ್ಬಂದಿ ಇಳಿಸಿ ತಕ್ಕಪಾಠ ಕಲಿಸಿದೆ ಎಂದು ಹೇಳಿದರು.

## ಪಹಲ್ಗಾಮ್‌ನಲ್ಲಿ ಹಿಂದೂಗಳ ಮಾರಣ ಹೋಮ ಖಂಡಿಸಿ ಸಂಘ ಪರಿವಾರ ಪ್ರತಿಭಟನೆ



**ಬೇಲೂರು:** ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಹಿಂದೂಗಳ ಮಾರಣ ಹೋಮ ಖಂಡಿಸಿ ಬಂಜರಂಗದಳ ಶ್ರೀರಾಮಸೇನೆ ಹಾಗೂ ವಿಶ್ವ ಹಿಂದೂ ಪರಿಷತ್ ವತಿಯಿಂದ ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಟೈರ್‌ಗೆ ಬೆಂಕಿ ಹಚ್ಚಿ ರಸ್ತೆ ತಡೆ ನಡೆಸಿ ಪ್ರತಿಭಟನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಪಾಕಿಸ್ತಾನ ಹಾಗು ಕಾಶ್ಮೀರದ ಭಯೋತ್ಪಾದಕರನ್ನು ಬೆಂಬಲಿಸುತ್ತಿರುವ ವಿರುದ್ಧ ಧಿಕ್ಕಾರ ಕೂಗಿ ಮಾತನಾಡಿದ ಬಿಜೆಪಿ ಮುಖಂಡ ಹಾಗೂ ಸಮಾಜಸೇವಕ ಸಂತೋಷ್ ಪ್ರವಾಸಿಗರನ್ನು ಗುರಿಯಾಗಿಟ್ಟುಕೊಂಡು ಅದರಲ್ಲೂ ಹಿಂದೂಗಳ ಹತ್ಯೆ ಮಾಡುವ ಉದ್ದೇಶದಿಂದಲೆ ನಮ್ಮ ರಾಜ್ಯದ ಮೂವರನ್ನು ಭಯೋತ್ಪಾದಕರು ಗುಂಡಿಟ್ಟು ಅವರನ್ನು ಹತ್ಯೆಗೈದಿದ್ದಾರೆ.

ನರ ಹೇಡಿಗಳಾದ ಕಾಶ್ಮೀರದಲ್ಲಿ ನೆಲೆಸಿರುವ ಮುಸ್ಲಿಂ ಭಯೋತ್ಪಾದಕರನ್ನು ಕಂಡಲ್ಲಿ ಗುಂಡಿಟ್ಟು ಅವರನ್ನು ಹತ್ಯೆ ಮಾಡಬೇಕು. ಹಿಂದೂಗಳೆಂದರೇ ಇತ್ತೀಚಿನ ದಿನಗಳಲ್ಲಿ ಒಂದು ಸಮಾಜಕ್ಕೆ ಕೆಂಗಣ್ಣಿಗೆ ಬೀಳುವ ಕೆಲಸ ಆಗಿದ್ದು, ಅವರ ಹೆಸರು ಕೇಳಿದರೆ ಆ ಸಮಾಜಕ್ಕೆ ತಡೆಯಲಾಗುತ್ತಿಲ್ಲ. ಇವರನ್ನು ಬೆಂಬಲಿಸುವ ನಾಯಕರಿಗೆ ನಾಚಿಕೆಯಾಗಬೇಕು ನಮ್ಮ ದೇಶದಲ್ಲಿ ಯಾವೊಬ್ಬ ಹಿಂದೂಗಳ ಮೇಲೆ ಈ ರೀತಿ ದೌರ್ಜನ್ಯ ದಬ್ಬಾಳಿಕೆ ಹತ್ಯೆಗಳು ನಡೆದರ ಅವರ ದಬ್ಬಾಳಿಕೆ ವಿರುದ್ಧ ಪ್ರತಿಯೊಬ್ಬ ಹಿಂದೂ ಒಗ್ಗಟ್ಟಾಗಬೇಕು.

ನಮ್ಮ ದೇಶದ ಅನ್ನ, ನೀರು, ನೀಡುತ್ತಿರುವ ಭಾರತಾಂಬೆಯ ನಿಜವಾದ ಮಕ್ಕಳಾದರೆ ನಾವು ಪ್ರತಿಯೊಬ್ಬರು ಯಾವುದೇ ಜಾತಿ, ಧರ್ಮ, ಮತ, ಎನ್ನದೆ ಎಲ್ಲರೂ ಒಗ್ಗಟ್ಟಾಗಿ ನಾವು ಹೋರಾಟ ಮಾಡಬೇಕು. ಕೇವಲ ಒಂದು ಪಕ್ಷ ಒಂದು ಜಾತಿ ಒಳ್ಳೆಕೆಗಾಗಿ ಸಂಘಟನೆ ಮಾಡಿಕೊಳ್ಳುವುದಲ್ಲ, ಇಂತಹ ದುಷ್ಕೃತ್ಯ ಎಸೆಗಿರುವ ಪಾಕಿಸ್ತಾನ ನರಹಂತಕರನ್ನು ಇಡೀ ದೇಶದಿಂದ ಹೊರಗಟ್ಟುವ ಕೆಲಸ ಮಾಡಬೇಕು ಎಂದ ಅವರು ಇದು ಕೇವಲ ಸಾಂಕೇತಿಕವಾಗಿ ಬೆಂಕಿ ಹಚ್ಚಿದ್ದೇವೆ. ಮುಂದಿನ ದಿನಗಳಲ್ಲಿ ಇದರ ಬೆಂಕಿ ಕೆನ್ನಾಲಿಗೆ ಎಲ್ಲಿಗೆ ವ್ಯಾಪಿಸುತ್ತಿದೆ ಎಂದು ಕಾದು ನೋಡಿ ಎಂದು ಎಚ್ಚರಿಸಿದರು.

ಭಜರಂಗದಳದ ತಾಲೂಕು ಸಂಚಾಲಕ ನಾಗೇಶ್ ಮಾತನಾಡಿ, ಹಿಂದೂಗಳನ್ನು ಹಾಗು ಒಂದು ಧರ್ಮವನ್ನು ಮಾತ್ರ ಗುರಿಯಾಗಿ ಇಟ್ಟುಕೊಂಡು ದಾಳಿ ಮಾಡುತ್ತಿದ್ದು, ಈ ದಾಳಿಯಲ್ಲಿ ನಮ್ಮ ರಾಜ್ಯದ ಮೂವರು ಹುತಾತ್ಮರಾಗಿದ್ದು, ಒಟ್ಟು 26 ಜನರು ಸಾವಿಗೀಡಾಗಿದ್ದು, ದುರಾದೃಷ್ಟಕರ. ಇಡಿ ರಾಜ್ಯದಲ್ಲಿ ಆ ಭಾಗದ ಹೆಸರೇಳಿಕೊಂಡು ಬದುಕುತ್ತಿರುವ ನಾಯಿಗಳನ್ನು ಕೂಡಲೆ ಹೊಡೆದಟಬೇಕು. ಪಾಕಿಸ್ತಾನ ಪರವಾಗಿ ಇಂತಹ ದುಷ್ಕೃತ್ಯಕ್ಕೆ ಸಹಾಯ ಮಾಡುವವರನ್ನು ಗುಂಡಿಕ್ಕಿ ಹತ್ಯೆ ಮಾಡಬೇಕೆಂದು ಆಗ್ರಹಿಸಿದರು.

ರಾಷ್ಟೀಯ ಬಿಜೆಪಿ ಪ್ರಕೋಷ್ಟ ಸದಸ್ಯರಾದ ಜೆ.ಕೆ. ಕುಮಾರ್ ಮಾತನಾಡಿ, ಈ ನರಮೇಧವನ್ನು ಇಡೀ ಮಾನವ ಕುಲ ವಿರೋಧಿಸಬೇಕು. ನಮ್ಮ ಒಳಗಡೆ ಸೇರಿಕೊಂಡು ನಮ್ಮ ಹಿಂದೂಗಳನ್ನೆ ಗುರಿಯಾಗಿಟ್ಟು ಅವರಿಗೆ ಸಹಾಯ ಮಾಡುವ ಕೆಲ ರಾಜಕಾರಣಿಗಳನ್ನು ಮೊದಲು ಅವರನ್ನು ಸುಡಬೇಕು. ಈಗಾಗಲೇ ನಮ್ಮ ಹಿಂದೂಗಳನ್ನೆ ಒಡೆಯುವಂತಹ ಕೆಲಸ ಮಾಡುತ್ತಿದ್ದು, ಅಲ್ಪಸಂಖ್ಯಾತರನ್ನು ಒಲೈಕೆ ಮಾಡಲು ನಮ್ಮನ್ನು ಕಣ್ಣೊರೆಸುವ ಕೆಲಸ ಮಾಡುವ ಮೂಲಕ ಜಾತಿ ಜಾತಿಗಳ ನಡುವೆ ವೈರತ್ವವನ್ನು ಈ ರಾಜ್ಯ ಸರ್ಕಾರ ಮಾಡುತ್ತಿದೆ. ಮುಂದೆ ನಾವೆಲ್ಲರೂ ಒಗ್ಗಟ್ಟಾಗಿ ಈ ರಾಷ್ಟ್ರವನ್ನು ನಿರ್ಮಾಣ ಮಾಡಲು ಪ್ರತಿಯೊಬ್ಬರು ಕಂಕಣ ಬದ್ಧರಾಗಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಆರ್‌ಎಸ್ ಎಸ್ ಪ್ರಮುಖ್ ಪ್ರಸನ್ನ, ಡಾ.ನಾರಾಯಣಸ್ವಾಮಿ ಮೋಹನ, ಸುಮಂತ್, ಮಂಜು, ಭರತ್, ತೀರ್ಥಂಕರ್, ದೀಪು, ಸಂಜು, ವೇದಬ್ರಹ್ಮಮಂಜುನಾಥ್, ವಿನಯ್, ಧನಪಾಲ್, ಮಹೇಶ್, ಸಂತೋಷ್, ಗಜೇಂದ್ರ ಸೇರಿದಂತೆ ಇತರರು ಹಾಜರಿದ್ದರು.

### 'ಜನಸ್ಪಂದನ' ದಲ್ಲಿ ಅರ್ಜಿಗಳ ಮಹಾಪೂರ

# ಜನರ ಸಮಸ್ಯೆಗಳ ಶೀಘ್ರ ಪರಿಹಾರ- ಆಡಳಿತ ಸುಧಾರಣೆಗೆ 'ಜನಸ್ಪಂದನ' ಸಹಕಾರಿ : ಮಧು ಬಂಗಾರಪ್ಪ



**ಶಿವಮೊಗ್ಗ:** ಜನರ ಸಮಸ್ಯೆಗಳನ್ನು ಆಲಿಸಿ, ಶೀಘ್ರ ಪರಿಹಾರ ದೊರಕಿಸಲು ಮತ್ತು ಆಡಳಿತ ಸುಧಾರಣೆಯಲ್ಲಿ 'ಜನಸ್ಪಂದನ' ಕಾರ್ಯಕ್ರಮ ಬಹಳ ಮುಖ್ಯ ಪಾತ್ರ ವಹಿಸುತ್ತದೆ ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪ ತಿಳಿಸಿದರು.

ನಾಗರೀಕರ ಅಹವಾಲುಗಳನ್ನು ಆಲಿಸಿ ಸೂಕ್ತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಸೋಮವಾರ ಈಡಿಗರ ಸಭಾ ಭವನದಲ್ಲಿ ಏರ್ಪಡಿಸಲಾಗಿದ್ದ ಜಿಲ್ಲಾ ಮಟ್ಟದ 'ಜನಸ್ಪಂದನ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ತಾಲ್ಲೂಕುಗಳಲ್ಲಿ ಜನಸ್ಪಂದನ ಕಾರ್ಯಕ್ರಮ ಮಾಡುವುದರಿಂದ ಎಲ್ಲ ಸಾರ್ವಜನಿಕರಿಗೆ ಅನುಕೂಲವಾಗುತ್ತದೆ. ಚುನಾಯಿತ ಪ್ರತಿನಿಧಿಗಳು,ಅಧಿಕಾರಿಗಳು ಇಲ್ಲಿ ಹಾಜರಾಗುವ ಕಾರಣ ಜನರ ಸಮಸ್ಯೆಗಳು ಅರ್ಥ ಆಗುತ್ತವೆ. ಪರಹಾರಕ್ಕೆ ಅನೇಕ ಕಾನೂನು ಇದ್ದು, ಅವುಗಳನ್ನು ಅನ್ವಯಿಸಿ, ಸಾರ್ವಜನಿಕರಿಗೆ ಅನುಕೂಲ ಮಾಡಲಾಗುವುದು. ಮುಂದಿನ ದಿನಗಳಲ್ಲಿ ಎಲ್ಲ ತಾಲ್ಲೂಕುಗಳಲ್ಲಿ ಜನಸ್ಪಂದನ ಕಾರ್ಯಕ್ರಮ ಮಾಡಲಾಗುವುದು. ಮಾನ್ಯ ಮುಖ್ಯಮಂತ್ರಿಗಳು ಸಹ ಬೇರೆ ಬೇರೆ ಜಿಲ್ಲೆಗಳಿಗೆ ತೆರಳಿ ಜನಸ್ಪಂದನ ಸಭೆ ನಡೆಸಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುತ್ತಾರೆ.

ಆಡಳಿತ ಸುಧಾರಣೆಯಲ್ಲಿ ಇಂತಹ ಕಾರ್ಯಕ್ರಮಗಳು ಬಹಳ ಮುಖ್ಯ ಪಾತ್ರ ವಹಿಸುತ್ತವೆ. ಯಾವುದೇ ಸಮಸ್ಯೆಗಳಿದ್ದರೂ ಚರ್ಚಿಸಿ, ಬಗೆಹರಿಸುವ ನಿಟ್ಟಿನಲ್ಲಿ ಪ್ರಯತ್ನ ಮಾಡೋಣ ಎಂದರು.

ಕಾರ್ಯಕ್ರಮದಲ್ಲಿ ಸಾಗರ ಕ್ಷೇತ್ರದ ಶಾಸಕರಾದ ಬೇಳೂರು ಗೋಪಾಲಕೃಷ್ಣ ಮಾತನಾಡಿ, ಕ್ಷೇತ್ರದಲ್ಲಿನ ಸಮಸ್ಯೆಗಳ ಕುರಿತು ನೇರವಾಗಿ ಮಾತನಾಡಿ, ಇತ್ಯರ್ಥ ಪಡಿಸಲು ಇಡೀ ಜಿಲ್ಲಾ ಆಡಳಿತ ಯಂತ್ರವೇ ಇಂದು ಇಲ್ಲಿ ಹಾಜರಿದ್ದು, ಮುಕ್ತ ಚರ್ಚೆ ನಡೆಯಲಿ, ಸಮಸ್ಯೆಗಳನ್ನು ಬಗೆಹರಿಸುವ ನಿಟ್ಟಿನಲ್ಲಿ ಉತ್ತಮ ಕಾರ್ಯಕ್ರಮವಾಗಲಿ ಎಂದರು.

ಚುನಾಯಿತ ಪ್ರತಿನಿಧಿಗಳು, ಪ.ಪಂ. ಅಧ್ಯಕ್ಷ ನಾಗಪ್ಪ, ಪ.ಪಂ ಉಪಾಧ್ಯಕ್ಷೆ ಚಂದ್ರಕಲಾ,ಗ್ಯಾರಂಟಿ ಯೋಜನೆಗಳ ತಾಲ್ಲೂಕು ಅಧ್ಯಕ್ಷ ಚಿದಂಬರ, ಕೆಡಿಪಿ ಸದಸ್ಯರು, ಜಿಲ್ಲಾಧಿಕಾರಿ ಗುರುದತ್ತ ಹೆಗಡೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಿಥುನ್ ಕುಮಾರ್, ಅಪರ ಜಿಲ್ಲಾಧಿಕಾರಿ ಸಿದ್ಧಲಿಂಗ ರೆಡ್ಡಿ, ಜಿ.ಪಂ ಉಪ ಕಾರ್ಯದರ್ಶಿ ಜಯಲಕ್ಷ್ಮಿ, ಸಾಗರ ಉಪ ವಿಭಾಗದ ಅರಣ್ಯ ಸಂರಕ್ಷಣಾಧಿಕಾರಿ ಮೋಹನ್ ಕುಮಾರ್, ಹೊಸನಗರ ಪ್ರಭಾರ ಎಸಿ ರಶ್ಮಿ, ಪ.ಪಂ, ಗ್ರಾ.ಪಂ ಗಳ ಗಳ ಚುನಾಯಿತ ಪ್ರತಿನಿಧಿಗಳು, ಸಾರ್ವಜನಿಕರು ಹಾಜರಿದ್ದರು.

**ಅರ್ಜಿಗಳ ಮಹಾಪೂರ: ಸಚಿವರಿಂದ ಸ್ವೀಕಾರ :** ಸೊರಬ ತಾಲ್ಲೂಕು ತಲಗಡ್ಡೆ ಗ್ರಾಮದ ಗಣಪತಿ ಬಿ ಇವರ ಜಮೀನಿಗೆ ಗಂಗಾ ಕಲ್ಯಾಣ ಯೋಜನೆಯಡಿ 2023 ರಲ್ಲೇ ಬೋರ್ ವೆಲ್ ಮಂಜೂರಾದರೂ ಇದುವರೆಗೆ ಬೋರ್ ಕೊರೆದಿಲ್ಲ, ಶೀಘ್ರದಲ್ಲೇ ಬೋರ್ ಕೊರೆಸಬೇಕೆಂದು ಅರ್ಜಿ ಸಲ್ಲಿಸಿದರು.

80 ವರ್ಷದ ಮಳವಳ್ಳಿ ಗ್ರಾಮದ ಪಾರ್ವತಮ್ಮ ಎಂಬುವವರನ್ನು 2021 ರಲ್ಲಿ ಪಡಿತರ ಚೀಟಿಯಲ್ಲಿ ಮರಣ ಹೊಂದಿರುವುದಾಗಿ ನಮೂದಿಸಿ ಪಡಿತರ ಚೀಟಿ ರದ್ದುಪಡುಸಲಾಗಿದೆ. ತಾವು ಜೀವಂತವಾಗಿದ್ದು ವಂಚಿತರಾಗಿದ್ದ ಸೌಲಭ್ಯಗಳನ್ನು ನೀಡಬೇಕೆಂದು ಖುದ್ದು ಸಚಿವರಿಗೆ ಅರ್ಜಿ ಸಲ್ಲಿಸಿದರು. ಸಚಿವರು ಪ್ರತಿಕ್ರಿಯಿಸಿ, ಈ ಅಚಾತುರ್ಯವೆಸಗಿ ತೊಂದರೆಪಡಿಸಿದ ಅಧಿಕಾರಿ ವಿರುದ್ದ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದರು.


ರಂಗನಾಥ್ ಅರ್ಜಿ ಸಲ್ಲಿಸಿ ಹೊಸನಗರದ 6 ನೇ ವಾರ್ಡ್‌ನಲ್ಲಿ ಅಸಮರ್ಪಕ ವಿದ್ಯುತ್ ಸಂಪರ್ಕದಿಂದಾಗು ತುಂಬಾ ತೊಂದರೆಯಾಗುತ್ತಿದೆ. ರಿಪ್ಪನ್ ಪೇಟೆಯಲ್ಲಿ ಎಕ್ಸ್ ಪ್ರೆಸ್ ಲೈನ್ ಅಳವಡಿಸಿ ಸಮಸ್ಯೆ ಗೆ ಪರಿಹಾರ ಒದಗಿಸಬೇಕೆಂದು ಮನವಿ ಮಾಡಿದರು.

ಮುಂಬಾರು ಗ್ರಾ.ಪಂ ವ್ಯಾಪ್ತಿಯಲ್ಲಿ ಕುಡಿಯುವ ನೀರು ಮತ್ತು ವಿದ್ಯುತ್ ಸಮಸ್ಯೆ ಹೆಚ್ಚಿದ್ದು ಬಗೆಹರಿಸುವಂತೆ ಮುಂಬಾರು ಗ್ರಾ.ಪಂ. ಅಧ್ಯಕ್ಷರು ಮನವಿ ಮಾಡಿದರು. ಕೆರೆಕೊಪ್ಪ ಟೀಕಪ್ಪ ಯೋಗ ನಾಯಕ್, ಸ.ನಂ.79 ರಲ್ಲಿ ತಮ್ಮ ಅಜ್ಜನ ಕಾಲದಿಂದ ಜಾಗದ ಅನುಭೋಗದಲ್ಲಿದ್ದು, ಈ ಜಾಗವು ಗೋಮಾಳ ಅರಣ್ಯ ಭೂಮಿಯಾಗಿರುತ್ತದೆ. ಬಗರ್ ಹುಕುಂ ಅರ್ಜಿ ಸಲ್ಲಿಸಿದ್ದು, ಇಲ್ಲಿ ಜಂಟಿ ಸರ್ವೇ ನಡೆಸಿ ಜಾಗ ಮಂಜೂರು ಮಾಡಬೇಕೆಂದು ಮನವಿ ಸಲ್ಲಿಸಿದರು.

ನಂಜುವಳ್ಳಿ ಗ್ರಾಮದ ಶೇಖರಪ್ಪ , ಸ.ನಂ.4 ರಲ್ಲಿ 8 ಎಕರೆ ಜಾಗದ ಕುರಿತು ತಮ್ಮ ಕುಟುಂಬದ ಇಬ್ಬರ ಹೆಸರಲ್ಲಿ ಜಂಟಿ ಪಹಣಿ ಇದ್ದು, ಶರಾವತಿ ವಸತಿ ಸೌಲಭ್ಯ ಕಲ್ಪಿಸುವ ವೇಳೆ ಈ ಜಮೀನು ಅರಣ್ಯ ಭೂಮಿ ಎಂದು ನಮೂದಾಗಿರುತ್ತದೆ. ಡಿ ರಿಸರ್ವ್ ಮಾಡುವ ಪ್ರಸ್ತಾವನೆಯಲ್ಲಿ ತಮ್ಮ ಕುಟುಂಬ ಮತ್ತು ತಮ್ಮ ಊರಿನ ಹೆಸರು ಸೇರಿಸಬೇಕು ಎಂಸುಮನವಿಮಾಡಿದರು.

ಮಜರೆ ಬಾಳೆಹಳ್ಳದ ಹರೀಶ್, ಸ.ನಂ. 154 ರಲ್ಲಿ ತಾವು 40 ವರ್ಷಗಳಿಂದ 4 ಎಕರೆ ಜಮೀನು ಬಗರ್ ಹುಕುಂ ಜಮೀನು ಹೊಂದಿದ್ದು, ನಿಯಮಾನುಸಾರ ಬಗರ್ ಹುಕುಂ ಅರ್ಜಿ ಸಹ ಸಲ್ಲಿಸಿರುತ್ತೇನೆ, ಜಮೀನು ಮಂಜೂರು ಮಾಡಿಸಿಕೊಡಬೇಕಾಗಿ ಕೋರಿ ಅರ್ಜಿ ಸಲ್ಲಿಸಿದರು.

# ಗಂಭೀರ ಆರೋಗ್ಯ ಸಮಸ್ಯೆಗಳ ಪತ್ತೆಗಾಗಿ ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ಅಳವಡಿಸಿರುವ ಇಸಿಜಿ ಯಂತ್ರಗಳ ಸದುಪಯೋಗ ಪಡೆಯಿರಿ: ಡಿಹೆಚ್‌ಓ ಡಾ.ಯಲ್ಲಾ ರಮೇಶಬಾಬು



**ಬಳ್ಳಾರಿ:** ವ್ಯಕ್ತಿಗೆ ಆಕಸ್ಮಿಕವಾಗಿ ಒದಗುವ ಆರೋಗ್ಯದ ಸಮಸ್ಯೆಗಳನ್ನು ಗುರ್ತಿಸಲು ಇಸಿಜಿ ಮಷಿನ್ ಅತ್ಯಂತ ಮಹತ್ವದ್ದಾಗಿದ್ದು, ಅದರಲ್ಲೂ ಮುಖ್ಯವಾಗಿ ಹೃದಯದ ಮೌಲ್ಯಮಾಪನ ಮಾಡುವ ಮೂಲಕ ಅತ್ಯಂತ ಸರಳವಾಗಿ ಮತ್ತು ವೇಗವಾಗಿ ಪರೀಕ್ಷಿಸಿ ಹೃದಯದ ಸಮಸ್ಯೆ ಹಾಗೂ ಆರೋಗ್ಯವನ್ನು ಮೇಲ್ವಿಚಾರಣೆ ಮಾಡುವ ಇಸಿಜಿ ಯಂತ್ರಗಳ ಗ್ರಾಮೀಣ ಜನತೆಯು ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಸೋಮವಾರ ಕಂಪ್ಲಿ ತಾಲೂಕಿನ ಎಮ್ಮಿಗನೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಇಸಿಜಿ ಮೂಲಕ ವ್ಯಕ್ತಿಯ ಆರೋಗ್ಯ ಪರೀಕ್ಷಾ ಕಾರ್ಯ ಪರಿಶೀಲಿಸಿ ಅವರು ಮಾತನಾಡಿದರು.

ಜಿಲ್ಲೆಯಾದ್ಯಂತ 2 ತಾಲ್ಲೂಕು ಆಸ್ಪತ್ರೆ, 6 ಸಮುದಾಯ ಆರೋಗ್ಯ ಕೇಂದ್ರ, 29 ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು 09 ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಇಸಿಜಿ ಮೆಷಿನ್ ಲಭ್ಯವಿದ್ದು, ಇಲ್ಲಿ ತಜ್ಞರು ಹಾಗೂ ತರಬೇತಿ ಪಡೆದ ವೈದ್ಯರು ಪರೀಕ್ಷೆ ಮಾಡಲು ಅವಕಾಶ ಮಾಡಲಾಗಿದೆ ಎಂದರು.

ಯಾವ ಲಕ್ಷಣಗಳಿಗೆ ಇಸಿಜಿ ಮಾಡಿಸಬೇಕು?"


ಎದೆ ನೋವು, ತಲೆತಿರುಗುವಿಕೆ, ತಲೆತಿರುಗುವಿಕೆ ಅಥವಾ ಗೊಂದಲ, ಹೃದಯ ಬಡಿತ ಏರಿಳಿತ, ತ್ವರಿತ ನಾಡಿಮಿಡಿತ, ಉಸಿರಾಟದ ತೊಂದರೆ, ದೌರ್ಬಲ್ಯ, ಆಯಾಸ, ಅಥವಾ ವ್ಯಾಯಾಮ ಮಾಡುವ ಸಾಮರ್ಥ್ಯ ಕಡಿಮೆಯಾಗುವುದು.

**ಇಸಿಜಿಯಿಂದ ಸ್ಥಳದಲ್ಲಿಯೇ ಗುರ್ತಿಸಬಹುದಾದ ಸಮಸ್ಯೆಗಳು:** ಹೃದಯದಲ್ಲಿ ನಿರ್ಬಂಧಿಸಲಾದ ಅಥವಾ ಕಿರಿದಾದ ಅಪಧಮನಿಗಳು (ಕರೋನರಿ ಅಪಧಮನಿ ಕಾಯಿಲೆ) ಎದೆ ನೋವು ಅಥವಾ ಹೃದಯಾಘಾತಕ್ಕೆ ಕಾರಣವಾಗಿದ್ದರೆ. ಈ ಹಿಂದೆ ಹೃದಯಾಘಾತವಾಗಿದ್ದರೆ, ಪೇಸ್‌ಮೇಕರ್‌ನಂತಹ ನಿರ್ದಿಷ್ಟಹೃದಯ ಕಾಯಿಲೆ ಚಿಕಿತ್ಸೆಯ ಕಾರ್ಯನಿರ್ವಹಣೆ, ಅನಿಯಮಿತ ಹೃದಯ ಬಡಿತಗಳು (ಆರ್ಹೆತ್ಮಿಯಾ).

**ಟೆಲಿ ಐಸಿಯು ಹಬ್ ಮೂಲಕ ಜಿಲ್ಲೆಯಲ್ಲಿ ಅನೂಕೂಲ :** ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ತಪಾಸಣೆ ಮಾಡಿದಾಗ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ತಕ್ಷಣ ತಾಲೂಕು ಮಟ್ಟದ ಅಸ್ಪತ್ರೆಗೆ ದಾಖಲಿಸಿ, ಅಲ್ಲಿಯ ತಜ್ಞರು ಜಿಲ್ಲಾ ಆಸ್ಪತ್ರೆಯಲ್ಲಿ ಅಳವಡಿಸಿರುವ ಟೆಲಿ ಐಸಿಯು ಹಬ್‌ನ ತಜ್ಞವೈದ್ಯರಿಗೆ ನೇರವಾಗಿ ರೋಗಿಯನ್ನು ವಿಡಿಯೋ ಮುಲಕ ಸಂಪರ್ಕಿಸಿ ಚಿಕಿತ್ಸೆ ಒದಗಿಸಲು ಅಥವಾ ತುರ್ತು ಅಗತ್ಯವೆನಿಸಿದರೆ ಜಿಲ್ಲಾ ಆಸ್ಪತ್ರೆ ಅಥವಾ ಬಳ್ಳಾರಿ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಕೇಂದ್ರ ಕ್ಕೆ ದಾಖಲಿಸಲು ಸಹಕಾರಿಯಾಗಿ ವ್ಯಕ್ತಿಯ ಜೀವ ಉಳಿಸಲು ಸಹಾಯಕವಾಗಿದೆ. ಈ ಹಿನ್ನಲೆಯಲ್ಲಿ ಸಾರ್ವಜನಿಕರು ಜಿಲ್ಲೆಯ ಎಲ್ಲ ಆಸ್ಪತ್ರೆಗಳಲ್ಲಿ ಲಭ್ಯವಿರುವ ಇಸಿಜಿ ಮೆಷಿನ್‌ಗಳ ಸದುಪಯೋಗ ಪಡೆಯಲು ವಿನಂತಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್, ಅಡಳಿತ ವೈದ್ಯಾಧಿಕಾರಿ ಡಾ.ಫಾರೂಖ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಅರೋಗ್ಯ ನಿರೀಕ್ಷಣಾಧಿಕಾರಿ ಬಸವನಗೌಡ, ಕೃಷ್ಣಮೂರ್ತಿ, ಸಿಬ್ಬಂದಿಯವರಾದ ಪೂಜಾ, ಉಮಾಮಹೇಶ್ವರಿ, ಕನಕಪ್ಪ, ಅಶ್ವಿನಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಚೀಟಿ ವ್ಯವಹಾರ: ಯುವಕನ ಕೊಲೆಯಲ್ಲಿ ಅಂತ್ಯ



**ತರೀಕೆರೆ:** ಚೀಟಿ ಹಣದ ವಿಚಾರವಾಗಿ ಯುವಕನನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಚಿಕ್ಕಮಗಳೂರು ಜಿಲ್ಲೆಯ ತರೀಕೆರೆ ತಾಲೂಕಿನ ಅಮೃತಾಪುರ ಗ್ರಾಮದಲ್ಲಿ ನಡೆದಿದೆ. ಸಂಜುನಾಯ್ಕ (26) ಎಂಬ ಯುವಕನನ್ನು ರುದ್ರೇಶ್‌ನಾಯ್ಕ ಎಂಬಾತ ಹತ್ಯೆ ಮಾಡಿದ್ದಾನೆ.

ಕೊಲೆ ತಪ್ಪಿಸಲು ಬಂದ ಅವಿನಾಶ್ ಎಂಬಾತನಿಗೂ ರುದ್ರೇಶ್ ಕಚ್ಚಿ ಗಾಯಗೊಳಿಸಿದ್ದಾನೆ. ಅಮೃತಾಪುರ ಸೇವಾಲಾಲ್ ಸಂಘದಲ್ಲಿ ಚೀಟಿ ವ್ಯವಹಾರ ನಡೆಸಲಾಗುತ್ತಿತ್ತು, ಸಂಜುನಾಯ್ಕ ಚೀಟಿ ಸರಿಯಾಗಿ ಕಟ್ಟದೇ ಗಲಾಟೆ ಮಾಡುತ್ತಿದ್ದ. ಹೀಗಾಗಿ ಚೀಟಿ ಸದಸ್ಯರು ನೀನು ಈ ಚೀಟಿಗೆ ಬೇಡ ಎಂದು ವಾಪಸ್ ಕಳುಹಿಸಿದ್ದರಂತೆ, ಹೀಗಾಗಿ ಮನೆಗೆ ಬಂದ ಸಂಜುನಾಯ್ಕ ಚೀಟಿ ಸದಸ್ಯರ ಜೊತೆ ಫೋನಿನಲ್ಲಿ ವಾಗ್ವದ ನಡೆಸಿದ್ದ, ಈ ವಾಗ್ವದವು ನೇರ ಜಗಳಕ್ಕೆ ತಿರುಗಿದೆ. ಈ ವೇಳೆ ರುದ್ರೇಶ್, ಸಂಜುನಾಯ್ಕಗೆ ದೊಣ್ಣೆಯಲ್ಲಿ ಹೊಡೆದಿದ ಪರಿಣಾಮ ತೀವ್ರ ರಕ್ತಸ್ರಾವದಿಂದ ಸಂಜುನಾಯ್ಕ ಸ್ಥಳದಲ್ಲೇ ಸಾವನ್ನಪ್ಪಿದ್ದು, ಕೊಲೆ ಮಾಡಿದ ಆರೋಪಿ ರುದ್ರೇಶ್ ನಾಯ್ಕನನ್ನು ಪೊಲೀಸರು ವಶಕ್ಕೆ ಪಡೆದಿದ್ದು, ತರೀಕೆರೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

# ಬೇಸಿಗೆ ಆರಂಭದಲ್ಲೇ ಬತ್ತಿಹೋದ 53 ಕೆರೆಗಳು ಪೂರ್ತಿ ಖಾಲಿ

ರಾಜಧಾನಿಯಲ್ಲಿ ಬೇಸಿಗೆ ಆರಂಭದಲ್ಲಿಯೇ ತೀವ್ರ ಬಿಸಿಲಿನಿಂದಾಗಿ 53 ಕೆರೆಗಳು ಒಣಗಿವೆ. ಅಲ್ಲದೆ, ಸಾಕಷ್ಟು ಕೆರೆಗಳಲ್ಲಿ ನೀರಿನ ಸಂಗ್ರಹ ಮಟ್ಟವೂ ಕುಸಿದಿದೆ.

ಕಳೆದ ವರ್ಷ ನವೆಂಬರ್‌ವರೆಗೂ ನಗರದಲ್ಲಿ ಉತ್ತಮ ಮಳೆಯಾಗಿತ್ತು. ಪರಿಣಾಮ ಬಹುತೇಕ ಕೆರೆಗಳೂ ಭರ್ತಿಯಾಗಿದ್ದವು. ಆದರೆ, ಪ್ರಸಕ್ತ ವರ್ಷ ಬೇಸಿಗೆಗೂ ಮುನ್ನವೇ ಕೆರೆಗಳು ನೀರಿಲ್ಲದೆ ಆಟದ ಮೈದಾನದಂತಾಗಿವೆ. ಬಿಬಿಎಂಪಿ ವ್ಯಾಪ್ತಿಯ 202 ಕೆರೆಗಳಲ್ಲಿ 183 ಕೆರೆಗಳು ಜೀವಂತ ಕೆರೆಗಳಾಗಿದ್ದು, 53 ಕೆರೆಗಳು ಬೇಸಿಗೆಯ ತೀವ್ರತೆಯಿಂದಾಗಿ ಸಂಪೂರ್ಣವಾಗಿ ಬತ್ತಿ ಹೋಗಿವೆ. ಉಳಿದ 130 ಕೆರೆಗಳಲ್ಲಿನ ನೀರಿನ ಮಟ್ಟವೂ ತೀವ್ರವಾಗಿ ಕುಸಿದಿದ್ದು, ಒಟ್ಟು ನೀರಿನ ಸಂಗ್ರಹ ಪ್ರಮಾಣ ಕೇವಲ ಶೇ. 40ಕ್ಕೆ ಇಳಿದಿದೆ.

ಏಪ್ರಿಲ್ 5ರ ವೇಳೆಗೆ ಬಿಬಿಎಂಪಿ ವ್ಯಾಪ್ತಿಯ ಕೆರೆಗಳ ಒಟ್ಟು ನೀರು ಹಿಡಿದಿಟ್ಟುಕೊಳ್ಳುವ ಸಾಮರ್ಥ್ಯ 31,505.48 ದಶಲಕ್ಷ ಲೀಟರ್ ಆಗಿರಬೇಕು. ಆದರೆ, ಕೇವಲ 10,980.01 ದಶಲಕ್ಷ ಲೀಟರ್ ಮಾತ್ರ ಸಂಗ್ರಹವಾಗಿದೆ. ಇದು ನಿರೀಕ್ಷಿತ ಸಾಮರ್ಥ್ಯದ ಕೇವಲ ಶೇ. 35ರಷ್ಟು ಎನ್ನುತ್ತವೆ ಬಿಬಿಎಂಪಿಯ ಮೂಲಗಳು.

**ಅಂತರ್ಜಲ ಅವಲಂಬಿತರಿಗೆ ಪರದಾಟ**: ಅಲ್ಲದೆ, ಅದರ ಹಿಂದಿನ ವರ್ಷ ವಾಡಿಕೆಯಷ್ಟು ಮಳೆಯಾಗಿರಲಿಲ್ಲ. ಆ ಕಾರಣದಿಂದ, ಸುಮಾರು 3 ಲಕ್ಷ ಕೊಳವೆ ಬಾವಿಗಳ ಪೈಕಿ ಶೇ. 75ರಷ್ಟು ಬತ್ತಿ ಹೋಗಿದ್ದವು. ಆನಂತರ ಕಳೆದ ಮೇ ಆರಂಭದಿಂದ ಮಳೆ ಶುರುವಾದ ಪರಿಣಾಮ ನಗರದ ಸಾಕಷ್ಟು ಕೆರೆಗಳಲ್ಲಿ ನೀರು ತುಂಬಿತು. ಪರಿಣಾಮವಾಗಿ ಸುತ್ತಲಿನ ಬೋರ್‌ವೆಲ್‌ಗಳು ರೀಚಾರ್ಜ್ ಆದವು. ಆದರೆ, ಕಳೆದ ವರ್ಷ ಉತ್ತಮ ಮಳೆಯಾಗಿಯೂ, ಈ ವರ್ಷ ಬೇಸಿಗೆ ಆರಂಭದಲ್ಲಿಯೇ ಶೇ. 40ರಷ್ಟು ಬೋರ್‌ವೆಲ್‌ಗಳು ಬತ್ತಿವೆ. ಅಂತರ್ಜಲವನ್ನೇ ಅವಲಂಬಿಸಿದವರಿಗೆ ನೀರಿಗೆ ಪರದಾಟ ಶುರುವಾಗಿದೆ. ಮಳೆ ನೀರು ಕೊಯ್ಲು ವಿಧಾನ ಅಳವಡಿಸಿಕೊಳ್ಳದಿರುವುದು ಮತ್ತು ಕೆರೆಗಳ ಹೂಳು ತೆಗೆದು ಮಳೆ ನೀರು ಸಂಗ್ರಹಣಾ ಸಾಮರ್ಥ್ಯ ಹೆಚ್ಚಿಸುವ ಕೆಲಸ ಆಗದಿರುವುದು ಇದಕ್ಕೆ ಕಾರಣವಾಗಿದೆ.

**ಹೂಳು ತೆಗೆಸಲು ಸೂಕ್ತ ಕಾಲ**: ಮುಂಗಾರು ಶುರುವಾಗಲು ಇನ್ನೂ ಎರಡು ತಿಂಗಳಿದೆ. ಬಿಬಿಎಂಪಿ, ಜಲಮಂಡಳಿ, ಕೆರೆ ಅಭಿವೃದ್ಧಿ ಪ್ರಾಧಿಕಾರ ಈಗಲೇ ಕೆರೆಗಳ ಒತ್ತುವರಿ ತೆರವುಗೊಳಿಸಿದರೆ ಮತ್ತು ಹೂಳು ತೆಗೆದು ಅಚ್ಚುಕಟ್ಟು ಮಾಡಿದರೆ ಮಳೆ ನೀರು ಸಂಗ್ರಹವಾಗಲಿದೆ.



ಅಲ್ಲದೆ, ರಾಜಕಾಲುವೆಗಳು, ಮಳೆ ನೀರು ಚರಂಡಿಗಳನ್ನು ದುರಸ್ತಿ ಮಾಡಿ, ಮಳೆ ನೀರು ಮಾತ್ರ ಕೆರೆಗೆ ಸೇರುವಂತೆ ಮಾಡಿದರೆ ಉಪಯುಕ್ತವಾಗಲಿದೆ. ಈ ನಿಟ್ಟಿನಲ್ಲಿ ಸಂಬಂಧಪಟ್ಟ ಅಧಿಕಾರಿಗಳು ಶೀಘ್ರ ಕಾರ್ಯಚಟುವಟಿಕೆ ಆರಂಭಿಸಬೇಕು. ನಾಗರಿಕರೂ ಈಗಲೇ ಮಳೆ ನೀರು ಕೊಯ್ಲು ಅಳವಡಿಕೆ ಮಾಡಿಕೊಳ್ಳಬೇಕು ಎನ್ನುತ್ತಾರೆ ಪರಿಸರವಾದಿ, ಕೆರೆಗಳ ತಜ್ಞ ರಾಘವೇಂದ್ರ ಬಿ. ಪಚ್ಚಾಪುರ.

**ನೀರಿನ ಸಂಗ್ರಹ ಕುಸಿತ**: ಆರ್.ಆರ್. ನಗರದ ವಲಯದಲ್ಲಿ ಕೆರೆಗಳು ಒಣಗಿರುವ ಪರಿಣಾಮ ಸಾಕಷ್ಟು ಕೊಳವೆಬಾವಿಗಳು ಬತ್ತಿವೆ. ಈ ವ್ಯಾಪ್ತಿಯ 33 ಕೆರೆಗಳಲ್ಲಿ 12 ಕೆರೆಗಳು ಬತ್ತಿ ಹೋಗಿವೆ. 3032.31 ದಶಲಕ್ಷ ಲೀಟರ್ ನೀರು ಸಂಗ್ರಹ ಸಾಮರ್ಥ್ಯವಿದ್ದ ಈ ಕೆರೆಗಳಲ್ಲಿ ಸದ್ಯ ಕೇವಲ 393.59 ದಶಲಕ್ಷ ಲೀಟರ್ ನೀರಿದೆ. ಉಲ್ಲಾಳ ಕೆರೆ ಸುತ್ತಲಿನ 150ಕ್ಕೂ ಹೆಚ್ಚು ಬೋರ್‌ವೆಲ್‌ಗಳು ಬತ್ತಿವೆ. ಇನ್ನು, ದಾಸರಹಳ್ಳಿ ವಲಯದ 12 ಕೆರೆಗಳ ಪೈಕಿ 6 ಕೆರೆಗಳು ಬತ್ತಿ ಹೋಗಿದ್ದು, 1740.31 ದಶಲಕ್ಷ ಲೀಟರ್ ನೀರು ಹಿಡಿದಿಡಬಹುದಾದ ಕೆರೆಗಳಲ್ಲೀಗ ಈಗ 140.62 ದಶಲಕ್ಷ ಲೀಟರ್ ಲಭ್ಯವಿದೆ.

ದಕ್ಷಿಣ ವಲಯದ 1339.26 ದಶಲಕ್ಷ ಲೀಟರ್ ನೀರು ಸಂಗ್ರಹಿಸಬಹುದಾದ ಒಟ್ಟು 7 ಕೆರೆಗಳಿದ್ದು, ಇವುಗಳಲ್ಲಿ 911.56 ದಶಲಕ್ಷ ಲೀಟರ್ ನೀರಿದೆ. ಪೂರ್ವ ವಲಯದ ಐದು ಕೆರೆಗಳಲ್ಲಿ ಎರಡು ಒಣಗಿವೆ. ಉಳಿದ ಕೆರೆಗಳು 4,882 ದಶಲಕ್ಷ ಲೀಟರ್ ನೀರು ಸಂಗ್ರಹಿಸಬಹುದಾಗಿದ್ದು, 2,725.10 ದಶಲಕ್ಷ ಲೀಟರ್ ಹಾಗೂ ಎರಡು ಕೆರೆಗಳನ್ನು ಮಾತ್ರ ಹೊಂದಿರುವ ಪಶ್ಚಿಮ ವಲಯದಲ್ಲಿ ಒಟ್ಟು 453.12 ದಶಲಕ್ಷ ಲೀಟರ್ ಸಂಗ್ರಹಿಸಬಹುದಾಗಿದ್ದು, 351.07 ದಶಲಕ್ಷ ಲೀಟರ್ ಮಾತ್ರ ನೀರಿದೆ.

ಮಹದೇವಪುರ ವಲಯದ 50 ಕೆರೆಗಳ ಪೈಕಿ 19 ಕೆರೆಗಳು ಒಣಗಿವೆ. ಈ ಕೆರೆಗಳ ಒಟ್ಟು ಸಂಗ್ರಹ ಸಾಮರ್ಥ್ಯ 9493.35 ದಶಲಕ್ಷ ಲೀಟರ್ ಆಗಿದ್ದು, ಕೇವಲ 2110.43 ದಶಲಕ್ಷ ಲೀಟರ್ ಮಾತ್ರ ನೀರಿದೆ. ಅದೇ ರೀತಿ, ಯಲಹಂಕ ವಲಯದ 27 ಕೆರೆಗಳಲ್ಲಿ 12 ಕೆರೆಗಳು ಒಣಗಿವೆ. 9214.08 ದಶಲಕ್ಷ ಲೀಟರ್ ನೀರು ಹಿಡಿದಿಡಬಹುದಾದ, ಈ ಕೆರೆಗಳಲ್ಲಿ ಸದ್ಯ 4276.61 ದಶಲಕ್ಷ ಲೀಟರ್ ನೀರಿದೆ. ಬೊಮ್ಮನಹಳ್ಳಿ ವಲಯದಲ್ಲಿ 44 ಕೆರೆಗಳ ಪೈಕಿ ಎರಡು ಬತ್ತಿ ಹೋಗಿವೆ. ಒಟ್ಟು 4,882 ದಶಲಕ್ಷ ಲೀಟರ್ ಸಾಮರ್ಥ್ಯದಲ್ಲಿ 2725.10 ದಶಲಕ್ಷ ಲೀಟರ್ ನೀರು ಲಭ್ಯವಿದೆ.

## ಮಹಮ್ಮದ್ ಸಿರಾಜ್ ಬೇಗ್‌ಗೆ ಶೇ.98 ಅಂಕ



**ಚಿಕ್ಕಮಗಳೂರು**: ನಗರದ ಸಾಯಿ ಏಂಜಲ್ಸ್ ಕಾಲೇಜಿನ ವಿದ್ಯಾರ್ಥಿ ಮಹಮ್ಮದ್ ಸಿರಾಜ್ ಬೇಗ್ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.98ರಷ್ಟು ಅಂಕಗಳಿಸಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾನೆ.

600 ಕ್ಕೆ 588 ಅಂಕ ಗಳಿಸಿರುವ ಸಿರಾಜ್ ವಾಸವಿ ಶಾಲೆಯ ಶಿಕ್ಷಕಿ ರುಬೀನಾ ತಸ್ಕಿಂ ಹಾಗೂ ಕೆ.ಎಸ್.ಅಕ್ರಂ ಬೇಗ್ ದಂಪತಿಯ ಪುತ್ರ.

## ದ್ವಿತೀಯ ಪಿಯುಸಿ : ತನ್ಮಯಿ ವಸಿಷ್ಠಗೆ ಶೇ. 94ರಷ್ಟು ಅಂಕ



**ಚಿಕ್ಕಮಗಳೂರು**: ನಗರದ ಸಾಯಿಏಂಜಲ್ಸ್ ಕಾಲೇಜಿನ ವಿದ್ಯಾರ್ಥಿನಿ ತನ್ಮಯಿ ವಸಿಷ್ಠ.ಜಿ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.94 ರಷ್ಟು ಅಂಕಗಳಿಸಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾನೆ. 600ಕ್ಕೆ 564 ಅಂಕಗಳಿಸಿರುವ ತನ್ಮಯಿ ವಸಿಷ್ಠ. ಜಿ ಬಸವನಹಳ್ಳಿಯ ಗಿರೀಶ್ ಹಾಗೂ ಕೃಪಾ ದಂಪತಿಯ ಪುತ್ರಿ.

## ಲಿಂಗದಹಳ್ಳಿ ಪದವಿ ಪೂರ್ವ ಕಾಲೇಜಿಗೆ ಶೇ 65% ಫಲಿತಾಂಶ



**ತರೀಕೆರೆ** : ಲಿಂಗದಹಳ್ಳಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನ ಪಿ.ಯು.ಸಿ. ಫಲಿತಾಂಶದಲ್ಲಿ ಶೇ. 65% ದಾಖಲಾಗಿದೆ.

ವಿಜ್ಞಾನ ವಿಭಾಗದಲ್ಲಿ ಶೇ 85, ಕಲಾ ವಿಭಾಗದಲ್ಲಿ ಶೇ 63%, ಹಾಗೂ ವಾಣಿಜ್ಯ ವಿಭಾಗದಲ್ಲಿ ಶೇ 48 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಒಟ್ಟಾರೆ ಶೇಕಡ ಶೇ. 65 ರಷ್ಟು ಫಲಿತಾಂಶ ಪಡೆದಿದ್ದಾರೆ ಎಂದು ಕಾಲೇಜಿನ ಪ್ರಾಚಾರ್ಯ ಸಿ. ಜಯಪ್ಪ ತಿಳಿಸಿದ್ದಾರೆ.

ವಾಣಿಜ್ಯ ವಿಭಾಗದ ವಿದ್ಯಾರ್ಥಿನಿ ಅಂಜಲಿ (537 ಅಂಕ) ಕಾಲೇಜಿಗೆ ಪ್ರಥಮ, ವಿದ್ಯಾರ್ಥಿನಿ ಜಿ.ಕೆ. ಶಕ್ತಿ (495 ಅಂಕ) ದ್ವಿತೀಯ, ವಿದ್ಯಾರ್ಥಿ ಜಿ.ಎಲ್. ಅಜಯ್ (467 ಅಂಕ) ತೃತೀಯ ಹಾಗೂ ವಿದ್ಯಾರ್ಥಿನಿ ಧನುಶ್ರೀ (467 ಅಂಕ) ನಾಲ್ಕನೇ ಸ್ಥಾನ ಪಡೆದಿದ್ದಾರೆ.

## ರಾಜಕಾರಣದಲ್ಲಿ ಯುವಕರಿಗೆ ಹೆಚ್ಚಿನ ಆದ್ಯತೆ ಸಿಗಬೇಕು: ಡಾ. ಪ್ರಭಾ ಮಲ್ಲಿಕಾರ್ಜುನ್ ಅಭಿಮತ

**ದಾವಣಗೆರೆ**: ಇಂದಿನ ಮಕ್ಕಳೇ ದೇಶದ ಮುಂದಿನ ಭವಿಷ್ಯ. ಹಾಗಾಗಿ ಯುವಕರಿಗೆ ರಾಜಕಾರಣದಲ್ಲಿ ಹೆಚ್ಚಿನ ಅವಕಾಶ ನೀಡುವ ಅಗತ್ಯತೆ ಇದೆ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಪ್ರತಿಪಾದಿಸಿದರು.

ನಗರದ ದೃಶ್ಯಕಲಾ ಮಹಾವಿದ್ಯಾಲಯ ಕಾಲೇಜಿನ ಮಕ್ಕಳ ಥೀಮ್ ಪಾರ್ಕ್ ನಲ್ಲಿ ಜವಾಹರ್ ಬಾಲ್ ಮಂಚ್ ವತಿಯಿಂದ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಮಕ್ಕಳೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳಿಗೆ ಪರಿಸರ, ನೀರು ಸಂರಕ್ಷಣೆ ಬಗ್ಗೆ ತಿಳಿಸಿ. ಹಿರಿಯರನ್ನು ಗೌರವಿಸುವ ಬಗ್ಗೆ ಹೇಳಿಕೊಡಿ. ಮಕ್ಕಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಹೆಚ್ಚಾಗಿ ಪಾಲ್ಗೊಳ್ಳುವಂತಾಗಬೇಕು. ಈ ನಿಟ್ಟಿನಲ್ಲಿ ವಿಶೇಷ ಗಮನ ನೀಡಿ ಎಂದು ಸಲಹೆ ನೀಡಿದರು.

ಇತ್ತೀಚಿನ ದಿನಗಳಲ್ಲಿ ಸಮಾಜದ ಎಲ್ಲಾ ಜನರು ರಾಜಕೀಯದ ಜಂಜಾಟದಲ್ಲಿ ಮುಳುಗಿ ಹೋಗಿದ್ದಾರೆ. ಇದೆಲ್ಲದರ ನಡುವೆ ಯಾವುದೇ ರಾಜಕೀಯದ ಪ್ರಭಾವವಿಲ್ಲದೆ ಕೇವಲ ಮಕ್ಕಳಿಗಾಗಿ ಅನೇಕ ಸಮಾಜಮುಖಿ ಕೆಲಸಗಳು ಹೆಚ್ಚಾಗಿ ನಡೆಯುವಂತಾಗಬೇಕು. ಈ ನಿಟ್ಟಿನಲ್ಲಿ ಜವಾಹರ್ ಬಾಲ್ ಮಂಚ್ ಏರ್ಪಡಿಸಿರುವ ರಾಜ್ಯಮಟ್ಟದ ಮಕ್ಕಳೋತ್ಸವ ಕಾರ್ಯಕ್ರಮ ನಿಜಕ್ಕೂ ಶ್ಲಾಘನೀಯ ಎಂದು ಪ್ರಭಾ ಮಲ್ಲಿಕಾರ್ಜುನ್ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಮಕ್ಕಳ ಭವಿಷ್ಯದ ಹಿತದೃಷ್ಟಿಯಿಂದ ಸಂವಿಧಾನ, ಮಕ್ಕಳ ಹಕ್ಕು, ಹಾಗೂ ಇನ್ನಿತರ ಮಕ್ಕಳ ಉಪಯೋಗಿ ಚರ್ಚಾ ಸ್ಪರ್ಧೆ, ಪ್ರಬಂಧ ಸ್ಪರ್ಧೆ, ಚಿತ್ರಕಲೆ

ಸ್ಪರ್ಧೆಯಂಥ ಅತ್ಯುತ್ತಮ ಕಾರ್ಯಕ್ರಮಗಳನ್ನು ಏರ್ಪಡಿಸಿರುವುದು ಅತ್ಯುತ್ತಮ ಕೆಲಸ.

## ಬ್ಯಾಂಕು–ಎಟಿಎಂ ಗಳಲ್ಲಿ ಅಗತ್ಯ ಸುರಕ್ಷತಾ ಕ್ರಮ ಅಳವಡಿಸಿರಿ : ಗುರುದತ್ತ ಹೆಗಡೆ

**ಶಿವಮೊಗ್ಗ** : ಜಿಲ್ಲೆಯ ಎಲ್ಲ ಬ್ಯಾಂಕುಗಳಲ್ಲಿ ಸಿಸಿಟಿವಿ, ಎಚ್ಚರಿಕೆ ಗಂಟೆಗಳ ಅಳವಡಿಕೆ, ಭದ್ರತಾ ಸಿಬ್ಬಂದಿ ನಿಯೋಜನೆ, ಪೊಲೀಸ್ ಗಸ್ತು ಸೇರಿದಂತೆ ಅಗತ್ಯವಾದ ಎಲ್ಲ ರೀತಿಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ತಿಳಿಸಿದರು.

ಜಿಲ್ಲಾಡಳಿತ ಕಚೇರಿಯಲ್ಲಿ ಬುಧವಾರ ಜಿಲ್ಲೆಯ ಬ್ಯಾಂಕುಗಳ ಅಧಿಕಾರಿಗಳೊಂದಿಗೆ ಏರ್ಪಡಿಸಲಾಗಿದ್ದ ಜಿಲ್ಲಾ ಮಟ್ಟದ ಸುರಕ್ಷತಾ ಸಮಿತಿ(ಡಿಎಲ್‌ಎಸ್‌ಸಿ) ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ 358 ಬ್ಯಾಂಕುಗಳು, 435 ಎಟಿಎಂ ಗಳು, 05 ಕರೆನ್ಸಿ ಚೆಸ್ಟ್‌ಗಳು ಇದ್ದು, ಆರ್‌ಬಿಐ ಮಾರ್ಗಸೂಚಿಯನ್ವಯ ಬ್ಯಾಂಕುಗಳಲ್ಲಿ ಹಾಗೂ ಕರೆನ್ಸಿ ಚೆಸ್ಟ್‌ಗಳಲ್ಲಿ ಸಿಸಿಟಿವಿ, ಸೈರನ್, ಬೆಂಕಿ ನಂದಿಸುವ ಸಾಧನಗಳನ್ನು ಅಳವಡಿಸಬೇಕು ಹಾಗೂ ಅವುಗಳು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿವೆಯೇ ಎಂದು ಖಾತ್ರಿ ಪಡಿಸಿಕೊಳ್ಳಬೇಕು. ಎಚ್ಚರಿಕೆ ಗಂಟೆ ಮತ್ತು ಇತರೆ ಸುರಕ್ಷತಾ ಕ್ರಮಗಳೊಂದಿಗೆ ಸ್ಟ್ರಾಂಗ್ ಕೊಠಡಿ ನಿರ್ವಹಣೆ ಮಾಡಬೇಕು. ಕರೆನ್ಸಿ ಚೆಸ್ಟ್‌ಗಳಿಂದ ಹಣ ವರ್ಗಾವಣೆ ವೇಳೆ ಅಗತ್ಯ ಸುರಕ್ಷತಾ ಕ್ರಮಗಳಾದ ಪೊಲೀಸ್ ನಿಯೋಜನೆ ಸೇರಿದಂತೆ ಇತರೆ ಕ್ರಮಗಳನ್ನು ಕೈಗೊಳ್ಳಬೇಕು.



ಹಾಗೂ ಹತ್ತಿರದ ಪೊಲೀಸ್ ಠಾಣೆಯೊಂದಿಗೆ ಸಂಪರ್ಕದಲ್ಲಿರಬೇಕು.

ಎಟಿಎಂ ಗಳಲ್ಲಿ ಸಿಸಿ ಟಿವಿ ಅಳವಡಿಕೆ, ಸೈರನ್ ಮತ್ತು ಬೆಂಕಿ ನಂದಿಸುವ ಸಾಧನಗಳನ್ನು ಅಳವಡಿಸಿ, ಅವು ಕಾರ್ಯ ನಿರ್ವಹಿಸುವಂತೆ ನೋಡಿಕೊಳ್ಳಬೇಕು. ನಿರ್ದಿಷ್ಟಪಡಿಸಿದ ರೀತಿಯಲ್ಲಿ ಎಟಿಎಂ ರೂಂ ಗಳು ಇರಬೇಕು. ಅಧಿಕೃತ ವ್ಯಕ್ತಿಗಳ ಎದುರು ನಗದನ್ನು ಲೋಡ್ ಮತ್ತು ಅನ್‌ಲೋಡ್ ಮಾಡಬೇಕು. ಹತ್ತಿರದ ಪೊಲೀಸ್ ಠಾಣೆಗೆ ಬ್ಯಾಂಕುಗಳ ಜವಾಬ್ದಾರಿಯುತ ವ್ಯಕ್ತಿಗಳ ಸಂಪರ್ಕದ ವಿವರವನ್ನು ನೀಡಿರಬೇಕು. ಗ್ರಾಹಕರು ವಂಚನೆಗೊಳಗಾಗದಂತೆ ಮಾಹಿತಿ ನೀಡುವಂತಹ ಫಲಕಗಳನ್ನು ಎಟಿಎಂ ಒಳಗೆ ಹಾಕಿರಬೇಕು.

ಬ್ಯಾಂಕುಗಳ ಭದ್ರತಾ ಸಿಬ್ಬಂದಿಗಳು ಮತ್ತು ನಗದು ಬೆಂಗಾವಲು ಕರ್ತವ್ಯನಿರತ ಸಿಬ್ಬಂದಿಗಳ ಗನ್ ಪರವಾನಗಿ ನವೀಕರಣ ಖಾತ್ರಿಪಡಿಸಿಕೊಳ್ಳಬೇಕು. ಭದ್ರತಾ ಸಿಬ್ಬಂದಿಗಳಿಗೆ ಸಮರ್ಪಕ ತರಬೇತಿ ನೀಡಿರಬೇಕು. ನಗದು ವರ್ಗಾವಣೆ ವೇಳೆ ಭದ್ರತಾ ಸಿಬ್ಬಂದಿ ಕೊರತೆ ಇದ್ದಲ್ಲಿ ಪೊಲೀಸ್ ಇಲಾಖೆಯ ಸಹಾಯ ಪಡೆಯಬೇಕು ಎಂದ ಅವರು ಗನ್ ಪರವಾನಗಿ ನವೀಕರಣಕ್ಕೆ ಸಂಬಂಧಿಸಿದಂತೆ ಏನಾದರೂ ಸಮಸ್ಯೆಗಳಿದ್ದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯವರನ್ನು ಸಂಪರ್ಕಿಸುವಂತೆ ತಿಳಿಸಿದರು.

ಸೈಬರ್ ವಿಭಾಗದ ಡಿವೈಎಸ್‌ಪಿ ಕೃಷ್ಣಮೂರ್ತಿ ಮಾತನಾಡಿ, ಸೈಬರ್ ಪ್ರಕರಣಗಳಲ್ಲಿ ಸಂತ್ರಸ್ತರಿಗೆ ಅನುಕೂಲ ಮಾಡಿಕೊಡಲು ಬ್ಯಾಂಕುಗಳಲ್ಲಿ ಸಂತ್ರಸ್ತರ ಕೆವೈಸಿ ಮತ್ತು ಬ್ಯಾಂಕ್ ಸ್ಟೇಟ್‌ಮೆಂಟ್‌ನ್ನು ಕೇಳಲಾಗುತ್ತದೆ. ಆ ವೇಳೆ ಬ್ಯಾಂಕುಗಳಿಂದ ತಕ್ಷಣಕ್ಕೆಸಹಕಾರಸಿಗದೆವಿಳಂಬವಾಗುತ್ತಿರುವುದಕ್ಕೆ ಅನೇಕ ವೇಳೆ ಸಂತ್ರಸ್ತರನ್ನು ನಷ್ಟದಿಂದ ರಕ್ಷಿಸುವುದು ಕಷ್ಟವಾಗುತ್ತಿದೆ. ಆದ್ದರಿಂದ ಬ್ಯಾಂಕುಗಳು ಕ್ಷಿಪ್ರಗತಿಯಲ್ಲಿ ಸಹಕರಿಸಬೇಕು ಹಾಗೂ ಕೋರ್ಟ್ ಆದೇಶವಾದ ಪ್ರಕರಣಗಳಲ್ಲಿ ತಕ್ಷಣಕ್ಕೆ ಕ್ರಮ ವಹಿಸಬೇಕೆಂದು ಕೋರಿದರು.

ಜಿಲಾಧಿಕಾರಿಗಳು, ಸೈಬರ್ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಂತ್ರಸ್ತರಿಗೆ ಅನುಕೂಲವಾಗುವ ದೃಷ್ಟಿಯಿಂದ ಬ್ಯಾಂಕುಗಳು ವಿಳಂಬ ವಹಿಸದೇ ಸಹಕರಿಸಬೇಕು. ಹಾಗೂ ಸೈಬರ್ ಪೊಲೀಸ್ ಠಾಣೆಯವರು ಬ್ಯಾಂಕ್‌ವಾರು ಮುಖ್ಯ ಕಚೇರಿಗಳ ಇಮೇಲ್ ಐಡಿಯನ್ನು ಸಂಗ್ರಹಿಸಿ ಅಲ್ಲಿ ವ್ಯವಹರಿಸಿದಲ್ಲಿ ಶೀಘ್ರ ಪ್ರತಿಕ್ರಿಯೆ ಲಭಿಸುವುದು ಎಂದು ತಿಳಿಸಿದರು.

ಸಭೆಯಲ್ಲಿ ಲೀಡ್ ಬ್ಯಾಂಕ್ ಮ್ಯಾನೇಜರ್ ಚಂದ್ರಶೇಖರ್, ಎಎಸ್‌ಪಿ ಅನಿಲ್ ಕುಮಾರ್ ಭೂಮರಡ್ಡಿ, ವಿವಿಧ ಬ್ಯಾಂಕುಗಳ ಅಧಿಕಾರಿಗಳು ಹಾಜರಿದ್ದರು.

## ಅಂಗಡಿ ಮೇಲೆ ದಾಳಿ: 12.50 ಕೆಜಿ ಪ್ಲಾಸ್ಟಿಕ್ ವಶ

**ನ್ಯಾಮತಿ**: ನ್ಯಾಮತಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಿಷೇಧಿತ ಪ್ಲಾಸ್ಟಿಕ್ ಮಾರಾಟ ಮತ್ತು ಬಳಕೆ ವಿರುದ್ಧ ದಾಳಿ ನಡೆಸಿ ದಂಡ ಪ್ರಯೋಗ ಮಾಡುವ ಮೂಲಕ ಅಂತಹ ಅಂಗಡಿಯ ಮಾಲೀಕರಿಗೆ ದಂಡ ಹಾಕುವ ಮೂಲಕ ಶನಿವಾರ ಪ್ಲಾಸ್ಟಿಕ್‌ಅನ್ನು ವಶಪಡಿಸಲಾಯಿತು.ಈ ವೇಳೆ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಪಿ.ಗಣೇಶ್ ರಾವ್ ಮಾತನಾಡಿ ನಿಷೇಧಿತ ಪ್ಲಾಸ್ಟಿಕ್ ಕವರ್ ಮತ್ತು ಕ್ಯಾರಿ ಬ್ಯಾಗ್ ಬಳಸದಂತೆ ತಿಳಿಸಿದ್ದರು, ಸಹಿತ ಬಳಸುತ್ತಿದ್ದ ಅಂಗಡಿಗಳ ಮೇಲೆ ದಾಳಿ ಮಾಡಿ ಪ್ಲಾಸ್ಟಿಕ್ ಬಳಕೆ ಮತ್ತು ಮಾರಾಟ ಅಂಗಡಿಯವರಿಗೆ ದಂಡ ವಿಧಿಸಲಾಯಿತು ಎಂದು ತಿಳಿಸಿದ್ದಾರೆ.

# ಯತ್ನಾಳ ಬಂಧನಕ್ಕೆ ಮುಸ್ಲಿಮರ ಆಗ್ರಹ

**ಕೋಲಾರ**: ಮುಸ್ಲಿಂ ಧರ್ಮಗುರು ಪ್ರವಾದಿ ಮುಹಮ್ಮದ್ ಅವರ ಬಗ್ಗೆ ಅವಹೇಳನಕಾರಿ ಹೇಳಿಕೆ ನೀಡಿದ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರನ್ನು ಕೂಡಲೇ ಬಂಧಿಸುವಂತೆ ಆಗ್ರಹಿಸಿ ನಗರದ ಗಾಂಧಿವನ ಬಳಿ ಸಾವಿರಾರು ಮುಸ್ಲಿಮರು ಬೃಹತ್ ಪ್ರತಿಭಟನೆ ನಡೆಸಿದರು.

ಗಾಂಧಿವನದ ಮುಂಭಾಗದಿಂದ ಹಿಡಿದು ಎಂ.ಜಿ.ರಸ್ತೆಯಲ್ಲೂ ಪ್ರತಿಭಟನೆಗೆ ಜಮಾಯಿಸಿದ ಸಮುದಾಯದ ಯುವಕರು ಭ್ರಷ್ಟ, ಕೋಮುವಾದಿ, ಜನ ವಿರೋಧಿ ಯತ್ನಾಳ ಎಂದು ಘೋಷಣೆ ಕೂಗಿದರು. ಭಿತ್ತಿಪತ್ರ ಹಿಡಿದು ಆಕ್ರೋಶ ವ್ಯಕ್ತಪಡಿಸಿದರು. ಬಂಧಿಸಿ ಬಂಧಿಸಿ ಯತ್ನಾಳ ಬಂಧಿಸಿ ಎಂದು ಕೂಗಿದರು.

‘ನಮ್ಮ ಪ್ರವಾದಿ ನಮ್ಮ ಹೆಮ್ಮೆ. ನಮ್ಮದು ಶಾಂತಿಯ ಹೆಜ್ಜೆ’ ಎಂದು ಹೇಳಿದರು. ‘ಪ್ರವಾದಿಯವರು ಯತ್ನಾಳಗೆ ಏನು ಮಾಡಿದ್ದಾರೆ? ಅವರ ಕುರಿತು ಕೆಟ್ಟದಾಗಿ ಮಾತನಾಡಿದರೆ ನಾವು ಸುಮ್ಮನಿರಲ್ಲ’ ಎಂದು ಎಚ್ಚರಿಕೆ ನೀಡಿದರು. ಮಧ್ಯಾಹ್ನದಿಂದಲೇ ಮುಸ್ಲಿಮರು ತಮ್ಮ ಅಂಗಡಿ ಬಾಗಿಲು ಮುಚ್ಚಿ ಪ್ರತಿಭಟನೆಗೆ ಧಾವಿಸಿದರು.

ಮುಸ್ಲಿಂ ಮುಖಂಡರು ಮಾತನಾಡಿ, ಪ್ರವಾದಿ ಮುಹಮ್ಮದ್ ವಿರುದ್ಧ ಅವಹೇಳನಕಾರಿ ಹೇಳಿಕೆ ನೀಡಿರುವುದನ್ನು ಮುಸ್ಲಿಂ ಸಮುದಾಯ ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಈ ಹಿಂದೆಯೂ ಮುಸ್ಲಿಮರನ್ನು ಹಾಗೂ ಧರ್ಮವನ್ನು ಯತ್ನಾಳ ನಿಂದಿಸಿ ಮಾತನಾಡಿದ್ದಾರೆ. ಈಗ ಮತ್ತೆ ಅವಹೇಳನ ಮಾಡಿದ್ದು, ಕಾನೂನು ಸುವ್ಯವಸ್ಥೆಗೆ ಧಕ್ಕೆಯಾಗುವ ವಾತಾವರಣವಿದೆ. ಹಿಂಸಾಚಾರ ನಡೆಯುವ ಸಾಧ್ಯತೆ ಇದೆ. ಹೀಗಾಗಿ, ಈ ಕೂಡಲೇ ವಿಜಯಪುರ ಶಾಸಕ ಯತ್ನಾಳ ವಿರುದ್ಧ ಪ್ರಕರಣ ದಾಖಲಿಸಿ ಬಂಧಿಸಬೇಕು. ಇಂತಹ ಘಟನೆಗಳು ಮುಂದೆ ಯಾವುದೇ ಕಾರಣಕ್ಕೂ ನಡೆಯದಂತೆ ಎಚ್ಚರಿಕೆ ವಹಿಸಬೇಕು ಎಂದು ಒತ್ತಾಯಿಸಿದರು.

*ಪ್ರವಾದಿ ಕುರಿತು ಯಾರೇ ಒಂದು ಕೆಟ್ಟ ಪದ ಬಳಸಿದರೂ ಅದನ್ನು ಕೇಳುವ ಶಕ್ತಿ ನಮ್ಮಲ್ಲಿ ಇಲ್ಲ. ಆ ರೀತಿ ಹೇಳಲೂ ನಾವು ಬಿಡುವುದಿಲ್ಲ. ಪ್ರವಾದಿ ನಮಗೆ ಒಳ್ಳೆಯ ದಾರಿ ತೋರಿಸಿದ್ದಾರೆ. ನಾವು ಯಾವುದೇ ಧರ್ಮದ ಗುರುಗಳ ಬಗ್ಗೆ ಕೆಟ್ಟದಾಗಿ ಮಾತನಾಡುವುದಿಲ್ಲ. ನಮ್ಮ ಧರ್ಮದ ವಿರುದ್ಧವೂ ಕೆಟ್ಟದಾಗಿ ಮಾತನಾಡಬಾರದು. ಯಾವುದೇ ಧರ್ಮದ ವಿರುದ್ಧ ಅವಹೇಳನ ಮಾಡದಂತೆ ಕಾನೂನು ರೂಪಿಸಬೇಕು’ ಎಂದು ಆಗ್ರಹಿಸಿದರು.




## ಮೇ 3ಕ್ಕೆ ಸಿಂಗಪುರದ ಸಾರ್ವತ್ರಿಕ ಚುನಾವಣೆ ನಿಗದಿ: ಭಾರತೀಯರೂ ಪೈಪೋಟಿ



**ಸಿಂಗಪುರ**: ಮುಂದಿನ ತಿಂಗಳು ಮೇ 3ಕ್ಕೆ ದಕ್ಷಿಣ ಏಷ್ಯಾದ ಪುಟ್ಟ ಶ್ರೀಮಂತ ದೇಶವಾದ ಸಿಂಗಪುರದ ಸಾರ್ವತ್ರಿಕ ಚುನಾವಣೆ ನಿಗದಿಯಾಗಿದೆ.

ಸಿಂಗಪುರ ಪ್ರಧಾನಿ ಲಾರೆನ್ಸ್ ವಾಂಗ್ ಅವರ ಸಲಹೆ ಮೇರೆಗೆ ಇಂದು ಆ ದೇಶದ ಅಧ್ಯಕ್ಷರಾದ ಥಾರ್ಮನ್ ಷಣ್ಮುಗಂ ಅವರು ಸಂಸತ್ ಅನ್ನು ವಿಸರ್ಜಿಸಿ ಆದೇಶ ಹೊರಡಿಸಿದರು. ಈ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ಸಾರ್ವತ್ರಿಕ ಚುನಾವಣೆಯನ್ನು ಘೋಷಣೆ ಮಾಡಿದೆ.

ಸಿಂಗಪುರದಲ್ಲಿ 15 ನೇ ಸಾರ್ವತ್ರಿಕ ಚುನಾವಣೆ ನಡೆಯುತ್ತಿದೆ. ಇದೇ ಏಪ್ರಿಲ್ 23 ನಾಮಪತ್ರ ಸಲ್ಲಿಸಲು ಕಡೆಯ ದಿನ.

1965 ರಲ್ಲಿ ಸಂಪೂರ್ಣ ಸ್ವಾತಂತ್ರ್ಯ ಘೋಷಿಸಿಕೊಂಡ ಸಿಂಗಪುರ ‘ಪಾರ್ಲಿಮೆಂಟ್ ಆಫ್ ಸಿಂಗಪುರ’ ಎಂಬ ಏಕಶಾಸನಸಭೆಯನ್ನು ಅಳವಡಿಸಿಕೊಂಡಿದೆ. 104 ಸದಸ್ಯ ಬಲವನ್ನು ಸಿಂಗಪುರ ಪಾರ್ಲಿಮೆಂಟ್ ಹೊಂದಿದೆ. 96 ಸ್ಥಾನಗಳಿಗೆ ಮಾತ್ರ ಅಲ್ಲಿ ಐದು ವರ್ಷಕ್ಕೊಮ್ಮೆ ಸಾರ್ವತ್ರಿಕ ಚುನಾವಣೆ ನಡೆಯುತ್ತದೆ.

ಆಡಳಿತಾರೂಢ ಪೀಪಲ್ಸ್ ಆಕ್ಷನ್ ಪಾರ್ಟಿ (ಪಿಎಪಿ) ಪಕ್ಷವು 2020ರ ಚುನಾವಣೆಯಲ್ಲಿ 83 ಸ್ಥಾನಗಳನ್ನು ಗೆಲ್ಲುವ ಮೂಲಕ ಅಧಿಕಾರ ಹಿಡಿದಿತ್ತು. ಸದ್ಯ ಪಕ್ಷದ ನಾಯಕ ಲಾರೆನ್ಸ್ ವಾಂಗ್ ಅವರು ಪ್ರಧಾನಿಯಾಗಿದ್ದರು.

ಸಿಂಗಪುರ ಸ್ವಾತಂತ್ರ್ಯಗೊಂಡ 1965ರಿಂದಲೂ ಆಡಳಿತದಲ್ಲಿರುವ ಪೀಪಲ್ಸ್ ಆ?ಯಕ್ಷನ್ ಪಕ್ಷ (ಪಿಎಪಿ) ಮತ್ತೆ ಅಧಿಕಾರಕ್ಕೆ ಬರುವ ಸಾಧ್ಯತೆ ಇದೆ.

ಸರ್ಕಾರದ ವಿರುದ್ಧದ ಜನರ ಅತೃಪ್ತಿಯಿಂದಾಗಿ 2020ರಲ್ಲಿ ನಡೆದಿದ್ದ ಚುನಾವಣೆ ವೇಳೆ ಪಿಎಪಿ ಹಿನ್ನಡೆ ಅನುಭವಿಸಿತ್ತು. ಹೀಗಾಗಿ, ಕಳೆದ ವರ್ಷದ ಮೇ ತಿಂಗಳಿನಲ್ಲಿ ದೇಶದ ನಾಲ್ಕನೇ ಪ್ರಧಾನಿಯಾಗಿ ಅಧಿಕಾರ ಸ್ವೀಕರಿಸಿದ್ದ ಲಾರೆನ್ಸ್ ವಾಂಗ್ ಅವರು ಹೆಚ್ಚಿನ ಬಹುಮತದೊಂದಿಗೆ ಅಧಿಕಾರದ ಗದ್ದುಗೆಗೇರುವ ವಿಶ್ವಾಸ ಹೊಂದಿದ್ದಾರೆ.

ಸಿಂಗಪುರ ಚುನಾವಣೆಯಲ್ಲಿ ಶೇ. 11 ರಷ್ಟಿರುವ ಭಾರತೀಯರೂ ನಿರ್ಣಾಯಕ ಪಾತ್ರವಹಿಸುತ್ತಾರೆ. 2020ರಲ್ಲಿ ಅತಿದೊಡ್ಡ ಪಕ್ಷವಾದ ಲಾರೆನ್ಸ್ ವಾಂಗ್ ಅವರ ಪಿಪಿಪಿ ಭಾರತ ಮೂಲದ ಒಬ್ಬರಿಗೂ ಟಿಕೆಟ್ ನೀಡದೇ ಇದ್ದದ್ದು ಟೀಕೆಗೆ ಗುರಿಯಾಗಿತ್ತು.

ಈ ಸಾರಿಯ ಚುನಾವಣೆಯಲ್ಲಿ ಭಾರತ ಮೂಲದವರಿಗೂ ತಮ್ಮ ಪಕ್ಷದ ಟಿಕೆಟ್ ನೀಡಲಾಗುವುದು ಪ್ರಧಾನಿ ಲಾರೆನ್ಸ್ ವಾಂಗ್ ಇತ್ತೀಚೆಗೆ ಹೇಳಿದ್ದು, ಭಾರತೀಯರಲ್ಲಿ ಟಿಕೆಟ್ ಪಡೆಯಲು ತುರುಸಿನ ಪೈಪೋಟಿಗೆ ಕಾರಣವಾಗಿದೆ

## ಜಾತಿಗಣತಿ ಚರ್ಚೆಗೆ ಪ್ರತ್ಯೇಕ ಅಧಿವೇಶನದ ಅಗತ್ಯವಿದೆ: ಸಚಿವ ಸತೀಶ್ ಜಾರಕಿಹೊಳಿ



**ಬೆಳಗಾವಿ**: ‘2015ರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ’ಯ ವರದಿ ಕುರಿತು ಚರ್ಚಿಸಲು ಪ್ರತ್ಯೇಕ ವಿಧಾನಸಭೆಯ ವಿಶೇಷ ಅಧಿವೇಶನದ ಅಗತ್ಯವಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರು ಮಂಗಳವಾರ ಹೇಳಿದ್ದಾರೆ.

ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಮೀಕ್ಷೆಯ ದತ್ತಾಂಶ ಅಥವಾ ಅಧ್ಯಯನದ ಬಗ್ಗೆ ಯಾವುದೇ ಸಂದೇಹಗಳು ಅಥವಾ ಆರೋಪಗಳನ್ನು ಶಾಸಕಾಂಗದಲ್ಲೇ ಚರ್ಚಿಸಬೇಕು. ವರದಿಯ ಕುರಿತು ಸದನದೊಳಗೆ ಸಮಗ್ರ ಚರ್ಚೆ ನಡೆದರೆ ಸಮೀಕ್ಷೆಯ ಸತ್ಯಾಸತ್ಯತೆಯನ್ನು ಯಾರೂ ಅನುಮಾನಿಸುವುದಿಲ್ಲ. ರಾಜ್ಯದ ಜನರು ಕೂಡ ಇದರ ಬಗ್ಗೆ ತಿಳಿದುಕೊಳ್ಳುತ್ತಾರೆ ಎಂದು ಹೇಳಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರೆದಿದ್ದ ಒಕ್ಕಲಿಗರ ಸಭೆಯ ಕುರಿತ ಪ್ರಶ್ನೆಗೆ ಉತ್ತರಿಸಿ ಶಿವಕುಮಾರ್ ಒಕ್ಕಲಿಗ ಸಮುದಾಯದ ನಾಯಕರಾಗಿರುವುದರಿಂದ ವರದಿ ಕುರಿತು ಚರ್ಚಿಸಲು ಒಕ್ಕಲಿಗರ ಸಭೆ ಕರೆದಿದ್ದಾರೆ. ಇದರಲ್ಲಿ ಯಾವುದೇ ತಪ್ಪಿಲ್ಲ ಎಂದು ತಿಳಿಸಿದರು.

ಬಿಜೆಪಿ ಮತ್ತು ಜೆಡಿಎಸ್ ಜನಕ್ರೋಶ ಯಾತ್ರೆಯ ಬಗ್ಗೆ ಮಾತನಾಡಿ, ಪೆಟ್ರೋಲ್, ಡೀಸೆಲ್ ಮತ್ತು ಎಲ್‌ಪಿಜಿ ಸೇರಿದಂತೆ ಹಲವು ವಸ್ತುಗಳ ಬೆಲೆಗಳನ್ನು ಹೆಚ್ಚಿಸಿದ್ದು ಕೇಂದ್ರ ಸರ್ಕಾರ. ಹೀಗಿರುವಾಗ ನಮ್ಮ ಸರ್ಕಾರದ ವಿರುದ್ಧ ಜನಕ್ರೋಶ ಯಾತ್ರೆ ನಡೆಸುವ ಬಿಜೆಪಿಯ ನಿರ್ಧಾರ ಎಷ್ಟು ಸರಿ? ಬಿಜೆಪಿ ಪ್ರತಿಭಟಿಸಲು ಬಯಸಿದರೆ, ಕೇಂದ್ರದ ವಿರುದ್ಧವೂ ಪ್ರತಿಭಟನೆ ನಡೆಸಬೇಕು ಎಂದು ವ್ಯಂಗ್ಯವಾಡಿದರು.

ಬೆಳಗಾವಿ ನಗರಕ್ಕೆ ಪ್ರಸ್ತಾವಿತ ಎಲಿವೇಟೆಡ್ ಕಾರಿಡಾರ್, ಡಿಸಿ ಕಚೇರಿ ನಿರ್ಮಾಣ, ನೀರಾವರಿ ಸಮಸ್ಯೆಗಳು, ಹಿಡಕಲ್ ಅಣೆಕಟ್ಟಿನಲ್ಲಿ ಕುಡಿಯುವ ನೀರಿನ ಸಂಗ್ರಹಣೆ ಮತ್ತು ಅರಣ್ಯ ಇಲಾಖೆಯ ಕೆಲವು ಅಭಿವೃದ್ಧಿ ಕಾರ್ಯಗಳ ಕುರಿತು ಮಂಗಳವಾರ ಅಧಿಕಾರಿಗಳ ಸಭೆ ನಡೆಸಲಾಗಿದೆ.

# ಸಿಂಧೂ ನದಿ ನೀರು ತಡೆಹಿಡಿಯಲು ನಮ್ಮಲ್ಲಿ ಸಾಕಷ್ಟು ಅಣೆಕಟ್ಟುಗಳಿವೆಯೇ ಮೋದಿಗೆ ಖರ್ಗೆ ಪ್ರಶ್ನೆ



**ಬೆಂಗಳೂರು:** 1960ರ ಸಿಂಧೂ ನದಿ ಒಪ್ಪಂದವನ್ನು ಸ್ಥಗಿತಗೊಳಿಸುವ ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ನಿರ್ಧಾರವನ್ನು ಅಪ್ರಾಯೋಗಿಕ ಎಂದು ಟೀಕಿಸಿದ ಎಐಸಿಸಿ ಅಧ್ಯಕ್ಷ, ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ, ಪಾಕಿಸ್ತಾನಕ್ಕೆ ಹರಿಯುವ ನೀರನ್ನು ತಡೆಹಿಡಿಯಲು ನಮ್ಮ ದೇಶ ಸಾಕಷ್ಟು ಅಣೆಕಟ್ಟುಗಳನ್ನು ಹೊಂದಿದೆಯೇ? ಎಂದು ಶನಿವಾರ ಪ್ರಶ್ನಿಸಿದ್ದಾರೆ.

ಕೆಲವು ದಿನಗಳ ಹಿಂದೆ ಹೈದರಾಬಾದ್ ಸಂಸದ, ಎಐಎಂಐಎಂ ನಾಯಕ ಅಸಾದುದ್ದೀನ್ ಓವೈಸಿ, ಸರ್ಕಾರದ ನಿರ್ಧಾರವನ್ನು ಬೆಂಬಲಿಸಿದರೂ, ಸಿಂಧೂ ನದಿ ಒಪ್ಪಂದದ ವಿಷಯವನ್ನು ಪ್ರಶ್ನಿಸಿದ್ದರು.

"ಇದು ತಪ್ಪು ಹುಡುಕುವ ಸಮಯವಲ್ಲ. ಸಂದರ್ಭ ಬಂದಾಗ ನಾವು ಅದನ್ನು ಹೇಳುತ್ತೇವೆ. ಕೆಲವು ನಿರ್ದಿಷ್ಟತೆಗಳಿರುತ್ತವೆ. ಆದರೆ ಎಲ್ಲವನ್ನೂ ಈಗಲೇ ಹೇಳುವುದು ಒಳ್ಳೆಯದಲ್ಲ. ತೆಗೆದುಕೊಂಡ ಕ್ರಮದ ಪರಿಣಾಮಗಳೇನು ಎಂಬುದು ಮುಂದೆ ಚರ್ಚೆಯಾಗುತ್ತದೆ. ನಮ್ಮಿಂದ ಹರಿಯುತ್ತಿರುವ ನೀರನ್ನು ನಾವು ಹೇಗೆ ತಡೆಹಿಡಿಯಬಹುದು? ಅದನ್ನು ಸಂಗ್ರಹಿಸಲು ನಮ್ಮಲ್ಲಿ ಸಾಕಷ್ಟು ಅಣೆಕಟ್ಟುಗಳಿವೆಯೇ?. ಸರ್ಕಾರ ಈಗ ತೆಗೆದುಕೊಂಡ ನಿರ್ಧಾರ ಮತ್ತು ನಿರ್ಣಯವು ದೇಶಕ್ಕೆ ಒಳ್ಳೆಯದು. ಆದರೆ ಫಲಿತಾಂಶ ನೋಡದೆ ನಾವು ಟೀಕಿಸುತಲೇ ಇದ್ದರೆ ಅದು ಒಳ್ಳೆಯದಲ್ಲ" ಎಂದು ಖರ್ಗೆ ವರದಿಗಾರರಿಗೆ ತಿಳಿಸಿದರು.

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅಧ್ಯಕ್ಷತೆಯಲ್ಲಿ ನಡೆದ ಸರ್ವಪಕ್ಷ ಸಭೆಯಲ್ಲಿ ಮೋದಿ ಭಾಗವಹಿಸಬೇಕಿತ್ತು. "ಸರ್ಕಾರದ ಪರವಾಗಿ ಮೋದಿ, ಭದ್ರತಾ ಲೋಪ ಸೇರಿದಂತೆ ಕೆಲವು ಸಮಸ್ಯೆಗಳನ್ನು ಪರಿಹರಿಸಲು ಸಭೆಯಲ್ಲಿ ಇರಬೇಕಿತ್ತು. ಆದರೆ ಅವರು ಸಭೆಗೆ ಗೈರುಹಾಜರಾಗಿದ್ದರು, ಅದು ಸರಿಯಲ್ಲ. ಆದರೆ ಭಯೋತ್ಪಾದನೆಯನ್ನು ನಿಗ್ರಹಿಸುವುದನ್ನು ಸವಾಲಾಗಿ ತೆಗೆದುಕೊಳ್ಳುವಂತೆ ನಾವು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ಹೇಳಿದ್ದೇವೆ. ಪಹಲ್ಗಾಮ್‌ನಂತಹ ಘಟನೆಗಳು ಮರುಕಳಿಸುವುದಿಲ್ಲ ಎಂದು ಅವರು ಭರವಸೆ ನೀಡಿದರು. ದೇಶದ ಹಿತದೃಷ್ಟಿಯಿಂದ ಸರ್ಕಾರ ತೆಗೆದುಕೊಂಡ ಯಾವುದೇ ನಿರ್ಧಾರವನ್ನು ಎಲ್ಲರೂ ಒಗ್ಗಟ್ಟಿನಿಂದ ಬೆಂಬಲಿಸುವಂತೆ ನಾವು ಹೇಳಿದ್ದೇವೆ" ಎಂದರು.

ಪಹಲ್ಗಾಮ್ ದಾಳಿ ಭದ್ರತಾ ವೈಫಲ್ಯ ಎಂದು ಸ್ವತಃ ಕೇಂದ್ರ ಸರ್ಕಾರ ಒಪ್ಪಿಕೊಂಡಿದೆ. ಆ ಕಾರಣಕ್ಕಾಗಿ ಸಭೆ ಕರೆದಿದ್ದೇವೆ ಅಂತ ಅಮಿತ್ ಶಾ ಹೇಳಿದ್ದಾರೆ ಎಂದರು.

# ಪಾಕಿಸ್ತಾನದ ಹೆಡೆಮುರಿ ಕಟ್ಟಬಹುದು; ದೇಶದ್ರೋಹಿ ಕಾಂಗ್ರೆಸ್ ನಾಯಕರ ಹರುಕಲು ಬಾಯಿ ಮುಚ್ಚಿಸಲು ಸಾಧ್ಯವಿಲ್ಲ: ಆರ್. ಅಶೋಕ್



**ಬೆಂಗಳೂರು:** ಪಾಪಿ ಪಾಕಿಸ್ತಾನದ ಹೆಡೆಮುರಿ ಕಟ್ಟಬಹುದು ಆದರೆ, ದೇಶದ್ರೋಹಿ ಕಾಂಗ್ರೆಸ್ ನಾಯಕರ ಹರಕಲು ಬಾಯಿ ಮುಚ್ಚಿಸಲು ಸಾಧ್ಯವಿಲ್ಲ ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಆಕ್ರೋಶ ಹೊರ ಹಾಕಿದ್ದಾರೆ.

ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಅವರು, ಕಾಂಗ್ರೆಸ್ ವಕ್ತಾರ ಎಂ ಲಕ್ಷ್ಮಣ್ ನೀಡಿರುವ ವಿವಾದಾತ್ಮಕ ಹೇಳಿಕೆ ಬಗ್ಗೆ ಪ್ರತಿಕ್ರಿಯಿಸಿದ್ದಾರೆ. ಐಡಿ ಕಾರ್ಡ್ ನೋಡಿ, ಧರ್ಮದ ಹೆಸರು ಕೇಳಿ, ಕಲ್ಮಾ ಹೇಳಿಸಿ, ಪ್ಯಾಂಟು ಬಿಚ್ಚಿ ಪರೀಕ್ಷಿಸಿ ಮತಾಂಧ ಉಗ್ರರು ತಮ್ಮ ಕಣ್ಣೆದುರಿಗೇ ಪಾಯಿಂಟ್ ಬ್ಲ್ಯಾಂಕ್ ನಲ್ಲಿ ತಲೆಗೆ ಗುಂಡಿಕ್ಕಿ ತಮ್ಮ ಪತಿಯನ್ನು, ತಂದೆಯನ್ನು ಕೊಂದ ಕಣ್ಣೀರಿನ ಕಥೆ ಹೇಳುತ್ತಿರುವ ಸಂತ್ರಸ್ತ ಮಹಿಳೆಯರು, ಮಕ್ಕಳ ಆಕ್ರಂದನ ನಿಮಗೆ ಕೇಳುತ್ತಿಲ್ಲವೇ ಎಂ.ಲಕ್ಷ್ಮಣ್ ಅವರೇ? ಎಂದು ಪ್ರಶ್ನಿಸಿದ್ದಾರೆ.

ಇಡೀ ದೇಶವೇ ಕಣ್ಣೀರಿಡುತ್ತಿರುವ ಇಂತಹ ಸಂದರ್ಭದಲ್ಲೂ ನಿಮ್ಮ ಓಲೈಕೆ ರಾಜಕಾರಣ ಮುಂದುವರೆಸುತ್ತಿದ್ದೀರಲ್ಲ ನಿಮ್ಮ ನಾಚಿಕೆಗೇಡುತನಕ್ಕೆ ಏನು ಹೇಳೋಣ. ಗಡಿಯಲ್ಲಿ ಸೇನಾಪಡೆಗಳು ತಮ್ಮ ಪ್ರಾಣವನ್ನೇ ಒತ್ತೆ ಇಟ್ಟು ಪ್ರತೀಕಾರಕ್ಕಾಗಿ ಸಜ್ಜಾಗುತ್ತಿದ್ದರೆ ಇಲ್ಲಿ ಸರ್ಜಿಕಲ್ ಸ್ಟೈಕ್ ಬಗ್ಗೆ ವ್ಯಂಗ್ಯ ಮಾಡುತ್ತಿದ್ದೀರಲ್ಲ ನಿಮ್ಮ ಭಂಡ ಬಾಳಿಗೆ ಏನು ಹೇಳೋಣ. ಧರ್ಮದ ಹೆಸರು ಕೇಳಿ ಕೊಲ್ಲುವ ಉಗ್ರರಿಗೂ, ಸೇನಾಪಡೆಗಳ ಕಾರ್ಯಾಚರಣೆಗೆ ಸಾಕ್ಷಿ ಕೇಳುವ ನಿಮಗೂ ಯಾವುದೇ ವ್ಯತ್ಯಾಸವಿಲ್ಲ ಎಂದು ಕಿಡಿಕಾರಿದ್ದಾರೆ.

# ಸಿಂಧೂ ಜಲ ಒಪ್ಪಂದದ ರದ್ದತಿ ಸಿಂದುವೆ?

ಸಿಂಧೂ ಜಲ ಒಪ್ಪಂದವು ಭಾರತ ಮತ್ತು ಪಾಕಿಸ್ತಾನದ ನಡುವಿನ ನೀರು ಹಂಚಿಕೆ ಒಪ್ಪಂದವಾಗಿದೆ. ವಿಶ್ವ ಬ್ಯಾಂಕ್ ಈ ಒಪ್ಪಂದವನ್ನು ಏರ್ಪಡಿಸಿತು ಮತ್ತು ಮಾತುಕತೆ ನಡೆಸಿತು. ಸಿಂಧೂ ನದಿ ಮತ್ತು ಅದರ ಉಪನದಿಗಳಲ್ಲಿ ಲಭ್ಯವಿರುವ ನೀರನ್ನು ಹೇಗೆ ಬಳಸಿಕೊಳ್ಳಬೇಕು ಎಂಬುದನ್ನು ಈ ಒಪ್ಪಂದವು ನಿರ್ಧರಿಸುತ್ತದೆ. ಇದನ್ನು ಸೆಪ್ಟೆಂಬರ್ 19, 1960 ರಂದು ಕರಾಚಿಯಲ್ಲಿ ಅಂದಿನ ಭಾರತದ ಪ್ರಧಾನಿ ಜವಾಹರಲಾಲ್ ನೆಹರು ಮತ್ತು ಪಾಕಿಸ್ತಾನದ ಅಧ್ಯಕ್ಷ ಅಯೂಬ್ ಖಾನ್ ಅವರು ಸಹಿ ಮಾಡಿದರು.

ಒಪ್ಪಂದದ ಮುಖ್ಯ ಅಂಶಗಳು:

* ನದಿಗಳ ಹಂಚಿಕೆ: ಒಪ್ಪಂದವು ಸಿಂಧೂ ನದಿ ವ್ಯವಸ್ಥೆಯ ಆರು ನದಿಗಳನ್ನು ವಿಂಗಡಿಸುತ್ತದೆ. ಮೂರು ಪೂರ್ವ ನದಿಗಳು (ರಾವಿ, ಬಿಯಾಸ್ ಮತ್ತು ಸಟ್ಲೆಜ್) ಭಾರತಕ್ಕೆ ಅನಿಯಂತ್ರಿತ ಬಳಕೆಗೆ ಹಂಚಿಕೆಯಾಗಿದ್ದರೆ, ಮೂರು ಪಶ್ಚಿಮ ನದಿಗಳು (ಸಿಂಧೂ, ಝೇಲಂ ಮತ್ತು ಚೆನಾಬ್) ಪಾಕಿಸ್ತಾನಕ್ಕೆ ಅನಿಯಂತ್ರಿತ ಬಳಕೆಗೆ ಹಂಚಿಕೆಯಾಗಿವೆ. ಆದರೆ ಭಾರತದ ಗೃಹಬಳಕೆ, ಬಳಕೆ ಮಾಡದ ಮತ್ತು ಕೃಷಿ ಅಗತ್ಯಗಳಿಗಾಗಿ ಕೆಲವು ವಿನಾಯಿತಿಗಳಿವೆ.



* ನೀರಿನ ಹಂಚಿಕೆ: ಈ ಹಂಚಿಕೆಯು ಸಿಂಧೂ ವ್ಯವಸ್ಥೆಯ ಸುಮಾರು 80% ನೀರನ್ನು ಪಾಕಿಸ್ತಾನಕ್ಕೆ ಮತ್ತು 20% ರಷ್ಟು ನೀರನ್ನು ಭಾರತಕ್ಕೆ ನೀಡುತ್ತದೆ.

## ಸಿಂದೂ ನದಿ ಒಪ್ಪಂದ ರದ್ದತಿ ಕಳವಳ

ಇತ್ತೀಚೆಗೆ ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ, ಭಾರತವು ಸಿಂಧೂ ಜಲ ಒಪ್ಪಂದವನ್ನು ಅಮಾನತು ಗೊಳಿಸುವುದಾಗಿ ಘೋಷಿಸಿದೆ. ಒಪ್ಪಂದದಲ್ಲಿ ಅಮಾನತುಗೊಳಿಸುವ ಷರತ್ತು ಇಲ್ಲದಿದ್ದರೂ, ಭಾರತವು ಅಂತರರಾಷ್ಟ್ರೀಯ ಕಾನೂನು ಸಮಾವೇಶಗಳನ್ನು ಉಲ್ಲೇಖಿಸಿದೆ. ಮೂಲಭೂತ ಬದಲಾವಣೆಯ ಕಾರಣದಿಂದ ಒಪ್ಪಂದವನ್ನು ಅಮಾನತುಗೊಳಿಸುವುದನ್ನು ಸಮರ್ಥಿಸಿದೆ. ಈ ಕ್ರಮವು ಭಾರತ–ಪಾಕಿಸ್ತಾನ ಸಂಬಂಧಗಳು ಮತ್ತು ಪ್ರದೇಶದ ನೀರಿನ ಹಂಚಿಕೆಯ ಭವಿಷ್ಯದ ಬಗ್ಗೆ ಚರ್ಚೆ ಮತ್ತು ಕಳವಳವನ್ನು ಹುಟ್ಟುಹಾಕಿದೆ.

* ಶಾಶ್ವತ ಸಿಂಧೂ ಆಯೋಗ: ಒಪ್ಪಂದವು ಎರಡೂ ದೇಶಗಳ ಆಯುಕ್ತರನ್ನು ಒಳಗೊಂಡ ಶಾಶ್ವತ ಸಿಂಧೂ ಆಯೋಗವನ್ನು ಸ್ಥಾಪಿಸಿತು. ನೀರು ಹಂಚಿಕೆ ಮತ್ತು ಬಳಕೆಗೆ ಸಂಬಂಧಿಸಿದ ಯಾವುದೇ ಸಮಸ್ಯೆಗಳನ್ನು ಚರ್ಚಿಸಲು ಮತ್ತು ಪರಿಹರಿಸಲು ಆಯೋಗವು ವರ್ಷಕ್ಕೆ ಕನಿಷ್ಠ ಒಂದು ಬಾರಿಯಾದರೂ ಸಭೆ ಸೇರುವುದು ಕಡ್ಡಾಯವಾಗಿದೆ.

* ವಿವಾದ ಪರಿಹಾರ ಕಾರ್ಯವಿಧಾನ: ಒಪ್ಪಂದವು ವಿವಾದಗಳನ್ನು ಪರಿಹರಿಸಲು ಮೂರು ಹಂತದ ಕಾರ್ಯವಿಧಾನವನ್ನು ಒದಗಿಸುತ್ತದೆ:

* ಪ್ರಶ್ನೆಗಳು: ಇವುಗಳನ್ನು ಸಾಮಾನ್ಯವಾಗಿ ಶಾಶ್ವತ ಸಿಂಧೂ ಆಯೋಗದೊಳಗೆ ಪರಿಹರಿಸಲಾಗುತ್ತದೆ.

ಭಿನ್ನಾಭಿಪ್ರಾಯಗಳು: ಆಯೋಗವು "ಭಿನ್ನಾಭಿಪ್ರಾಯ" ವನ್ನು ಪರಿಹರಿಸಲು ಸಾಧ್ಯವಾಗದಿದ್ದರೆ, ಅದನ್ನು ವಿಶ್ವ ಬ್ಯಾಂಕ್ ನೇಮಿಸಿದ ತಟಸ್ಥ ತಜ್ಞರಿಗೆ ಉಲ್ಲೇಖಿಸಬಹುದು.

* ವಿವಾದಗಳು: ತಟಸ್ಥ ತಜ್ಞರಿಂದ "ಭಿನ್ನಾಭಿಪ್ರಾಯ" ಪರಿಹರಿಸಲ್ಪಡದಿದ್ದರೆ, ಅದನ್ನು ವಿಶ್ವ ಬ್ಯಾಂಕ್‌ನ ಸಹಯೋಗದೊಂದಿಗೆ ರಚಿಸಲಾದ ಮಧ್ಯಸ್ಥಿಕೆ ನ್ಯಾಯಾಲಯಕ್ಕೆ ಉಲ್ಲೇಖಿಸಬಹುದು. * ಏಕಪಕ್ಷೀಯ ರದ್ದತಿ ಇಲ್ಲ: ಒಪ್ಪಂದದಲ್ಲಿ ಯಾವುದೇ ದೇಶದಿಂದ ಏಕಪಕ್ಷೀಯವಾಗಿ ರದ್ದುಪಡಿಸುವ ಷರತ್ತು ಇಲ್ಲ. ಯಾವುದೇ ಮಾರ್ಪಾಡು ಅಥವಾ ರದ್ದತಿಗೆ ಭಾರತ ಮತ್ತು ಪಾಕಿಸ್ತಾನದ ನಡುವೆ ಪರಸ್ಪರ ಒಪ್ಪಿದ ಒಪ್ಪಂದದ ಅಗತ್ಯವಿದೆ.

# ಬಯಲಾಯ್ತು ವಾಲಿಬಾಲ್ ಆಟಗಾರ ಸೈಯದ್ ಕಾಮಕಾಂಡ

**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲೂಕಿನ ವಾಲಿಬಾಲ್ ಆಟಗಾರನ ಕಾಮಕಾಂಡ ಬಯಲಾಗಿದೆ. ಖಾಸಗಿ ಕಾಲೇಜಿನ ವಿದ್ಯಾರ್ಥಿಯಾಗಿರುವ ವಾಲಿಬಾಲ್ ಆಟಗಾರ ಸೈಯದ್ ಸಿಕ್ಕಿಬಿದ್ದಿರುವ ಕಾಮುಕ.

ವಿದ್ಯಾರ್ಥಿನಿಗೆ ಮೆಸೇಜ್ ಮೂಲಕ ಲೈಂಗಿಕ ಕಿರುಕುಳ ನೀಡಿದ ಹಿನ್ನಲೆಯಲ್ಲಿ ಹಿಂದೂ ಸಂಘಟನೆ ಕಾರ್ಯಕರ್ತರು ಆತನ ಮೇಲೆ ಹಲ್ಲೆ ಮಾಡಿ ಪೊಲೀಸರಿಗೆ ಒಪ್ಪಿಸಿದ್ದಾರೆ. ಈ ವೇಳೆ ಸೈಯದ್ ಮೊಬೈಲ್ ಕಿತ್ತುಕೊಂಡು ನೋಡಿದಾಗ ನೂರಾರು ಹುಡುಗಿಯರ ಜೊತೆಗಿನ ಸರಸ ಸಲ್ಲಾಪದ ವಿಡಿಯೋಗಳು ಪತ್ತೆಯಾಗಿವೆ.

ಸದ್ಯ ಬೆಳ್ತಂಗಡಿ ಪೊಲೀಸರು ಪೋಕ್ಸ್ ಕಾಯ್ದೆಯಡಿ ಆತನನ್ನು ಬಂಧಿಸಿದ್ದಾರೆ. ಸೈಯದ್ ಮೂಲತಃ ಕಾರ್ಕಳ ನಿವಾಸಿ. ಬೆಳ್ತಂಗಡಿ ಖಾಸಗಿ ಕಾಲೇಜಿನಲ್ಲಿ ಓದುತ್ತಿದ್ದು, ವಾಲಿಬಾಲ್ ಆಟಗಾರ ಕೂಡ ಹೌದು. ಓರ್ವ ವಿದ್ಯಾರ್ಥಿನಿಗೆ ಸೈಯದ್ ಮೆಸೇಜ್ ಮೂಲಕ ಲೈಂಗಿಕ ಕಿರುಕುಳ ನೀಡಿರುವ ಆರೋಪ ಕೇಳಿಬಂದಿದೆ. ಈ ವಿಚಾರವಾಗಿ ಹಿಂದೂ ಸಂಘಟನೆ ಕಾರ್ಯಕರ್ತರು ಆತನನ್ನು ಥಳಿಸಿ ಬಳಿಕ ಪೊಲೀಸರಿಗೆ ಒಪ್ಪಿಸಿದ್ದಾರೆ.

ಘಟನೆ ವೇಳೆ ಸೈಯದ್ ಮೊಬೈಲ್ ಕಿತ್ತುಕೊಂಡು ನೋಡಿದಾಗ ಹಿಂದೂ ಸಂಘಟನೆ ಕಾರ್ಯಕರ್ತರು ಒಂದು ಕ್ಷಣ ಶಾಕ್ ಆಗಿದ್ದಾರೆ. ಏಕೆಂದರೆ ಆತನ ಮೊಬೈಲ್ ತುಂಬಾ ನೂರಾರು ಹುಡುಗಿಯರ ಜೊತೆಗಿನ ಸರಸ–ಸಲ್ಲಾಪದ ವಿಡಿಯೋಗಳನ್ನು ಕಂಡು ದಂಗಾಗಿದ್ದಾರೆ. ಇತ್ತ ತನ್ನ ಮೇಲೆ ಹಲ್ಲೆ ಮಾಡಿದವರ ವಿರುದ್ಧ ಸೈಯದ್ ಕೂಡ ಬೆಳ್ತಂಗಡಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾನೆ. ಹೀಗಾಗಿ ಹಿಂದೂ ಸಂಘಟನೆ ಕಾರ್ಯಕರ್ತರ ವಿರುದ್ಧವೂ ಎಫ್‌ಐಆರ್ ದಾಖಲಾಗಿದೆ.

# ತೆರೆದ ಬಾವಿಗೆ ವ್ಯಾನ್ ಬಿದ್ದು 12 ಮಂದಿ ದುರ್ಮರಣ



**ಭೂಪಾಲ್;** ವೇಗವಾಗಿ ಬಂದ ವ್ಯಾನ್ ನಿಯಂತ್ರಣ ತಪ್ಪಿ ತೆರೆದ ಬಾವಿಗೆ ಬಿದ್ದ ಪರಿಣಾಮ 12 ಮಂದಿ ಸಾವನ್ನಪ್ಪಿರುವ ಘಟನೆ ಮಧ್ಯಪ್ರದೇಶದ ಮಂದಸೌರ್ ಜಿಲ್ಲೆಯಲ್ಲಿ ನಡೆದಿದೆ. ಈ ಅಪಘಾತದಲ್ಲಿ 12 ಜನರು ಸಾವನ್ನಪ್ಪಿದ್ದು, ಕೆಲವರು ಗಾಯಗೊಂಡಿದ್ದಾರೆ

ಜಿಲ್ಲೆಯ ನಾರಾಯಣಗಢ ಪೊಲೀಸ್ ಠಾಣೆ ವ್ಯಾಪ್ತಿಯ ಕಚರಿಯಾ ಗ್ರಾಮದಲ್ಲಿ ವೇಗವಾಗಿ ಬಂದ ವ್ಯಾನ್ ನಿಯಂತ್ರಣ ತಪ್ಪಿ ಆಳವಾದ ಬಾವಿಗೆ ಬಿದ್ದ ಕಾರಣ ಈ ದುರ್ಘಟನೆ ನಡೆದಿದೆ. ಮೃತಪಟ್ಟ 12 ಮಂದಿಯಲ್ಲಿ ಬಾವಿಗೆ ಬಿದ್ದವರನ್ನು ರಕ್ಷಿಸಲು ಹೋದ ಯುವಕನು ಸೇರಿದ್ದಾನೆ ಎಂದು ಡಿಐಜಿ ಮನೋಜ್ ಸಿಂಗ್ ತಿಳಿಸಿದ್ದಾರೆ.

ಉನ್ವೆಲ್ ಮತ್ತು ರತ್ನಂ ಜಿಲ್ಲೆಗಳ ಜನರು ವ್ಯಾನ್‌ನಲ್ಲಿ ಪ್ರಯಾಣಿಸುತ್ತಿದ್ದರು. ಅವರು ನೀಮುಚ್ ಜಿಲ್ಲೆಯ ದೇವಸ್ಥಾನಕ್ಕೆ ಭೇಟಿ ನೀಡಲು ರತ್ನಾಮ್‌ನ ಖೋಜಂಖೇಡಾ ಗ್ರಾಮದಿಂದ ಹೋಗುತ್ತಿದ್ದರು. ನಂತರ ದಾರಿಯಲ್ಲಿ ವ್ಯಾನ್ ಬೈಕ್‌ಗೆ ಡಿಕ್ಕಿ ಹೊಡೆದಿದೆ

ಇದಾದ ನಂತರ, ಅದು ನಿಯಂತ್ರಣ ತಪ್ಪಿ ರಸ್ತೆ ಬದಿಯಲ್ಲಿದ್ದ ಮುಚ್ಚದ ಬಾವಿಗೆ ಬಿದ್ದಿತು. ವ್ಯಾನ್ ಬಾವಿಗೆ ಬಿದ್ದ ನಂತರ ಸ್ಥಳದಲ್ಲಿ ಗೊಂದಲ ಉಂಟಾಯಿತು. ಘಟನೆಯನ್ನು ನೋಡುತ್ತಿದ್ದ ಸ್ಥಳೀಯ ಯುವಕನೊಬ್ಬ ಧೈರ್ಯ ಪ್ರದರ್ಶಿಸಿ ಜನರನ್ನು ರಕ್ಷಿಸಲು ಬಾವಿಗೆ ಹಾರಿದ್ದಾನೆ. ಕೊನೆಗೆ ಆತನೂ ಸಾವನ್ನಪ್ಪಿದ್ದಾನೆ.

ಅಪಘಾತದ ಬಗ್ಗೆ ಮಾಹಿತಿ ಬಂದ ತಕ್ಷಣ, ಪೊಲೀಸರು ಸೇರಿದಂತೆ ಆಡಳಿತ ಸಿಬ್ಬಂದಿ ಸ್ಥಳಕ್ಕೆ ತಲುಪಿದರು. ಇದರೊಂದಿಗೆ ರಕ್ಷಣಾ ಕಾರ್ಯ ಆರಂಭವಾಯಿತು. ಬಾವಿಗೆ ಬಿದ್ದ ಜನರನ್ನು ರಕ್ಷಿಸಲು ಪ್ರಯತ್ನಿಸುತ್ತಿದ್ದಾಗ ಮನೋಹರ್ ಸಿಂಗ್ ಎಂಬ ಸ್ಥಳೀಯ ಯುವಕ ಸಾವನ್ನಪ್ಪಿದ್ದಾನೆ ಎಂದು ತಿಳಿಸಿದ್ದಾರೆ.

ವ್ಯಾನ್ ಬಾವಿಗೆ ಬಿದ್ದ ನಂತರ, ವ್ಯಾನ್ ನಿಂದ ಎಲ್‌ಪಿಜಿ ಅನಿಲ ಸೋರಿಕೆಯಾಗಲು ಪ್ರಾರಂಭಿಸಿತು. ಇದರಿಂದಾಗಿ ಒಳಗೆ ಸಿಲುಕಿದ್ದ ಜನರಿಗೆ ಉಸಿರುಗಟ್ಟುವಿಕೆ ಉಂಟಾಗಿತ್ತು. ಸ್ಥಳೀಯ ಯುವಕನೊಬ್ಬ ಬಾವಿಗೆ ಬಿದ್ದವರನ್ನು ರಕ್ಷಿಸಲು ಪ್ರಯತ್ನಿಸಿದನು. ಆದರೆ ಅನಿಲ ಸೋರಿಕೆಯಿಂದಾಗಿ ಉಸಿರುಗಟ್ಟಿ ಆತ ಕೂಡ ಸಾವನ್ನಪ್ಪಿದ್ದಾನೆ.

# ಪಹಲ್ಲಾಮ್ ಉಗ್ರರ ದಾಳಿಗೆ ವಿಶ್ವವ್ಯಾಪಿ ಖಂಡನೆ




**ನವದೆಹಲಿ:** ಪಹಲ್ಲಾಮ್ ದಾಳಿ ಖಂಡಿಸಿ ವಿದೇಶಗಳಲ್ಲಿ ಭಾರಿ ಪ್ರಮಾಣದ ಪ್ರತಿಭಟನೆಗಳು ನಡೆಯುತ್ತಿವೆ. ಅಮೆರಿಕ, ಫ್ರಾನ್ಸ್, ಇಂಗ್ಲೆಂಡ್, ಜರ್ಮನಿ, ಕೆನಡಾ, ಡೆನ್ಮಾರ್ಕ್, ಫಿನ್‌ಲ್ಯಾಂಡ್, ಸ್ಪೇನ್ ಮತ್ತಿತರ ದೇಶಗಳಲ್ಲಿ ವ್ಯಾಪಕ ಪ್ರತಿಭಟನೆ ನಡೆಯುತ್ತಿವೆ.

ಪಹಲ್ಲಾಮ್ ದಾಳಿ ಖಂಡಿಸಿ ಅಮೆರಿಕ, ಫ್ರಾನ್ಸ್, ಇಂಗ್ಲೆಂಡ್, ಜರ್ಮನಿಯಲ್ಲಿ ಬೃಹತ್ ಪ್ರತಿಭಟನೆ ನಡೆಸಿದ ಪ್ರತಿಭಟನಾಕಾರರು ಪಾಕಿಸ್ತಾನ ವಿರೋಧಿ ಘೋಷಣೆಗಳನ್ನು ಕೂಗಿದರು ಮತ್ತು ಪಹಲ್ಲಾಮ್ ದಾಳಿಯ ಸಂತ್ರಸ್ತರಿಗೆ ನ್ಯಾಯ ದೊರಕಿಸಿಕೊಡುವಂತೆ ಮನವಿ ಮಾಡಿಕೊಂಡಿದ್ದಾರೆ.

ಪ್ರತಿಭಟನಾಕಾರರು ಭಾರತವನ್ನು ಬೆಂಬಲಿಸುವ ಘೋಷಣೆಗಳನ್ನು ಹೊಂದಿರುವ ಫಲಕಗಳನ್ನು ಹಿಡಿದಿದ್ದರು, ಪಾಕಿಸ್ತಾನ ವಿರೋಧಿ ಘೋಷಣೆಗಳನ್ನು ಕೂಗಿದರು ಮತ್ತು ಭಾರತೀಯ ಧ್ವಜಗಳನ್ನು ಬೀಸಿದರು ಎಂದು ವರದಿಯಾಗಿದೆ. ಪಹಲ್ಲಾಮ್ ಭಯೋತ್ಪಾದಕ ದಾಳಿಯಲ್ಲಿ ಪಾಕಿಸ್ತಾನ ಮೂಲದ ಲಷ್ಕರ್– ಎ–ತೈಬಾಗೆ ಸಂಬಂಧಿಸಿದ ಭಯೋತ್ಪಾದಕ ಗುಂಪಿನ ಪಾತ್ರ ಹೊರಹೊಮ್ಮಿದ ನಂತರ ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆ ಹೆಚ್ಚಾಗಿದೆ.

ಇದು ಇತ್ತೀಚಿನ ವರ್ಷಗಳಲ್ಲಿ ಈ ಪ್ರದೇಶದಲ್ಲಿ ನಾಗರಿಕರ ಮೇಲೆ ನಡೆದ ಮಾರಣಾಂತಿಕ ದಾಳಿಗಳಲ್ಲಿ ಒಂದಾಗಿದೆ. ಪ್ರತಿಭಟನಾಕಾರರಲ್ಲಿ ಒಬ್ಬರು ಭಾರತ, ನಾವು ನಿಮ್ಮೊಂದಿಗೆ ನಿಲ್ಲುತ್ತೇವೆ ಎಂಬ ಫಲಕವನ್ನು ಹಿಡಿದಿದ್ದರು.

ಪಾಕಿಸ್ತಾನವು ಈ ಹಿಂದೆಯೂ ಅನೇಕ ದಾಳಿಗಳನ್ನು ನಡೆಸಿದೆ,

ನಾವು ಪುಲ್ವಾಮಾ, ಮುಂಬೈ ದಾಳಿ ಮತ್ತು ಈಗ ಪಹಲ್ಲಾಮ್ ಭಯೋತ್ಪಾದಕ ದಾಳಿಯನ್ನು ನೋಡಿದ್ದೇವೆ. ಪಾಕಿಸ್ತಾನವು ಈ ಹಿಂದೆಯೂ ಅನೇಕ ದಾಳಿಗಳನ್ನು ನಡೆಸಿದೆ, ನಾವು ಪುಲ್ವಾಮಾ, ಮುಂಬೈ ದಾಳಿ ಮತ್ತು ಈಗ ಪಹಲ್ಲಾಮ್ ಭಯೋತ್ಪಾದಕ ದಾಳಿಯನ್ನು ನೋಡಿದ್ದೇವೆ. ನಾವು ಯಾವುದೇ ಧರ್ಮ ಅಥವಾ ರಾಜಕೀಯ ಪಕ್ಷವನ್ನು ಪ್ರತಿನಿಧಿಸುವುದಿಲ್ಲ. ನಾವು ಪಾಕಿಸ್ತಾನಕ್ಕೆ ಸಂದೇಶವನ್ನು ಕಳುಹಿಸಲು ಬಯಸುತ್ತೇವೆ ಎಂದು ಪ್ಯಾರಿಸ್‌ನ ಪ್ರತಿಭಟನಾಕಾರರೊಬ್ಬರು ಸುದ್ದಿ ಸಂಸ್ಥೆಯೊಂದಕ್ಕೆ ತಿಳಿಸಿದ್ದಾರೆ.

ಭಯೋತ್ಪಾದಕ ದಾಳಿಯಲ್ಲಿ ಸಾವನ್ನಪ್ಪಿದ ಜನರ ಕುಟುಂಬಗಳಿಗೆ ನಮ್ಮ ಬೆಂಬಲ ಮತ್ತು ಒಗ್ಗಟ್ಟನ್ನು ತೋರಿಸಲು ನಾವು ಇಲ್ಲಿದ್ದೇವೆ ಭಾರತ ಸರ್ಕಾರವು ಪಾಕಿಸ್ತಾನಕ್ಕೆ ಅರ್ಥವಾಗುವ ಭಾಷೆಯಲ್ಲಿ ಉತ್ತರ ನೀಡುತ್ತದೆ ಎಂದು ನಾವು ಭಾವಿಸುತ್ತೇವೆ ಎಂದು ಲಂಡನ್‌ನಲ್ಲಿ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿದ ಭಾರತೀಯ ಸಮುದಾಯದ ಸದಸ್ಯರೊಬ್ಬರು ಹೇಳಿದರು.


# ಮೇ 20ಕ್ಕೆ ಸಿಇಟಿ ಫಲಿತಾಂಶ..!

**ಬೆಂಗಳೂರು:** ದ್ವಿತೀಯ ಪಿಯುಸಿ ಪರೀಕ್ಷೆ–2 ಫಲಿತಾಂಶ ಪ್ರಕಟವಾದ ನಂತರ ಪ್ರಸಕ್ತ ಸಾಲಿನ ಪಿಜಿ ಸಿಇಟಿ ಫಲಿತಾಂಶವು ಪ್ರಕಟವಾಗಲಿದೆ.ದ್ವಿತೀಯ ಪಿಯುಸಿ–1 ಮತ್ತು 2ರ ಪರೀಕ್ಷೆಯ ಫಲಿತಾಂಶದ ನಂತರ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸಿಇಟಿ ಫಲಿತಾಂಶ ಪ್ರಕಟಿಸಿ ರ್ಯಾಂಕ್ ಪಟ್ಟಿಯನ್ನು ಬಿಡುಗಡೆ ಮಾಡಲಿದೆ ಎಂದು ಉನ್ನತ ಮೂಲಗಳು ತಿಳಿಸಿವೆ.

ಮೇ 20 ರ ವೇಳೆಗೆ ಸಿಇಟಿ ಫಲಿತಾಂಶ ಪ್ರಕಟವಾಗುವ ನಿರೀಕ್ಷೆಯಿದೆ. ಈಗಾಗಲೇ ದ್ವಿತೀಯ ಪಿಯುಸಿ ಪರೀಕ್ಷೆ ಆರಂಭವಾಗಿದ್ದು, ಮೇ 8 ಕ್ಕೆ ಮುಕ್ತಾಯವಾಗಲಿದೆ. ಕಡಿಮೆ ವಿದ್ಯಾರ್ಥಿಗಳಿರುವ ಕಾರಣ ಸುಮಾರು ಎಂಟು–ಹತ್ತು ದಿನದಲ್ಲಿ ಮೌಲ್ಯಮಾಪನ ಕಾರ್ಯ ಮುಗಿಯಲಿದ್ದು, ಫಲಿತಾಂಶವನ್ನು ತಕ್ಷಣವೇ ಪ್ರಕಟಿಸಲು ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಪ್ರಕಟಿಸುವ ಸಾಧ್ಯತೆಗಳಿವೆ.

ಏ.16 ಮತ್ತು 17 ರಂದು 2025ರ ಸಿಇಟಿ ಪರೀಕ್ಷೆ ನಡೆದಿದೆ. ಏ.15 ರಂದು ಹೊರನಾಡು ಮತ್ತು ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆ ನಡೆಸಲಾಗಿತ್ತು. ಈ ಬಾರಿಯ ಸಿಇಟಿ ಪರೀಕ್ಷೆಯ ಓಎಂಆರ್ ಸೀಟುಗಳನ್ನು ಕೆಇಎ ವೆಬ್‌ಸೈಟ್‌ನಲ್ಲಿ ಅಪ್ಲೋಡ್ ಮಾಡಲಾಗಿದೆ. ಸಿಇಟಿ ಪರೀಕ್ಷೆಗೆ 3.30 ಲಕ್ಷಕ್ಕೂ ಹೆಚ್ಚು ಅಭ್ಯರ್ಥಿಗಳು ನೊಂದಾಯಿಸಿಕೊಂಡಿದ್ದು, ಶೇ.92ಕ್ಕೂ ಹೆಚ್ಚು ಮಂದಿ ಪರೀಕ್ಷೆ ಬರೆದಿದ್ದರು. ರಾಜ್ಯದ 775 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಸಲಾಗಿತ್ತು.

# ರಕ್ತದಾಹಿಗಳಿಗೆ ನೀರಿನ ದಾಹ ತೋರಿಸಿದ ಭಾರತ, ಮೈಕೈ ಪರಚಿಕೊಳ್ಳುತ್ತಿರುವ 'ಪಾಪಿ'ಸ್ತಾನ



**ಇಸ್ಲಾಮಬಾದ್:** ಭಾರತವು ಸಿಂಧೂನದಿ ನೀರು ಒಪ್ಪಂದ ಸ್ಥಗಿತಗೊಳಿಸಿದ್ದಕ್ಕೆ ಕೋಪದಲ್ಲಿ ನವದೆಹಲಿಯೊಂದಿಗಿನ ಎಲ್ಲಾ ವ್ಯಾಪಾರ ಸಂಬಂಧವನ್ನೂ ಇಸ್ಲಾಮಾಬಾದ್ ಕಡಿತಗೊಳಿಸಿದ್ದು, ಪಾಕಿಸ್ತಾನ ಕೇವಲ ನೀರಿಗಾಗಿ ಅಲ್ಲ, ಔಷಧಿಗಾಗಿಯೂ ಹಾತೊರೆಯುವ ಸಾಧ್ಯತೆ ಹೆಚ್ಚಿದೆ.

ಪಾಕಿಸ್ತಾನದ ಔಷಧ ನಿಯಂತ್ರಣ ಪ್ರಾಧಿಕಾರ (ಡಿಆರ್‌ಎಪಿ) ಔಷಧ ಕ್ಷೇತ್ರದ ಮೇಲಿನ ನಿರ್ಬಂಧಗಳ ಪರಿಣಾಮದ ಕುರಿತು ಯಾವುದೇ ಔಪಚಾರಿಕ ಅಧಿಸೂಚನೆಯನ್ನು ಹೊರಡಿಸಿಲ್ಲ. ಆದರೆ ಔಷಧಿಗಳ ಕೊರತೆ ಉಂಟಾಗದಂತೆ ತುರ್ತು ಕ್ರಮಗಳನ್ನು ಜಾರಿಗೆ ತರಲಾಗುತ್ತಿದೆ. ನಮ್ಮ ಔಷಧ ಅಗತ್ಯಗಳನ್ನು ಪೂರೈಸಲು ನಾವು ಪರ್ಯಾಯ ಮಾರ್ಗಗಳನ್ನು ನೋಡುತ್ತಿದ್ದೇವೆ ಎಂದು ಹಿರಿಯ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

ಪಾಕಿಸ್ತಾನ, ಚೀನಾ, ರಷ್ಯಾ ಮತ್ತು ಹಲವಾರು ಯುರೋಪಿಯನ್ ದೇಶಗಳಿಂದ ಪರ್ಯಾಯ ಮೂಲಗಳನ್ನು ಹುಡುಕುತ್ತಿದೆ. ರೇಬೀಸ್ ವಿರೋಧಿ ಲಸಿಕೆ, ಹಾವಿನ ವಿಷ ವಿರೋಧಿ, ಕ್ಯಾನ್ಸರ್ ಔಷಧಿಗಳು ಇತ್ಯಾದಿಗಳ ನಿರಂತರ ಪೂರೈಕೆಯನ್ನು ಖಚಿತಪಡಿಸಿಕೊಳ್ಳುವ ಗುರಿಯನ್ನು ಇದು ಹೊಂದಿದೆ.

ವ್ಯವಹಾರ ಸ್ಥಗಿತಗೊಳಿಸುವಿಕೆಯ ಪರಿಣಾಮಗಳನ್ನು ಎದುರಿಸಲು ತಕ್ಷಣದ ಕ್ರಮಗಳನ್ನು ತೆಗೆದುಕೊಳ್ಳದಿದ್ದರೆ, ದೊಡ್ಡ ಸಮಸ್ಯೆ ಉದ್ಭವಿಸಬಹುದು ಎಂದು ಉದ್ಯಮ ಮೂಲಗಳು ಮತ್ತು ಆರೋಗ್ಯ ತಜ್ಞರು ಎಚ್ಚರಿಸಿದ್ದಾರೆ.

ಔಷಧಿಗಳ ಕಾಳಸಂತೆ ಹೆಚ್ಚಳವಾಗುವ ಭಯವೂ ಇದೆ. ಪೂರೈಕೆ ಸರಪಳಿಯಲ್ಲಿನ ಅಡಚಣೆಯಿಂದಾಗಿ ತೀವ್ರ ಕೊರತೆ ಉಂಟಾಗಬಹುದು ಎಂದು ಔಷಧ ವಲಯವು ಭಯಪಡುತ್ತಿದೆ. ಅಲ್ಲಿ ಔಷಧಿಗಳಿಗೆ ಬೇಕಾಗುವ ಕಚ್ಚಾ ವಸ್ತುಗಳ ಶೇ.30 ರಿಂದ 40 ರಷ್ಟು ಭಾರತದಿಂದ ಬರುತ್ತವೆ.

ಪಹಲ್ಗಾಮ್ ದಾಳಿಯ ನಂತರ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸುವ ಭಾರತದ ನಿರ್ಧಾರಕ್ಕೆ ಪ್ರತಿಕ್ರಿಯೆಯಾಗಿ ಇಸ್ಲಾಮಾಬಾದ್ ಗುರುವಾರ ನವದೆಹಲಿಯೊಂದಿಗಿನ ಎಲ್ಲಾ ವ್ಯಾಪಾರವನ್ನು ಸ್ಥಗಿತಗೊಳಿಸಿದೆ ಮತ್ತು ಇತರ ಕ್ರಮಗಳು ಸೇರಿವೆ.

# ಕ್ಯಾಬ್ ಚಾಲಕನ ಕತ್ತು ಕೊಯ್ದು ಭೀಕರ ಕೊಲೆ

**ಬೆಂಗಳೂರು:** ಕ್ಯಾಬ್ ಚಾಲಕರೊಬ್ಬರನ್ನು ದುಷ್ಕರ್ಮಿಗಳು ಅಪಹರಿಸಿಕೊಂಡು ಹೋಗಿ ಕತ್ತು ಕೊಯ್ದು ಬರ್ಬರವಾಗಿ ಹತ್ಯೆಗೈದಿರುವ ಘಟನೆ ಸಾತನೂರು ಪೊಲೀಸ್ ಠಾಣಾ ವ್ಯಾಪ್ತಿಯ ಕಬ್ಬಾಳು ಸಮೀಪದ ಅರೆಕಟ್ಟೆದೊಡ್ಡಿ ಬಳಿ ನಡೆದಿದೆ.ನಗರದ ಸೋಲದೇವನಹಳ್ಳಿ ಠಾಣಾ ವ್ಯಾಪ್ತಿಯ ಚಿಕ್ಕಬ್ಯಾಲಕೆರೆ ನಿವಾಸಿ ಚಂದ್ರಶೇಖರ (39) ಕೊಲೆಯಾದ ಕ್ಯಾಬ್ ಚಾಲಕ.

ಇವರು ನಗರದಲ್ಲಿ ಕ್ಯಾಬ್ ಚಾಲಕ ವೃತ್ತಿ ಮಾಡಿಕೊಂಡು ಜೀವನ ನಿರ್ವಹಿಸುತ್ತಿದ್ದು, ನಿನ್ನೆ ದುಷ್ಕರ್ಮಿಗಳು ಇವರನ್ನು ವಾಹನವೊಂದರಲ್ಲಿ ನಗರದಿಂದ ಅಪಹರಿಸಿಕೊಂಡು ಹೋಗಿ ಕಬ್ಬಾಳು ಸಮೀಪದ ಖಾಸಗಿ ಶಾಲೆಗೆ ಸಂಪರ್ಕ ಕಲ್ಪಿಸುವ ರಸ್ತೆಯಲ್ಲಿ ಚಾಕುವಿನಿಂದ ಕತ್ತು ಕೊಯ್ದು ನಂತರ ತಲೆಯ ಮೇಲೆ ಕಲ್ಲು ಎತ್ತಿ ಹಾಕಿ ಬರ್ಭರವಾಗಿ ಹತ್ಯೆಗೈದು ಪರಾರಿಯಾಗಿದ್ದಾರೆ.ರಸ್ತೆಯಲ್ಲಿ ಬಿದ್ದಿದ್ದ ಶವವನ್ನು ಗಮನಿಸಿದ ಸ್ಥಳೀಯರು ಸಾತನೂರು ಪೊಲೀಸ್ ಠಾಣೆಗೆ ಮಾಹಿತಿ ನೀಡಿದರು. ಸುದ್ದಿ ತಿಳಿದು ಸ್ಥಳಕ್ಕೆ ಧಾವಿಸಿದ ಪೊಲೀಸರು ಪರಿಶೀಲನೆ ನಡೆಸಿದರು. ಆದರೆ ಕೊಲೆಯಾದ ವ್ಯಕ್ತಿಯ ಗುರುತು ಪತ್ತೆಯಾಗಿರಲಿಲ್ಲ.ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡ ಪೊಲೀಸರಿಗೆ ಕೊಲೆಯಾದ ವ್ಯಕ್ತಿ ಸೋಲದೇವನಹಳ್ಳಿ ಠಾಣಾ ವ್ಯಾಪ್ತಿಯ ಚಿಕ್ಕಬ್ಯಾಲೆಕೆರೆ ನಿವಾಸಿ ಎಂದು ಗೊತ್ತಾಗಿದೆ. ಸೋಲದೇವನಹಳ್ಳಿ ಠಾಣಾ ವ್ಯಾಪ್ತಿಯಲ್ಲಿ ಅಪಹರಣ ಪ್ರಕರಣ ದಾಖಲಾಗಿದೆ. ವೈಯಕ್ತಿಕ ದ್ವೇಷಕ್ಕಾಗಿ ಕೊಲೆ ನಡೆಯಿತೋ ಅಥವಾ ಮಹಿಳೆಯ ವಿಚಾರದಲ್ಲಿ ಕೊಲೆ ನಡೆದಿದೆಯೋ ಎಂಬ ಬಗ್ಗೆ ಪೊಲೀಸರ ತನಿಖೆ ಕೈಗೊಂಡು ದುಷ್ಕರ್ಮಿಗಳ ಪತ್ತೆಗೆ ಬಲೆ ಬೀಸಿದ್ದಾರೆ.

ಭಾರತದ ವಿರುದ್ಧ ದ್ವೇಷ, ನಕಲಿ ಸುದ್ದಿ ಪ್ರಸಾರ

# ಪಾಕಿಸ್ತಾನದ 15 ಯೂಟ್ಯೂಬ್ ಚಾನೆಲ್‌ಗಳು ಬ್ಯಾನ್

**ನವದೆಹಲಿ:** ಪಹಲ್ಗಾಮ್ ಉಗ್ರರ ದಾಳಿ ಘಟನೆ ಬೆನ್ನಲ್ಲೇ ಭಾರತ ಹಾಗೂ ಪಾಕಿಸ್ತಾನದ ನಡುವಿನ ಸಂಬಂಧ ಮತ್ತಷ್ಟು ಹಳಸಿದ್ದು, ಇದರ ನಡುವಲ್ಲೇ ಭಾರತದ ವಿರುದ್ಧವಾಗಿ ದ್ವೇಷ ಹಾಗೂ ನಕಲಿ ಸುದ್ದಿ ಪ್ರಸಾರ ಮಾಡುತ್ತಿರುವ ಪಾಕಿಸ್ತಾನದ 17 ಯೂಟ್ಯೂಬ್ ಚಾನೆಲ್ ಗಳನ್ನು ಕೇದ್ರ ಸರ್ಕಾರ ಬ್ಲಾಕ್ (ನಿಷೇಧ) ಮಾಡಿದೆ ಎಂದು ತಿಳಿದುಬಂದಿದೆ.

ಕೋಮು ಉದ್ವಿಗ್ನತೆಯನ್ನು ಪ್ರಚೋದಿಸುವ ಮತ್ತು ಭಾರತದ ಸಾರ್ವಭೌಮತ್ವ ಮತ್ತು ಭದ್ರತೆಯನ್ನು ದುರ್ಬಲಗೊಳಿಸುವ ಗುರಿಯನ್ನು ಹೊಂದಿರುವ ಪ್ರಚೋದನಕಾರಿ, ಸುಳ್ಳು ಸುದ್ದಿಗಳನ್ನು ಹರಡಿದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರ ಪಾಕಿಸ್ತಾನದ ಪ್ರಮುಖ ಸುದ್ದಿ ಸಂಸ್ಥೆಗಳು ಮತ್ತು ಮಾಜಿ ಕ್ರಿಕೆಟಿಗ ಶೋಯೆಬ್ ಅಖ್ತರ್ ಸೇರಿದಂತೆ 16 ಪಾಕಿಸ್ತಾನಿ ಯೂಟ್ಯೂಬ್ ಚಾನೆಲ್‌ಗಳನ್ನು ನಿಷೇಧಿಸಿದೆ ಎಂದ ಮೂಲಗಳು ತಿಳಿಸಿವೆ.

ದಿ ಪಾಕಿಸ್ತಾನ್ ರೆಫರೆನ್ಸ್, ಸಮಾ ಸ್ಪೋರ್ಟ್ಸ್, ಉಜೈರ್ ಕ್ರಿಕೆಟ್. ರಾಜಿ ನಾಮಾ, ಡಾನ್ ನ್ಯೂಸ್, ಸಮಾ ಟಿವಿ, ಎಆರ್‌ವೈ ನ್ಯೂಸ್, ಬೋಲ್ ನ್ಯೂಸ್, ಜಿಯೋ ನ್ಯೂಸ್, ರಫ್ತಾರ್ ಮತ್ತು ಸುನೋ ನ್ಯೂಸ್‌ನಂತಹ ಪ್ರಮುಖ ಪಾಕಿಸ್ತಾನಿ ಸುದ್ದಿವಾಹಿನಿಗಳನ್ನು ನಿಷೇಧಿಸಲಾಗಿದೆ ಎಂದು ತಿಳಿದುಬಂದಿದೆ.

ಇರ್ಷಾದ್ ಭಟ್ಟಿ, ಅಸ್ಮಾ ಶಿರಾಜಿ, ಉಮರ್ ಚೀಮಾ ಮತ್ತು ಮುನೀಬ್ ಫಾರೂಕ್‌ನಂತಹ ಪತ್ರಕರ್ತರು ನಿರ್ವಹಿಸುವ ಯೂಟ್ಯೂಬ್ ಚಾನೆಲ್‌ಗಳನ್ನೂ ಸಹ ಭಾರತೀಯ ಬಳಕೆದಾರರಿಗೆ ನಿರ್ಬಂಧಿಸಲಾಗಿದೆ.

ಇತ್ತೀಚೆಗೆ ಪಹಲ್ಗಾಮ್'ನಲ್ಲಿ ನಡೆದ ಉಗ್ರರ ದಾಳಿಯಲ್ಲಿ ಓರ್ವ ಸ್ಥಳೀಯ ಸೇರಿ 26 ಮಂದಿ ಪ್ರವಾಸಿಗರಪು ಸಾವನ್ನಪ್ಪಿದ್ದರು. ಈ ಪೈಶಾಚಿಕ ಘಟನೆ ಬಳಿಕ ಪಾಕಿಸ್ತಾನದ ಈ ಚಾನೆಲ್‌ಗಳು ತಪ್ಪು ಮಾಹಿತಿ ಮತ್ತು ಕೋಮು ಸಂಘರ್ಷವನ್ನು ಉತ್ತೇಜಿಸಲು ವಿಷಯವನ್ನು ಹರಡುತ್ತಿದ್ದ ಹಿನ್ನೆಲೆಯಲ್ಲಿ ಗೃಹ ಸಚಿವಾಲಯದ ಶಿಫಾರಸುಗಳ ಮೇರೆಗೆ ಈ ಕ್ರಮ ಕೈಗೊಳ್ಳಲಾಗಿದೆ ಎಂದು ವರದಿಗಳು ತಿಳಿಸಿವೆ.

# ಖಾಲಿಯಾದ ಉಡುವಳ್ಳಿ ಕೆರೆ : ನೀರಿಗೆ ಹಾಹಾಕಾರ

**ಹಿರಿಯೂರು:** ತಾಲ್ಲೂಕಿನ ಉಡುವಳ್ಳಿ ಕೆರೆ ಸಂಪೂರ್ಣ ಬತ್ತಿ ಹೋಗಿದ್ದು, ಸುತ್ತಲಿನ ಗುಡ್ಡ ಪ್ರದೇಶದಲ್ಲಿ ಆಶ್ರಯ ಪಡೆದಿದ್ದ ಪ್ರಾಣಿ– ಪಕ್ಷಿಗಳಿಗೆ, ಜನ ಜಾನುವಾರುಗಳಿಗೆ ಕುಡಿಯುವ ನೀರಿಗೆ ಹಾಹಾಕಾರ ಉಂಟಾಗಿದೆ. ತೆಂಗು ಅಡಿಕೆ ತೋಟಗಳು ಸಾಲುಸಾಲಾಗಿ ಒಣಗತೊಡಗಿವೆ.

ಕೆರೆಯು ಸುತ್ತಮುತ್ತಲಿನ ಆರೇಳು ಗ್ರಾಮಗಳ ಜನರ ಕುಡಿಯುವ ನೀರಿಗೆ ಆಸರೆಯಾಗಿದೆ. ಕೆರೆ ಬತ್ತಿರುವುದರಿಂದ ಜನರು ತೀವ್ರ ಸಮಸ್ಯೆ ಎದುರಿಸುವಂತಾಗಿದೆ.

'ಐದು ವರ್ಷಗಳ ಹಿಂದೆ ಕೊಳವೆಬಾವಿ ಕೊರೆಯಿಸಿ, ಇದ್ದ ಎರಡು ಎಕರೆ ಜಮೀನಿನಲ್ಲಿ ಅಡಿಕೆ ಸಸಿ ನಾಟಿ ಮಾಡಿದ್ದೆ. ಮುಂದಿನ ವರ್ಷ ಫಸಲು ಕೈಗೆ ಬರುತ್ತದೆ ಎಂಬ ಭರವಸೆಯಲ್ಲಿದ್ದೆ. ಇದ್ದಕ್ಕಿದ್ದಂತೆ ಕೊಳವೆಬಾವಿಯಲ್ಲಿನ ನೀರು ಬತ್ತಿ ಹೋಯಿತು. ಸುತ್ತಲಿನ ತೋಟದವರಿಗೆ ನೀರನ್ನು ಕೇಳಿದರೆ, ಅವರು ತಮ್ಮ ಕಷ್ಟಗಳನ್ನು ಹೇಳಿಕೊಂಡರು. ಕೊನೆಗೆ ತೋಟ ಉಳಿಸಲು ಕೊಳವೆಬಾವಿ ಕೊರೆಯಿಸಲು ಮುಂದಾದೆ. 900 ಅಡಿ ಕೊರೆಯಿಸಿದರೂ ಹನಿ ನೀರು ಬರಲಿಲ್ಲ. ಇನ್ನೊಂದು ಕೊಳವೆಬಾವಿ ಕೊರೆಯಿಸಲು ಯಾರೂ ಸಾಲ ಕೊಡುತ್ತಿಲ್ಲ. ಮರದ ಒಳಗೆ ನೀರು ಬಿಡದಿದ್ದರೆ ಅಡಿಕೆ ಗಿಡಗಳೆಲ್ಲ ಸಂಪೂರ್ಣ ಒಣಗಿ ಹೋಗುತ್ತವೆ. ನನ್ನ ಬದುಕು ಬೀದಿಗೆ ಬೀಳುತ್ತದೆ' ಹೀಗೆನ್ನುತ್ತಲೇ ಹುಲುಗಲಕುಂಟೆ ಗ್ರಾಮದ ಕರಿಯಮ್ಮ ಅವರ ಕಣ್ಣಾಲಿಗಳು ಒದ್ದೆಯಾದವು.

ದೊಡ್ಡನಾಗಣ್ಣ, ದೇವರಾಜ್ ಅವರ ಕತೆ ಇದಕ್ಕಿಂತ ಭಿನ್ನವಾಗಿಲ್ಲ. ಅವರ ತೋಟಗಳೂ ನೀರಿಲ್ಲದೆ ಒಣಗತೊಡಗಿವೆ. ಸೇವಂತಿಗೆ, ಗುಲಾಬಿ ಬೆಳೆದು ಕುಟುಂಬ ನಡೆಸುತ್ತಿದ್ದ ಹತ್ತಾರು ರೈತರು ಕೊಳವೆಬಾವಿಯಲ್ಲಿ ನೀರು ಬತ್ತಿರುವ ಕಾರಣಕ್ಕೆ ತಲೆಮೇಲೆ ಕೈಹೊತ್ತು ಕುಳಿತಿದ್ದಾರೆ.

'ನಮ್ಮ ಗ್ರಾಮವೊಂದರಲ್ಲೇ ಒಂದು ತಿಂಗಳಿಂದೀಚೆಗೆ 60 70 ಕೊಳವೆಬಾವಿ ಕೊರೆಯಿಸಲಾಗಿದೆ. 800ರಿಂದ 1,100 ಅಡಿಯವರೆಗೆ ಕೊರೆಸಿದ್ದರೂ ಅರ್ಧ, ಒಂದಿಂಚು ನೀರು ಬಂದರೆ ದೊಡ್ಡ ಮಾತು ಎಂಬಂತಾಗಿದೆ. 15–20 ದಿನಗಳಲ್ಲಿ ಮಳೆ ಬರದೇ ಹೋದರೆ ನೂರಾರು ಎಕರೆಯಲ್ಲಿರುವ ಅಡಿಕೆ ತೋಟಗಳು, ದಾಳಿಂಬೆ, ತೆಂಗು ಒಣಗಿ ಹೋಗಲಿವೆ. ಕುಡಿಯುವ ನೀರಿಗೂ ಟ್ಯಾಂಕರ್ ಮುಂದೆ ಮಹಿಳೆಯರು ಮತ್ತು ಮಕ್ಕಳು ಸಾಲುಗಟ್ಟಿ ನಿಲ್ಲುತ್ತಿದ್ದಾರೆ. ಪರಿಸ್ಥಿತಿ



ಹಿರಿಯೂರು ತಾಲ್ಲೂಕಿನ ಉಡುವಳ್ಳಿ ಕೆರೆ ಸಂಪೂರ್ಣವಾಗಿ ಒಣಗಿ ಹೋಗಿರುವುದು.

ಹೀಗೇ ಮುಂದುವರಿದರೆ ಜನರು ಗುಳೇ ಹೋಗಬೇಕಾಗುತ್ತದೆ ಎಂದು ಗ್ರಾಮ ಪಂಚಾಯಿತಿ ಸದಸ್ಯ ರಂಗನಾಥ್ ಆತಂಕ ವ್ಯಕ್ತಪಡಿಸಿದ್ದಾರೆ.

ಕೊನೆಗೆ ತೋಟ ಉಳಿಸಲು ಕೊಳವೆಬಾವಿ ಕೊರೆಯಿಸಲು ಮುಂದಾದೆ. 900 ಅಡಿ ಕೊರೆಯಿಸಿದರೂ ಹನಿ ನೀರು ಬರಲಿಲ್ಲ. ಇನ್ನೊಂದು ಸೂಳವೆಬಾವಿ ಕೊರೆಯಿಸಲು ಯಾರೂ ಸಾಲ ಕೊಡುತ್ತಿಲ್ಲ. ವಾರದ ಒಳಗೆ ನೀರು ಬಿಡದಿದ್ದರೆ ಅಡಿಕೆ ಗಿಡಗಳೆಲ್ಲ ಸಂಪೂರ್ಣ ಒಣಗಿ ಹೋಗುತ್ತವೆ. ನನ್ನ ಬದುಕು ಬೀದಿಗೆ ಬೀಳುತ್ತದೆ ಹೀಗೆನ್ನುತ್ತಲೇ ಹುಲುಗಲಕುಂಟೆ ಗ್ರಾಮದ ಕರಿಯಮ್ಮ ಅವರ ಕಣ್ಣಾಲಿಗಳು ಒದ್ದೆಯಾದವು.

ದೊಡ್ಡನಾಗಣ್ಣ, ದೇವರಾಜ್ ಅವರ ಕತೆ ಇದಕ್ಕಿಂತ ಭಿನ್ನವಾಗಿಲ್ಲ, ಅವರ ತೋಟಗಳೂ ನೀರಿಲ್ಲದೆ ಒಣಗತೊಡಗಿವೆ. ಸೇವಂತಿಗೆ, ಗುಲಾಬಿ ಬೆಳೆದು ಕುಟುಂಬ ನಡೆಸುತ್ತಿದ್ದ ಹತ್ತಾರು ರೈತರು ಕೊಳವೆಬಾವಿಯಲ್ಲಿ ನೀರು ಬತ್ತಿರುವ ಕಾರಣಕ್ಕೆ ತಲೆಮೇಲೆ ಕೈಹೊತ್ತು ಕುಳಿತಿದ್ದಾರೆ.

'ನಮ್ಮ ಗ್ರಾಮವೊಂದರಲ್ಲೇ ಒಂದು ತಿಂಗಳಿಂದೀಚೆಗೆ 60–70 ಕೊಳವೆಬಾವಿ ಕೊರೆಯಿಸಲಾಗಿದೆ. 800ರಿಂದ 1,100 ಅಡಿಯವರೆಗೆ ಕೊರೆಸಿದ್ದರೂ ಅರ್ಧ, ಒಂದಿಂಚು ನೀರು ಬಂದರೆ ದೊಡ್ಡ ಮಾತು ಎಂಬಂತಾಗಿದೆ. 15–20 ದಿನಗಳಲ್ಲಿ ಮಳೆ ಬರದೇ ಹೋದರೆ ನೂರಾರು ಎಕರೆಯಲ್ಲಿರುವ ಅಡಿಕೆ ತೋಟಗಳು, ದಾಳಿಂಬೆ, ತೆಂಗು ಒಣಗಿ ಹೋಗಲಿವೆ. ಕುಡಿಯುವ ನೀರಿಗೂ ಟ್ಯಾಂಕರ್ ಮುಂದೆ ಮಹಿಳೆಯರು ಮತ್ತು ಮಕ್ಕಳು ಸಾಲುಗಟ್ಟಿ ನಿಲ್ಲುತ್ತಿದ್ದಾರೆ. ಪರಿಸ್ಥಿತಿ ಹೀಗೇ ಮುಂದುವರಿದರೆ ಜನರು ಗುಳೇ ಹೋಗಬೇಕಾಗುತ್ತದೆ' ಎಂದು ಗ್ರಾಮ ಪಂಚಾಯಿತಿ ಸದಸ್ಯ ರಂಗನಾಥ್ ಆತಂಕ ವ್ಯಕ್ತಪಡಿಸಿದರು.

**ಕೆರೆಗೆ ನೀರು ಬಂದರೆ ಮಾತ್ರ ರೈತರ ಉಳಿವು:**

'ಹುಲುಗಲಕುಂಟೆ ಮೇಲ್ಭಾಗದಲ್ಲಿರುವ ಉಡುವಳ್ಳಿ ಕೆರೆಗೆ ನೀರು ಬಂದಲ್ಲಿ ಮಾತ್ರ ಅಂತರ್ಜಲ ಹೆಚ್ಚುತ್ತದೆ. ಕೊಳವೆಬಾವಿಗಳಲ್ಲಿ ಮತ್ತೆ ನೀರು ಕಾಣಿಸಿಕೊಳ್ಳುತ್ತದೆ. ಆಗ ಮಾತ್ರ ರೈತರು ಉಳಿಯಲು ಸಾಧ್ಯ. ಇದು ಕೇವಲ ಹುಲುಗಲಕುಂಟೆ ಗ್ರಾಮದ ಸಮಸ್ಯೆ ಅಲ್ಲ. ಉಡುವಳ್ಳಿ ಕೆರೆ ಭರ್ತಿಯಾದರೆ, ಸೋಮೇರಹಳ್ಳಿ, ಸೋಮೇರಹಳ್ಳಿ ತಾಂಡಾ, ಹುಲುಗಲಕುಂಟೆ, ಪರಮೇನಹಳ್ಳಿ, ಚಳಮಡು, ಗಾಂಧಿನಗರ, ಇದ್ದಲ ನಾಗೇನಹಳ್ಳಿಗಳ ಜಮೀನುಗಳಲ್ಲಿ ಅಂತರ್ಜಲ ಮಟ್ಟ ಹೆಚ್ಚುತ್ತದೆ. ಕುಡಿಯುವ ನೀರಿನ ಸಮಸ್ಯೆ ಜೊತೆಗೆ ಅಂದಾಜು 800 ಎಕರೆ ಭೂಮಿಗೆ ನೀರಾವರಿ ಕಲ್ಪಿಸಬಹುದು' ಎಂದು ಅವರು ಹೇಳಿದರು.



ಹಿರಿಯೂರು ತಾಲ್ಲೂಕಿನ ಹುಲುಗಲಕುಂಟೆ ಗ್ರಾಮದಲ್ಲಿ ಟ್ಯಾಂಕರ್ ನೀರಿಗೆ ಮುಗಿಬಿದ್ದಿರುವ ಗ್ರಾಮಸ್ಥರು

**ಪೂರ್ಣಗೊಳ್ಳದ ಕಾಮಗಾರಿ :** ಉಡುವಳ್ಳಿ ಕೆ–ರೆಗೆ ಕತ್ತೆಹೊಳೆಯಿಂದ ಅಂದಾಜು 7 2 ಕೋಟಿ ವೆಚ್ಚದಲ್ಲಿ ಪೂರಕ ನಾಲೆ ನಿರ್ಮಿಸುವ ಕಾಮಗಾರಿಗೆ 2003ರಲ್ಲಿ ಭೂಮಿಪೂಜೆ ನೆರವೇರಿತ್ತು. 22 ವರ್ಷ ಕಳೆದರೂ ಕಾಮಗಾರಿ ಪೂರ್ಣಗೊಳ್ಳದ ಕಾರಣ ಆರೇಳು ಹಳ್ಳಿಗಳ ರೈತರು ಆಡಳಿತ ನಡೆಸುವವರಿಗೆ ಶಾಪ ಹಾಕುತ್ತಿದ್ದಾರೆ. ಈಚೆಗೆ ಈ ಭಾಗದ ರೈತರು ವಾಣಿವಿಲಾಸ ಜಲಾಶಯದಿಂದ ಉಡುವಳ್ಳಿ ಕೆರೆಗೆ ನೀರು ತುಂಬಿಸುವ ಮೂಲಕ ಶಾಶ್ವತ ಪರಿಹಾರ ನೀಡುವಂತೆ ಒತ್ತಾಯಿಸಿ ಪಾದಯಾತ್ರೆ ಮೂಲಕ ಪ್ರತಿಭಟನೆ ನಡೆಸಿದ್ದರು. ಉಡುವಳ್ಳಿ ಕೆರೆ ಒಣಗಿರುವ ಕಾರಣ ಆರೇಳು ಹಳ್ಳಿಗಳಲ್ಲಿ ಅಂತರ್ಜಲ ಕುಸಿದಿದ್ದರೆ ಅತ್ಯಂತ ರುಚಿಕರವಾದ ಮೀನಿಗೆ ಹೆಸರಾಗಿದ್ದ ಕೆರೆಯಲ್ಲಿ ಮೀನು ಸಿಗದಾಗಿದೆ. ಜೊತೆಗೆ ಮೀನು ಕೃಷಿಯನ್ನು ನಂಬಿದ್ದ ಹತ್ತಾರು ಕುಟುಂಬಗಳ ಕೈಗೆ ಕೆಲಸ ಇಲ್ಲವಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರು ವಾಣಿವಿಲಾಸ ಜಲಾಶಯದಿಂದ ಈ ಭಾಗದ ನೆಲೆಗಳಿಗೆ ನೀರು ತುಂಬಿಸುವ ಕೆಲಸ ಮಾಡಬೇಕು. ಇಲ್ಲವಾದಲ್ಲಿ ಹಸಿದ ರೈತರ ಆಕ್ರೋಶವನ್ನು ಎದುರಿಸಬೇಸಿಗುತ್ತದೆ. ಎಂಬುದು ರೈತರ ಎಚ್ಚರಿ–ಕೆಯಾಗಿದೆ.

# ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ಉಗ್ರರ ದಾಳಿ ಖಂಡಿಸಿ ಎಬಿವಿಪಿ ಪ್ರತಿಭಟನೆ




**ಚಿಕ್ಕಮಗಳೂರು:** ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಭಯೋತ್ಪಾದಕರ ದಾಳಿಯನ್ನು ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಖಂಡಿಸಿ ಇಂದು ನಗರದ ಅಜಾದ್ ವೃತ್ತದಲ್ಲಿ ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿ ನಾರಾಯಣ ಕನಕರಡ್ಡಿ ಅವರ ಮೂಲಕ ರಾಜ್ಯಪಾಲರು ಮತ್ತು ಪ್ರಧಾನ ಮಂತ್ರಿಗಳಿಗೆ ಮನವಿ ಸಲ್ಲಿಸಿದರು.

ಎಬಿವಿಪಿಯ ಜಿಲ್ಲಾ ಸಂಚಾಲಕ ರಾಕೇಶ್ ಮರಡಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ ಉಗ್ರವಾದಿ ಕೃತ್ಯದ ವಿರುದ್ಧ ಘೋಷಣೆ ಕೂಗಿದ ನಂತರ ಮಾತನಾಡಿದ ಅವರು, ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಉಗ್ರರ ಹೇಡಿತನದ ಗುಂಡಿನ ದಾಳಿ ಕೃತ್ಯವನ್ನು ತೀವ್ರವಾಗಿ ಖಂಡಿಸಿದರು.

ಜಮ್ಮು ಮತ್ತು ಕಾಶ್ಮೀರ ಭಾರತದ ಅವಿಭಾಜ್ಯ ಅಂಗವೆಂಬುದು ಸಾರ್ವಕಾಲಿಕ ಸತ್ಯವಾಗಿದ್ದು, ಅಲ್ಲಿನ ಪ್ರತ್ಯೇಕವಾದದ ಮನಸ್ಥಿತಿಯನ್ನು ಬದಲಾಯಿಸಲು ಜನಜೀವನ ಸ್ಥಿತಿಗತಿಗಳನ್ನು ಸ್ಥಿರಗೊಳಿಸಿ ಶಾಂತಿಯುತ ಕಾಶ್ಮೀರವೆಂಬುವುದನ್ನು ಖಚಿತಪಡಿಸಿಕೊಳ್ಳಲು ಕೇಂದ್ರಸರ್ಕಾರ ಈಗಾಗಲೇ ಹಲವು ಕ್ರಮಗಳನ್ನು ಕೈಗೊಂಡಿ–ದೆ ಎಂದರು.

ಆದರೆ ಅಲ್ಲಿನ ಭಯೋತ್ಪಾದಕ ನುಸುಳುಕೋರರ ಹಾವಳಿ ತಡೆಗಟ್ಟಲು ಸಾಧ್ಯವಾಗಿಲ್ಲ. ಮಾರುಕಟ್ಟೆಗಳಲ್ಲಿ ಇತ್ತೀಚೆಗೆ ವಲಸೆ ಕಾರ್ಮಿಕರ ಮೇಲೆ ನಡೆದ ದಾಳಿಗಳು ಹಾಗೂ ಇಂದು ನಡೆದಿರುವ ಪ್ರವಾಸಿಗರ ಮೇಲೆ ನಡೆದಿರುವ ದಾಳಿಯನ್ನು ಗಮನಿಸಿದರೆ ಕಾಶ್ಮೀರದ ಶಾಂತಿ ಮತ್ತು ಭಾರತದೊಂದಿಗಿನ ಏಕತೆಗೆ ಉಗ್ರರು ಪ್ರತ್ಯೇಕವಾದಿಗಳು ಸವಾಲೊಡ್ಡುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ ಎಂದು ದೂರಿದರು.

ಕೇಂದ್ರಸರ್ಕಾರ ಈ ಉಗ್ರರ ವಿರುದ್ಧ ವ್ಯಾಪಕ ಕಠಿಣ ಕ್ರಮ ಕೈಗೊಂಡು ಆರೋಪಿಗಳಿಗೆ ತಕ್ಕ ಶಿಕ್ಷೆ ನೀಡಬೇಕೆಂದು ಒತ್ತಾಯಿಸಿದ ಅವರು, ಈ ಭಯೋತ್ಪಾದಕ ದಾಳಿಯಲ್ಲಿ ಹತ್ಯೆಯಾದವರಿಗೆ ಹಾಗೂ ತೀವ್ರ ಗಾಯಗೊಂಡಿರುವವರಿಗೆ ಸಂತಾಪ ಸೂಚಿಸುವುದರ ಜೊತೆಗೆ ಸೂಕ್ತ ಪರಿಹಾರ ನೀಡಬೇಕೆಂದು ಒತ್ತಾಯಿಸಿದ್ದಾರೆ.

ಇಂತಹ ವಿಷಮ ಪರಿಸ್ಥಿತಿಯಲ್ಲಿ ಭಾರತೀಯ ನಾಗರೀಕರೆಲ್ಲರೂ ಒಗ್ಗಟ್ಟಾಗಿ ನಿಲ್ಲಬೇಕು. ಇಸ್ಲಾಮಿಕ್ ಭಯೋತ್ಪಾದನೆ ವಿರುದ್ಧ ಧ್ವನಿಎತ್ತಿ ಕೇಂದ್ರ ಮತ್ತು ರಾಜ್ಯಸರ್ಕಾರಗಳು ಉಗ್ರಗಾಮಿಗಳ ದಾಳಿಗೆ ಒಳಗಾಗಿರುವ ಕುಟುಂಬಗಳಿಗೆ ಸಾಂತ್ವನ ಹೇಳಿ ಧೈರ್ಯ ತುಂಬಬೇಕೆಂದು ಆಗ್ರಹಿಸಿದರು.

ಭಾರತೀಯ ನೆಲದಲ್ಲಿ ನಾಗರೀಕರ ಮೇಲೆ ನಡೆದಿರುವ ಈ ರೀತಿಯ ದಾಳಿಯನ್ನು ಸಹಿಸಲು ಸಾಧ್ಯವಿಲ್ಲ. ಭಯೋತ್ಪಾದಕರ ವಿರುದ್ಧ ಶೂನ್ಯ ಸಹಿಷ್ಣತೆಯೊಂದಿಗೆ ಭಯೋತ್ಪದನೆಯನ್ನು ಮೂಲದಿಂದ ಕಿತ್ತೊಗೆಯಬೇಕೆಂದು ಕೇಂದ್ರಸರ್ಕಾರವನ್ನು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಎಬಿವಿಪಿ ಸಂಘಟನಾ ಕಾರ್ಯದರ್ಶಿ ಸಿದ್ದಾರ್ಥ್‌ಉಪ್ಪಾರ, ನಗರ ವಿದ್ಯಾರ್ಥಿ ಪ್ರಮುಖ್ ನಿರುಪಮ, ತಾಲ್ಲೂಕು ಸಂಚಾಲಕ ಮನು, ಸಿದ್ದು, ಪ್ರೇಕ್ಷಿತ್ ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ವಿಶ್ವಕರ್ಮ ಸಮಾಜದ ಜಾತಿ ಸಮೀಕ್ಷೆ ನೈಜ ವರದಿ ಜಾರಿಗೆ ಬ್ರಾಹ್ಮಣ ಸಭಾ ಆಗ್ರಹ

**ಚಿಕ್ಕಮಗಳೂರು:** ಸರ್ಕಾರ ವಿಶ್ವಕರ್ಮ ಸಮಾಜಕ್ಕೆ ಜಾತಿ ಸಮೀಕ್ಷೆಯ ನೈಜ ವರದಿ ಜಾರಿಮಾಡುವಂತೆ ಆಗ್ರಹಿಸಿ ಹಾಗೂ ಸಿದ್ದವಾಗಿರುವ ಅವೈಜ್ಞಾನಿಕ ವರದಿಯನ್ನು ತಿರಸ್ಕರಿಸಬೇಕು. ಇಲ್ಲದಿದ್ದಲ್ಲಿ ಬೀದಿಗಿಳಿದು ಉಗ್ರ ಹೋರಾಟ ಮಾಡುವುದಾಗಿ ವಿಶ್ವಬ್ರಾಹ್ಮಣ ಸಮಾಜ ಸೇವಾ ಸಭಾ ಎಚ್ಚರಿಸಿದೆ.

ಇಂದು ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಸಂಘದ ಜಿಲ್ಲಾಧ್ಯಕ್ಷ ಹೆಚ್.ಆರ್ ಉಮಾಶಂಕರ್ ಅವರು ಜಾತಿ ಸಮೀಕ್ಷೆಯಲ್ಲಿ ಸರ್ಕಾರ ವಿಶ್ವಕರ್ಮ ಸಮಾಜದ ಅಂಕಿಅಂಶಗಳನ್ನು ಗುರ್ತಿಸುವಲ್ಲಿ ವಿಫಲವಾಗಿದೆ. ಸಮಾಜದಲ್ಲಿ 2015 ರಲ್ಲಿ 35 ಲಕ್ಷ ಜನಸಂಖ್ಯೆ ಇದ್ದು, 2025 ರ ಜಾಗತಿಗಣತಿಯಲ್ಲಿ 6 ಲಕ್ಷಕ್ಕೆ ಇಳಿಸಿರುವುದನ್ನು ಖಂಡಿಸಿದರು.

ಈ ಬಗ್ಗೆ ಸಮಾಜ ವಿರೋಧ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ 15 ಲಕ್ಷ ಜನಸಂಖ್ಯೆ ಇದೆ ಎಂದು ವರದಿ ಸಿದ್ದಪಡಿಸಲಾಗಿದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಒಟ್ಟು 35 ಸಾವಿರ ಜನಸಂಖ್ಯೆ ಇದ್ದು, ಇದರಲ್ಲಿ ಚಿಕ್ಕಮಗಳೂರು ತಾಲ್ಲೂಕಿನಲ್ಲಿ 4 ಸಾವಿರ, ತರೀಕೆರೆ 6 ಸಾವಿರ, ಶೃಂಗೇರಿಯಲ್ಲಿ 2 ಸಾವಿರ ಸಮುದಾಯದ ಜನರಿದ್ದಾರೆಂದು ಹೇಳಿದರು.

ಕೂಡಲೇ ಮರು ಜಾತಿಗಣತಿ ನಡೆಸುವ ಮೂಲಕ ನೈಜ ವರದಿಯನ್ನು ಸಿದ್ದಪಡಿಸಿ ಜಾರಿಮಾಡಬೇಕು. ಇಲ್ಲವಾದಲ್ಲಿ ಸಮಾಜವು ಸಂಘಟನೆಗಳೊಂದಿಗೆ ಸೇರಿ ಮುಂದೆ ವಿವಿಧ



ರೀತಿಯಲ್ಲಿ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು.

ಈ ರೀತಿ ಹಲವಾರು ಸಮಸ್ಯೆಗಳನ್ನು ಮುಂದಿಟ್ಟು ವಿಶ್ವಕರ್ಮ ಸಮಾಜಕ್ಕೆ ಮಲತಾಯಿ ಧೋರಣೆ ಅನುಸರಿಸುತ್ತಿರುವ ಸರ್ಕಾರದ ಕ್ರಮವನ್ನು ಖಂಡಿಸಿದ ಅವರು, ಜಾತಿಗಣತಿ ವರದಿಯನ್ನು ಪುನರ್ ಪರಿಶೀಲಿಸಬೇಕೆಂದು ಒತ್ತಾಯಿಸಿದರು.

ವಿಶ್ವಕರ್ಮ ಸಮಾಜಕ್ಕೆ ಜಾತಿನಿಂದನೆ ಮಾಡುತ್ತಿರುವುದು ಎದ್ದು ಕಾಣುತ್ತಿದ್ದು, ಸಿಇಟಿ ಪರೀಕ್ಷೆಯಲ್ಲಿ ಜನಿವಾರವನ್ನು ತೆಗೆಸಿ ಪರೀಕ್ಷಾ ಕೊಠಡಿಗೆ ಕಳುಹಿಸಿರುವುದು ಹಿಂದೂ ಧರ್ಮದ ಆಚರಣೆಗೆ ಅಡ್ಡಿಪಡಿಸಿದಂತಾಗಿದೆ ಎಂದು ದೂರಿದರು.

ಈ ಎಲ್ಲಾ ಘಟನೆಗಳು ನಡೆಯುತ್ತಿರುವಾಗಲೇ ಲಕ್ಷ್ಮೀ ನಿವಾಸ ಧಾರಾವಾಹಿಯ ಸನ್ನಿವೇಶ ಒಂದರಲ್ಲಿ ಮಾತನಾಡುವ ಭರದಲ್ಲಿ "ಕಳ್ಳ ಆಚಾರಿ" ಎಂದು ಪದೇ ಪದೇ ನಿಂದಿಸಿರುವುದು ಖಂಡನೀಯ, ಮನೆಯಲ್ಲೇ ಕುಳಿತು ಧಾರಾವಾಹಿಯ ನಿರ್ಮಾಪಕರು ಕ್ಷಮೆ ಕೇಳಿರುವುದನ್ನು ಒಪ್ಪುವುದಿಲ್ಲ. ಧಾರವಾಹಿಯಲ್ಲಿ ಪ್ರಸಾರವಾಗುತ್ತಿರುವ ಈ ಸನ್ನಿವೇಶವನ್ನು ಕಡಿತಗೊಳಿಸಿ ಬಹಿರಂಗ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸಂಘದ ಉಪಾಧ್ಯಕ್ಷರಾದ ಎಂ.ಜೆ. ಚಂದ್ರಶೇಖರ ಆಚಾರ್ಯ, ವಿಶ್ವಕರ್ಮ ಕೈಗಾರಿಕಾ ಸಹಕಾರ ಸಂಘದ ಅಧ್ಯಕ್ಷ ಬಿ.ಪಿ. ರತೀಶ್, ಉಪಾಧ್ಯಕ್ಷ ಸಿ.ಜೆ. ಬಾಲಕೃಷ್ಣ, ರಾಮಪ್ಪಾಚಾರ್ಯ, ಮೋಹನ್, ಅರವಿಂದ, ಪರಮೇಶ್ವರಾಚಾರ್ಯ ಮತ್ತಿತರರು ಉಪಸ್ಥಿತರಿದ್ದರು.

# ವಚನ ತಾತ್ವಿಕತೆಯನ್ನು ದಿಕ್ಕು ತಪ್ಪಿಸುವ ಕೆಲಸ ವಿಪರ್ಯಾಸ : ರವೀಶ್ ಕ್ಯಾತನಬೀಡು

**ಚಿಕ್ಕಮಗಳೂರು:** ವಚನ ಧರ್ಮವು ಆಳವಾದುದು, ಇದಿರಾಗುವುದು ಸುಲಭವಲ್ಲ, ಅರಿತುಕೊಳ್ಳುವುದೂ ಸುಲಭವಲ್ಲ. ಶಾಂತವಾದದ್ದು, ಉದಾತ್ತವಾದದ್ದು, ಸಾಮಾನ್ಯ ತರ್ಕಕ್ಕೆ ಸಿಗಲಾರದ್ದು, ಸೂಕ್ಷ್ಮವಾದದ್ದು, ವಿವೇಕಿಗಳಿಗೆ ಮಾತ್ರ ದಕ್ಕುವಂತಹದ್ದು, ಇದು ವಚನ ಧರ್ಮದ ಬಗ್ಗೆ ಅನೇಕರು ಹೇಳಿದ ಮಾತು.

ಈ ಮಾತನ್ನು ತುಂಬಾ ಎಚ್ಚರಿಕೆಯಿಂದ ಪರಿಭಾವಿಸಬೇಕು. ವಚನ ತತ್ವವನ್ನು ತಿಳಿದುಕೊಳ್ಳುವ ಹಂಬಲ ಇದ್ದರೆ ಸಾಲದು, ಅದನ್ನು ತಿಳಿದುಕೊಳ್ಳುವ ಸರಿಯಾದ ಮಾರ್ಗ ಹಿಡಿಯದ ಹೊರತು ಅದು ಸಾಧ್ಯವಿಲ್ಲ. ತಪ್ಪು ದಾರಿ ಹಿಡಿದು ಬಲುದೂರ ಬಂದಾಗಿದೆ, ಅದೇ ದಾರಿಯಲ್ಲಿಯೇ ಮುಂದುವರೆಯುತ್ತೇನೆ ಮತ್ತು ವಚನ ಮಾರ್ಗದ ತತ್ವದ ದಾರಿಯನ್ನೇ ಹಿಡಿಯುತ್ತೇನೆ ಎಂದರೆ ಆಗದು. ಸರಿಯಾದುದ್ದನ್ನು ದಕ್ಕಿಸಿಕೊಳ್ಳಬೇಕಾದರೆ ಸರಿಯಿಲ್ಲದ ದಾರಿಯನ್ನು ತ್ಯಜಿಸಿ, ಸರಿಯಾದ ದಾರಿ ಹಿಡಿಯಬೇಕಾದದ್ದು, ಅನಿವಾರ್ಯ ಎಂದು ವಚನ ದರ್ಶನ ನಿತ್ಯ ಮತ್ತು ಸತ್ಯ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಪುಸ್ತಕವನ್ನು ಕುರಿತು ಸಾಹಿತಿ ರವೀಶ್ ಕ್ಯಾತನಬೀಡು ಅಭಿಪ್ರಾಯಿಸಿದರು.

ಇತ್ತೀಚೆಗೆ ಅನೇಕರು ವಚನ ಸಾಹಿತ್ಯದ ತಾತ್ವಿಕತೆಯನ್ನು ದಿಕ್ಕು ತಪ್ಪಿಸುವ ಕೆಲಸವನ್ನು ನಿರಂತರವಾಗಿ ನಡೆಸುತ್ತಿರುವುದು ದುರಂತ. ಪರೋಕ್ಷವಾಗಿ ಬ್ರಾಹ್ಮಣ್ಯದ ಏರಿಕೆಯ ಕ್ರಮವನ್ನು ಜರುಗಿಸುತ್ತಿರುವುದು ವಚನ ದರ್ಶನಕ್ಕೆ ಮಾಡುವ ಅಪಮಾನ. ಶತಮಾನದಿಂದಲೂ ಏರಿಕೆ ಕ್ರಮವನ್ನು ವಿರೋಧಿಸಿದ ವಚನಕಾರರು ಪ್ರಮಾಣ ನಿರಾಕರಣೆಯನ್ನು ಮಾಡುತ್ತಾ ವೇದ, ಆಗಮಗಳಿಗೆ ಒರೆಯ ಕಟ್ಟುವ ಮೂಲಕ ಪರಿಸರದ ವಿಜ್ಞಾನ, ಧರ್ಮವನ್ನು ನಮ್ಮ ನಡುವೆ ಬಿಟ್ಟು ಹೋಗಿದ್ದಾರೆ. ವಚನ ದರ್ಶನ ಪುಸ್ತಕದ ಹಿಂದೆ ಸ್ಥಾಪಿತ ಆರ್.ಎಸ್.ಎಸ್. ಇತರೆ ಸಂಘಟನೆಗಳು ಕೆಲಸ ಮಾಡುವಂತೆ ಕಾಣುತ್ತದೆ. ವಚನ ಸಾಹಿತ್ಯದ ನಡೆಕಾರರು ಈ ಎಚ್ಚರವನ್ನು ಗಮನಿಸಬೇಕಾಗಿದೆ. ಅವರು ಹೇಳುವ ಮಿಥ್ಯವನ್ನು ಕಳೆದು ವಚನ ಸತ್ಯವನ್ನು ಹೇಳಬೇಕಾಗಿದೆ ಎಂದರು.

ಸಾನಿಧ್ಯವನ್ನು ವಹಿಸಿದ್ದ ಸಾಣೇಹಳ್ಳಿ ಪಂಡಿತರಾಧ್ಯ ಶ್ರೀಗಳು ನಮ್ಮ ಹೊರಗಿನ ಶತ್ರುಗಳನ್ನು ಅರಗಿಸಿಕೊಳ್ಳಬಹುದು, ಆದ–ರೆ ಒಳಗಿನ ಶತ್ರುಗಳು ಅಪಾಯಕಾರಿ ಎನ್ನುತ್ತಲೇ ವೇದ, ಆಗಮಗಳಲ್ಲಿ ಇರಬಹುದಾದ ಮನುಷ್ಯ ಶೋಷಿತ ನಡುವಳಿಕೆಗಳ ವಿರುದ್ಧ ಕಾಯಕ ಧರ್ಮ, ದಾಸೋಹ ಧರ್ಮ, ಪ್ರಸಾದ ಧರ್ಮ, ಸ್ತ್ರೀ–ಸಮಾನತೆ, ಮೇಲು–ಕೀಳಿಲ್ಲದ ಶರಣ ಸಮಾಜವನ್ನು ಕಟ್ಟಿದವರು ಬಸವಾದಿ ಶರಣ–ರು.



ಹಿರಿಯ ಸಾಹಿತಿ ಎಂ.ಆರ್.ಶ್ರೀನಿವಾಸಮೂರ್ತಿ ಹೇಳುವಂತೆ ವಚನ ಸಾಹಿತ್ಯ ಎರವಲು ತಂದಿದ್ದಲ್ಲ, ಕನ್ನಡದ ಸ್ವಯಾರ್ಜಿತ ಸ್ವತ್ತು, ವಚನಕಾರರು ಸಂಸ್ಕೃತದ ಆಚಾರ್ಯರಲ್ಲ, ಅವರು ಅಚ್ಚ ಕನ್ನಡದ ಬೇಸಾಯಗಾರರು ಎನ್ನುವ ಮಾತಿನಂತೆ ವಚನ ದರ್ಶನ ಕನ್ನಡದ ಮೊಟ್ಟ ಮೊದಲ ಧರ್ಮ ಎಂದರು.

ಪುಸ್ತಕ ಬಿಡುಗಡೆಗೊಳಿಸಿ ಶಾಸಕ ತಮ್ಮಯ್ಯ ಮಾತನಾಡುತ್ತಾ ವಚನಗಳು ನಮ್ಮ ಬದುಕಿನ ದೀವಿಗೆಗಳು, ಆ ಬೆಳಕಿನಲ್ಲಿ ಈ ಸಮಾಜವನ್ನು ಕರೆದುಕೊಂಡು ಹೋಗಬೇಕಾಗಿದೆ. ಸಮ ಸಮಾಜದ ನಿರ್ಮಾಣವನ್ನು ಮಾಡಿದವರು ವಚನಕಾರರು ಎಂದರು.

ಕಾರ್ಯಕ್ರಮದಲ್ಲಿ ಪಾಂಡುಮಟ್ಟಿಯ ಗುರುಬಸವ ಸ್ವಾಮಿಗಳು ಹಾಗೂ ಬಸವ ಮಂದಿರದ ಡಾ.ಬಸವ ಮರುಳಸಿದ್ಧ ಶ್ರೀಗಳು ಮತ್ತು ಯಳನಾಡು ಮಠದ ಜ್ಞಾನಪ್ರಭು ಸಿದ್ಧರಾಮ ಶ್ರೀಗಳು ಆಶೀರ್ವಚನ ನೀಡಿ–ದರು.

ಕಾರ್ಯಕ್ರಮದಲ್ಲಿ ಜಾಗತಿಕ ಲಿಂಗಾಯತ ಮಹಾಸಭಾದ ರಾಜ್ಯ ವಿಭಾಗೀಯ ಮುಖ್ಯಸ್ಥರಾದ ಮಹಾದೇವಪ್ಪನವರು ಆಶಯ ನುಡಿದರು. ರಾಜ್ಯದ ಇನ್ನೋರ್ವ ಮುಖಂಡರಾದ ನಿವೃತ್ತ ನ್ಯಾಯಾಧೀಶರಾದ ಕೆಂಪಣ್ಣನವರು ಮಾತನಾಡಿದರು. ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷರಾದ ಗಂಗಾಧರ ಶಿವಪುರ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಡೂರು ವಿರೂಪಾಕ್ಷ ಕಾರ್ಯಕ್ರಮ ನಿರೂಪಿಸಿದರು. ಅಕ್ಕನ ಬಳಗ ಹಾಗೂ ಅನೇಕ ಬೇರೆ ಬೇರೆ ಸಂಘಟನೆಗಳು ವಚನ ಗಾಯನ ನಡೆಸಿಕೊಟ್ಟರು.

# ಹವಾಮಾನ ವೈಪರೀತ್ಯ, ಉತ್ಪಾದನೆಯಲ್ಲಿ ಕುಸಿತ: ಕಾಳು ಮೆಣಸಿನ ಬೆಲೆ ಕೆಜಿಗೆ 1000 ರೂ.ಗೆ ಏರಿಕೆ ?

**ಬೆಂಗಳೂರು:** ಕಳೆದ ಎರಡು ವರ್ಷಗಳಿಂದ ಶೇಕಡ 40 ರಷ್ಟು ದರ ಏರಿಕೆ ಕಂಡಿರುವ ಕರಿಮೆಣಸು ಪೂರೈಕೆ ಕೊರತೆ ಮತ್ತು ಬೇಡಿಕೆ ಹೆಚ್ಚಳದ ಪರಿಣಾಮ ಮತ್ತಷ್ಟು ದುಬಾರಿಯಾಗುವ ಸಾಧ್ಯತೆ ಇದೆ.

ಕಾಳು ಮೆಣಸು ದರ ಕೆಜಿಗೆ 900 ರಿಂದ 1,100 ರೂಪಾಯಿವರೆಗೆ ಏರಿಕೆಯಾಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ. ಕರ್ನಾಟಕದಲ್ಲಿ ಹವಾಮಾನ ಬದಲಾವಣೆ, ಅಕಾಲಿಕ ಮಳೆ, ಬೆಳೆಗೆ ರೋಗಬಾಧೆ ಇತ್ಯಾದಿ ಕಾರಣಗಳಿಂದ ಬೆಳೆ ಕುಸಿತವಾಗಿದೆ.

ಎರಡು ವರ್ಷಗಳ ಹಿಂದೆ ಕೆಜಿಗೆ ರೂ. 400–450 ರ ಆಸುಪಾಸಿನಲ್ಲಿದ್ದ ಮೆಣಸಿನ ಬೆಲೆ ಈಗ ರೂ. 700 ಕ್ಕೆ ಏರಿದೆ. ವಿಯೆಟ್ನಾಂ ಮತ್ತು ಬ್ರೆಜಿಲ್‌ನಂತಹ ದೇಶಗಳಲ್ಲಿ ಕೊಯ್ಲು ಕಡಿಮೆಯಾಗುವುದರಿಂದ ಜಾಗತಿಕ ಪೂ–ರೈಕೆ ಬಿಕ್ಕಟ್ಟು ಉಂಟಾಗಿದ್ದು, ಬೆಲೆಗಳ ಮೇಲೆ ಒತ್ತಡ ಹೆಚ್ಚಿದೆ ಎಂದು ಕರ್ನಾಟಕ ಸಾಂಬಾರು ಸಂಘ ಮತ್ತು ಚಿಕ್ಕಮಗಳೂರು ಪ್ಲಾಂಟರ್ಸ್ ಅಸೋಸಿಯೇಷನ್‌ನ ಪ್ಲಾಂಟರ್ಸ್ ಅಸೋಸಿಯೇಷನ್‌ನ ಪ್ಲಾಂಟರ್ಸ್ ಹೇಳಿದ್ದಾರೆ.

ಬರಗಾಲದಿಂದಾಗಿ ಹೂಬಿಡುವಿಕೆ ವಿಳಂಬವಾಯಿತು ಮತ್ತು ನಂತರ ಹಠಾತ್ ಮಳೆಯಿಂದಾಗಿ ಬೆಳೆಯ ಮೇಲೆ ಪರಿಣಾಮ ಬೀರಿತು. ಇದು ಒಟ್ಟಾರೆ ಉತ್ಪಾದನೆ ಮೇಲೆ ಮೇಲೆ ಪರಿಣಾಮ ಬೀರಿತ್ತು. ಇದರಿಂದಾಗಿ ಪ್ರಸಕ್ತ ಋತುವಿನಲ್ಲಿ ಉತ್ಪಾದನೆಯು ಶೇ 40 ರಷ್ಟು ಕುಸಿತ ಕಂಡಿದೆ ಎಂದು ಕರ್ನಾಟಕ ಸ್ಪೈಸ್ ಅಸೋಸಿಯೇಷನ್?ನ ಚಂದ್ರಶೇಖರ ರೆಡ್ಡಿ ತಿಳಿಸಿದ್ದಾರೆ. ಕಾಳು ಮೆಣಸು ಬೆಳೆಗೆ



ತೇವಾಂಶವುಳ್ಳ ಗಾಳಿ, ನೆರಳು ಪ್ರದೇಶ ಮತ್ತು ಚೆನ್ನಾಗಿ ನೀರಿನ ಅಂಶವಿರುವ ಮಣ್ಣು ಬೇಕಾಗುತ್ತದೆ. ಪಶ್ಚಿಮ ಘಟ್ಟಗಳು ಮತ್ತು ಸುತ್ತಲಿನ ಪ್ರದೇಶಗಳಲ್ಲಿ ಕರಿಮೆಣಸು ಉತ್ಪಾದನೆಗೆ ಪೂರಕ ವಾತಾವರಣ ಇವೆ.

ಆದರೂ, ಕರ್ನಾಟಕದ ಅತಿಹೆಚ್ಚು ಕರಿಮೆಣಸು ಬೆಳೆಯುವ ಪ್ರದೇಶಗಳಾದ ಕೊಡಗು, ಚಿಕ್ಕಮಗಳೂರುಗಳಲ್ಲಿ ಹವಾಮಾನ ಬದಲಾವಣೆಯ ಹೊಡೆತ ಬಿದ್ದಿದೆ. ಇದ–ರಿಂದಾಗಿ ಬೆಳೆಯಲ್ಲಿ ಸ್ಥಿರತೆ ಕಾಯ್ದುಕೊಳ್ಳುವುದು ಕಷ್ಟಕರವಾಗಿ ಪರಿಣಮಿಸಿದೆ ಎಂದು ಕೃಷಿಕರು ತಿಳಿಸಿದ್ದಾರೆ. ಮಣ್ಣಿನಲ್ಲಿ ತೇವಾಂಶದ ಮಟ್ಟದ ಏರುಪೇರಿನಿಂದಾಗಿ ಶಿಲೀಂಧ್ರ ಸೋಂಕುಗಳೂ ಹೆಚ್ಚಾಗಿವೆ. ಇದು ಬೆಳೆ ಕುಸಿತಕ್ಕೆ ಕಾರಣವಾಗಿದೆ ಎಂದೂ ಅವರು ತಿಳಿಸಿದ್ದಾರೆ.

ಒಂದು ಬಳ್ಳಿ ಸೋಂಕಿಗೆ ಒಳಗಾದ ನಂತರ, ವಿಶೇಷವಾಗಿ ಬೇರು ಕೊಳೆತದಿಂದ, ಸಂಪೂರ್ಣವಾಗಿ ಹಾಳಾಗುತ್ತದೆ. ಮರು ನಾಟಿ ಮಾಡಲು ವರ್ಷಗಳೇ ಬೇಕಾಗುತ್ತದೆ. ಹವಾಮಾನ ಅಸ್ಥಿರತೆಯೊಂದಿಗೆ, ಇದು ಇಳುವರಿಯಲ್ಲಿ ತೀವ್ರ ಕುಸಿತಕ್ಕೆ ಕಾರಣವಾಗಿದೆ" ಎಂದು ರೆಡ್ಡಿ ಹೇಳಿದರು.

ಮುಂದಿನ ಎರಡು ತಿಂಗಳವರೆಗೆ ಹೊಸ ಬೆಳೆ ಮಾರುಕಟ್ಟೆ ಪ್ರವೇಶಿಸುವ ಸಾಧ್ಯತೆ ಇಲ್ಲ. ಈ ಪೂರೈಕೆ ಬಿಕ್ಕಟ್ಟು ಮುಂಬರುವ ತಿಂಗಳುಗಳಲ್ಲಿ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಚಿಕ್ಕಮಗಳೂರು ಪ್ಲಾಂಟರ್ಸ್ ಅಸೋಸಿಯೇಷನ್‌ನ ಜಗದೀಶ ಎಂಕೆ ಅಭಿಪ್ರಾಯಪಟ್ಟಿದ್ದಾರೆ.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**